05 February 2026 Thursday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ
ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಜ್ಞಾನವು ಅಹಂಕಾರದ ಮಟ್ಟ ಮುಟ್ಟಿದರೆ, ಬುದ್ಧಿಮತ್ತೆ ಕ್ಷೀಣವಾಗುತ್ತಾ ಹೋಗುತ್ತದೆ!
-ಸ್ನೇಹಾ ಆನಂದ್

info.varthaman@gmail.com



ಆಹಾರ ಭದ್ರತಾ, ಸುರಕ್ಷತಾ ಅನುಷ್ಠಾನಕ್ಕೆ ಆಹಾರ ಆಯೋಗದ ಅಧ್ಯಕ್ಷರ ಸೂಚನೆ ಪುಟ ಸಂ. 2



ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಶಿವರಾತ್ರಿ ಜಾತ್ರೆ: ಸಿದ್ಧತೆ ಪರಿಶೀಲನೆ ಪುಟ ಸಂ. 3



ಪ್ರಜ್ಞಾವಂತ ನಾಗರಿಕರಿಂದ ಅವೈಜ್ಞಾನಿಕ ಬೃಹತ್ ಮೈಸೂರು ಆಕ್ಷೇಪಣೆ ಸಲ್ಲಿಕೆ ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್
VARTHAMAN Volume: 69 Issue: 91 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## ಬಾರ್ ಲೈಸೆನ್ಸ್‌ಗೆ 60 ಲಕ್ಷ ರೂ. ಲಂಚ ಲಂಚಕ್ಕೆ ಬೇಡಿಕೆ ಇಟ್ಟ ಆರೋಪ

# ಮಂಡ್ಯ ಅಬಕಾರಿ ಡಿಸಿ ನಾಗಶಯನ ಅಮಾನತ್ತು



**ಮಂಡ್ಯ:** ಬಾರ್ ಲೈಸೆನ್ಸ್ ನೀಡಲು 60 ರೂ. ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟ ಆರೋಪದ ಮೇಲೆ ಮಂಡ್ಯ ಜಿಲ್ಲಾ ಅಬಕಾರಿ ಉಪಆಯುಕ್ತ ನಾಗಶ ಯನ ಅವರನ್ನು ಸರ್ಕಾರ ಅಮಾನ ತುಗೊಳಿಸಿದೆ.

ಅರ್ಜಿದಾರ ಸುಂದರ್ ನೀಡಿದ ಲೋಕಾಯುಕ್ತ ದೂರು ಮತ್ತು ಸದನದಲ್ಲಿ ನಡೆದ ಚರ್ಚೆಯ ಹಿನ್ನೆಲೆಯಲ್ಲಿ ಈ ಶಿಸ್ತು ಕ್ರಮ ಕೈಗೊಳ್ಳಲಾಗಿದೆ. ರಾಜ್ಯ ರಾಜಕೀಯದಲ್ಲಿ ಅಬಕಾರಿ ಇಲಾಖೆಯ 6000 ಕೋಟಿ ಭ್ರಷ್ಟಾಚಾರದ ಆರೋಪ ದೊಡ್ಡ ಬಿರುಗಾಳಿ ಎಬ್ಬಿಸಿರುವ ಬೆನ್ನಲ್ಲೇ, ಮಂಡ್ಯದಲ್ಲಿಯೂ ಲಂಚ ಪ್ರಕರಣ ಬೆಳಕಿಗೆ ಬಂದಿದೆ.



### ಏನಿದು ಪ್ರಕರಣ ?

ಮಂಡ್ಯ ಜಿಲ್ಲೆಯ ಕೆ.ಆರ್. ಪೇಟೆ ತಾಲೂಕಿನ ಸೋಮನಹಳ್ಳಿ ಗ್ರಾಮದಲ್ಲಿ ಸುಂದರ್ ಎಂಬುವವರು ಹೊಸದಾಗಿ ಸಿಎಲ್-7 (ಅಐ-7) ಬಾರ್ ತೆರೆಯಲು ಪರವಾನಗಿ ಕೋರಿ ಅರ್ಜಿ ಸಲ್ಲಿಸಿದ್ದರು. ಆದರೆ, ಅಬಕಾರಿ ಅಧಿಕಾರಿಗಳು ಸಣ್ಣಪುಟ್ಟ ಕಾರಣಗಳನ್ನು ನೀಡಿ ಪದೇ ಪದೇ ಅರ್ಜಿಯನ್ನು ವಜಾ ಮಾಡುತ್ತಿದ್ದರು. ಅರ್ಜಿದಾರ ಸುಂದರ್ ಅವರು ಈ ಬಗ್ಗೆ ನ್ಯಾಯಾಲಯದ ಮೊರೆ ಹೋಗಿ, ನ್ಯಾಯಾಲಯದಿಂದ ಪರವಾನಗಿ ನೀಡುವಂತೆ ಆದೇಶ ತಂದಿದ್ದರೂ ಸಹ ಅಧಿಕಾರಿಗಳು ಲೈಸೆನ್ಸ್ ನೀಡಲು ನಿರಾಕರಿಸಿದ್ದರು ಎನ್ನಲಾಗಿದೆ.

ಈ ಪ್ರಕರಣವು ಪ್ರಸ್ತುತ ನಡೆಯುತ್ತಿರುವ ವಿಧಾನಸಭಾ ಅಧಿವೇಶನದಲ್ಲೂ ಭಾರಿ ಸದ್ದು ಮಾಡಿತ್ತು. ರಾಜ್ಯದಲ್ಲಿ ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಮತ್ತು ಜೆಡಿಎಸ್ ಶಾಸಕರು ಅಹೋರಾತ್ರಿ ಧರಣಿ ನಡೆಸುತ್ತಿರುವ ಸಂದರ್ಭದಲ್ಲೇ,

### ಅಧಿವೇಶನದಲ್ಲಿ ಚರ್ಚೆ

ಮಂಡ್ಯದ ಈ ಹಗರಣವು ಸರ್ಕಾರದ ಭ್ರಷ್ಟಾಚಾರದ ಮುಖವಾಡವನ್ನು ಬಯಲು ಮಾಡಿದೆ ಎಂದು ವಿರೋಧ ಪಕ್ಷಗಳು ವಾಗ್ದಾಳಿ ನಡೆಸಿದ್ದವು.

### ಲಂಚಕ್ಕೆ ಬೇಡಿಕೆ

ಪರವಾನಗಿ ನೀಡಬೇಕಾದರೆ 60 ಲಕ್ಷ ರೂ. ಲಂಚ ನೀಡಬೇಕು ಎಂದು ಉಪ ಆಯುಕ್ತ ನಾಗಶಯನ ಅವರು ಸುಂದರ್ ಅವರಿಗೆ ಬೇಡಿಕೆ ಇಟ್ಟಿದ್ದರು ಎಂದು ಆರೋಪಿಸಲಾಗಿದೆ. ಈ ಭ್ರಷ್ಟಾಚಾರದ ಆಡಿಯೋ ಸಂಭಾಷಣೆಯನ್ನು ರೆಕಾರ್ಡ್ ಮಾಡಿಕೊಂಡಿದ್ದ ಸುಂದರ್, ಲೋಕಾಯುಕ್ತಕ್ಕೆ ದೂರು ನೀಡಿದ್ದರು.

## ಲಿಂಗಾಯತ ಸಚಿವರು, ಶಾಸಕರ ಸಭೆ

**ಸಮುದಾಯದ ಹಿತರಕ್ಷಣೆ ಬಗ್ಗೆ ಚರ್ಚೆ: ಸಚಿವ ಎಂ.ಬಿ.ಪಾಟೀಲ್**

**ಬೆಂಗಳೂರು:** ಲಿಂಗಾಯತ ಸಮುದಾಯದ ಹಿತರಕ್ಷಣೆಗಾಗಿ ಕಾಂಗ್ರೆಸ್ ಪಕ್ಷದ ಲಿಂಗಾಯತ ಶಾಸಕರ ಸಭೆ ನಡೆದಿರುವುದು ನಿಜ. ಇದರಲ್ಲಿ ನಾಯಕತ್ವದ ವಿಚಾರ ಅಥವಾ ವೈಯಕ್ತಿಕ ಅಜೆಂಡಾಗಳಾಗಲಿ ಇರಲಿಲ್ಲ ಎಂದು ಲಿಂಗಾಯತ ನಾಯಕರಾದ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ವಿಧಾನಸೌಧದ ಆವರಣದಲ್ಲಿ ಬುಧವಾರ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದರು. ಮಾಧ್ಯಮಗಳ ಪ್ರಶ್ನೆಗಳಿಗೆ ಅವರು ಉತ್ತರಿಸಿದ ಅವರು, ಎಲ್ಲಾ ಸಮುದಾಯಗಳ ಶಾಸಕರೂ ಹೀಗೆ ಆಗಿಂದಾಗ ಸಭೆ ಸೇರುವುದು ಸಾಮಾನ್ಯ ವಿಚಾರ ಎಂದು ತಿಳಿಸಿದರು.



ಲಿಂಗಾಯತರು ರಾಜ್ಯದ ಅತ್ಯಂತ ದೊಡ್ಡ ಸಮುದಾಯವಾಗಿದೆ. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು 57 ಜನರಿಗೆ ಟಿಕೆಟ್ ನೀಡಿತ್ತು. ಇವರಲ್ಲಿ ಸಮುದಾಯದ 34 ಶಾಸಕರು ಗೆದ್ದಿದ್ದಾರೆ. ಇವರಲ್ಲಿ 28 ಶಾಸಕರು ಸಭೆಯಲ್ಲಿ ಭಾಗವಹಿಸಿದ್ದರು. ಸಚಿವರ ಪೈಕಿ ಎಸ್.ಎಸ್. ಮಲ್ಲಿಕಾರ್ಜುನ ಮತ್ತು ಶರಣಬಸಪ್ಪ ದರ್ಶನಾಪುರ ಮಾತ್ರ ಅನಿವಾರ್ಯ ಕಾರಣಗಳಿಂದ ಬಂದಿರಲಿಲ್ಲ. ಉಳಿದ ಎಲ್ಲ ಲಿಂಗಾಯತ ಸಚಿವರೂ ಭಾಗವಹಿಸಿದ್ದರು ಎಂದು ತಿಳಿಸಿದರು.

ಬಿಜೆಪಿ ಕೂಡ ಹೋದ ಚುನಾವಣೆಯಲ್ಲಿ 70 ಲಿಂಗಾಯತರಿಗೆ ಟಿಕೆಟ್ ಕೊಟ್ಟಿತ್ತು. ಆ ಪಕ್ಷದಿಂದಲೂ 17 ಜನ ಲಿಂಗಾಯತರು ಶಾಸಕರಾಗಿದ್ದಾರೆ. ಲಿಂಗಾಯತ ಸಮುದಾಯಕ್ಕೆ ಸರ್ಕಾರದಿಂದ ನಾನಾ ಹಂತಗಳಲ್ಲಿ ಸಿಗಬೇಕಾದ ನ್ಯಾಯಬದ್ಧ ಪ್ರಾತಿನಿಧ್ಯ ಮುಂತಾದ ವಿಚಾರ ಕುರಿತು ಸಭೆಯಲ್ಲಿ ವಿಚಾರ ವಿನಿಮಯ ನಡೆ

# ಅಬಕಾರಿ ಗದ್ದಲಕ್ಕೆ ಕಲಾಪ ಬಲಿ

## ಸಚಿವ ತಿಮ್ಮಾಪುರ ರಾಜೀನಾಮೆಗೆ ಆಗ್ರಹಿಸಿ ವಿಪಕ್ಷಗಳ ಕೋಲಾಹಲ

**ಬೆಂಗಳೂರು:** ಅಬಕಾರಿ ಇಲಾಖೆಯಲ್ಲಿ 6 ಸಾವಿರ ಕೋಟಿ ಹಗರಣ ನಡೆದಿದೆ. ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಹಗರಣದಲ್ಲಿ ಭಾಗಿಯಾಗಿದ್ದಾರೆ. ಸಚಿವ ಸ್ಥಾನಕ್ಕೆ ತಿಮ್ಮಾಪುರ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ಪ್ರತಿಪಕ್ಷಗಳು ವಿಧಾನಸಭೆಯಲ್ಲಿ ಬುಧವಾರ ಭಾರೀ ಗದ್ದಲ ನಡೆಸಿದವು. ಸದನದಲ್ಲಿ ಗದ್ದಲ, ಕೋಲಾಹಲದ ವಾತಾವರಣ ಸೃಷ್ಟಿಯಾಗಿತ್ತು.

ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಸದನದಲ್ಲಿ ಪ್ರತಿಭಟನೆ ನಡೆಸಿ ಸಚಿವ ಆರ್.ಬಿ. ತಿಮ್ಮಾಪುರ ರಾಜೀನಾಮೆಗೆ ಆಗ್ರಹಿಸಿದರು. ತಿಮ್ಮಾಪುರ ಅವರು ತಮ್ಮ ಹಾಗೂ ತಮ್ಮ ಪುತ್ರನ ವಿರುದ್ಧ ಮದ್ಯ ಪರವಾನಗಿ ನೀಡಿಕೆ ಮತ್ತು ಅಧಿಕಾರಿಗಳ ವರ್ಗಾವಣೆಯಲ್ಲಿ ಭ್ರಷ್ಟಾಚಾರದ ಆರೋಪಗಳ ಹಿನ್ನೆಲೆಯಲ್ಲಿ ರಾಜೀನಾಮೆ ನೀಡಲು ಮಂಗಳವಾರ ನಿರಾಕರಿಸಿದ್ದರು.

ಈ ಹಿನ್ನೆಲೆಯಲ್ಲಿ ವಿರೋಧ ಪಕ್ಷದ ನಾಯಕರು ವಿಧಾನಸಭೆಯಲ್ಲಿ ಅಹೋರಾತ್ರಿ ಧರಣಿ ನಡೆಸಿದರು. ಬುಧವಾರ ಬೆಳಗ್ಗೆ ಸದನ ಆರಂಭವಾಗುತ್ತಿದ್ದಂತೆ, ಸದನದ ಮಧ್ಯಭಾಗದಲ್ಲಿದ್ದ ಬಿಜೆಪಿ ಮತ್ತು ಜೆಡಿಎಸ್ ಶಾಸಕರು ತಿಮ್ಮಾಪುರ ರಾಜೀನಾಮೆಗೆ ಆಗ್ರಹಿಸಿ ಘೋಷಣೆಗಳನ್ನು ಕೂಗಿದರು. ಸದನ ವಿಪಕ್ಷಗಳ ಗಲಾಟೆಗೆ ಬಲಿಯಾಯಿತು.

ವಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಅಬಕಾರಿ ಇಲಾಖೆಯಲ್ಲಿ ಪರವಾನಗಿ ನೀಡಲು ಹಾಗೂ ವರ್ಗಾವಣೆಗೆ ಲಂಚ ಪಡೆಯಲಾಗುತ್ತಿದೆ. ಮದ್ಯ ವ್ಯಾಪಾರಿಗಳ ಸಂಘವು ಅಬಕಾರಿ ಇಲಾಖೆಯ ಹಗರಣ ಸುಮಾರು 6,000 ಕೋಟಿ ರೂಪಾಯಿ ಮೊತ್ತದಷ್ಟು ಇದೆ ಎಂದು ಆರೋಪಿಸಿದೆ. ಇದಕ್ಕೆ ಪುಟ 2ಕ್ಕೆ



### ಸಿಎಂಗೆ ನೈತಿಕತೆ ಇದೆಯೇ?

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಎಲ್ಲೆಡೆ ನೈತಿಕತೆ ಬಗ್ಗೆ ಮಾತನಾಡುತ್ತಾರೆ. ಆದರೆ ಅವರಿಗೆ ನೈತಿಕತೆ ಇದೆಯೇ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಪ್ರಶ್ನಿಸಿದರು.

ಮುಖ್ಯಮಂತ್ರಿಗಳು ತಕ್ಷಣ ಅಬಕಾರಿ ಸಚಿವರ ರಾಜೀನಾಮೆ ಪಡೆಯಲಿ. ತನಿಖೆ ನಡೆಯಲಿ. ಮೂರು ತಿಂಗಳ ನಂತರ ಅವರು ನಿರ್ದೋಷಿ ಎಂದು ಸಾಬೀತಾದರೆ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳಿ ಎಂದು ಅಶೋಕ್ ಒತ್ತಾಯಿಸಿದರು.

ಹಿಂದೆ ಕಾಂಗ್ರೆಸ್‌ನ ಕೆ.ಜೆ.ಜಾರ್ಜ್ ಹಾಗೂ ಬಿಜೆಪಿಯಲ್ಲಿದ್ದ ಕೆ.ಎಸ್.ಈಶ್ವರಪ್ಪ ಅವರು ಆರೋಪಗಳ ಹಿನ್ನೆಲೆಯಲ್ಲಿ ಸಚಿವ

### ನಾನೇಕೆ ರಾಜೀನಾಮೆ ಕೊಡಲಿ?

**ಸಾಕಷ್ಟು ಸುಧಾರಣೆ ತಂದಿದ್ದೇನೆ: ಸಚಿವ ತಿಮ್ಮಾಪುರ ತಿರುಗೇಟು**

**ಬೆಂಗಳೂರು:** ಅಧಿಕಾರಿಯೊಬ್ಬ ತಪ್ಪು ಮಾಡಿ ಸಿಕ್ಕಿಬಿದ್ದರೆ ನಾನೇಕೆ ರಾಜೀನಾಮೆ ಕೊಡಬೇಕು? ನಾನು ಯಾವುದೇ ತಪ್ಪೂ ಮಾಡಿಲ್ಲ. ರಾಜೀನಾಮೆ ಪ್ರಶ್ನೆಯೇ ಇಲ್ಲ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ

ಖಡಕ್ ಆಗಿ ವಿಪಕ್ಷಗಳಿಗೆ ತಿರುಗೇಟು ನೀಡಿದ್ದಾರೆ. ನಾನು ಅಬಕಾರಿ ಸಚಿವನಾದ ಮೇಲೆ ಇಲಾಖೆಯಲ್ಲಿ ಸಾಕಷ್ಟು ಸುಧಾರಣೆಗಳನ್ನು ತಂದಿದ್ದೇನೆ. ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿದ್ದೇನೆ. ನಾನು ಪ್ರಕ್ರಿಯೆಯನ್ನು ಸರಳೀಕರಿಸಿದ್ದೇನೆ. ಕೌನ್ಸೆಲಿಂಗ್ ವ್ಯವಸ್ಥೆಯನ್ನು ತಂದಿದ್ದೇನೆ. ಪುಟ 2ಕ್ಕೆ

## ಮಾನ ಮರ್ಯಾದೆ ಇದೆಯಾ?

**ಬಿಜೆಪಿ ಸದಸ್ಯರಿಗೆ ಶಾಸಕ ಶಿವಲಿಂಗೇಗೌಡ ರೊಚ್ಚಿಗೆದ್ದು ತರಾಟೆ**



ಬೆಂಗಳೂರು: ವಿಪಕ್ಷಗಳ ವಿರುದ್ಧ ಕಾಂಗ್ರೆಸ್ ಶಾಸಕ ಕೆ.ಎಂ.ಶಿವಲಿಂಗೇಗೌಡ ರೊಚ್ಚಿಗೆದ್ದು ತರಾಟೆಗೆ ತೆಗೆದುಕೊಂಡರು. ಬಿಜೆಪಿ ಸದಸ್ಯ ಶರಣು ಸಲಗಾರ್ ಸೇರಿದಂತೆ ಇತರರ ವಿರುದ್ಧ ಬುಧವಾರ ಸದನದಲ್ಲಿ ವಾಗ್ದಾಳಿ ನಡೆಸಿದರು.

ವಿಧಾನಸಭೆಯಲ್ಲಿ ಬಿಜೆಪಿ ನಾಯಕರ ವಿರುದ್ಧ ಕೆಂಡಕಾರಿದ ಶಾಸಕ ಶಿವಲಿಂಗೇಗೌಡ, ನಿಮಗೆ ಏನಾದರೂ ಮಾನ ಮರ್ಯಾದೆ ಇದೆಯಾ? ಇದು ಅಸೆಂಬ್ಲಿನಾ ಅಥವಾ ಡ್ಯಾನ್ಸ್ ಮಾಡೋಕೆ ಬಂದಿದ್ದೀರಾ? ನಾವೂ ಧರಣಿ ಮಾಡುತ್ತೇವೆ. ಆದರೆ ಈ ರೀತಿಯಾಗಿ ಮಾಡಿಲ್ಲ. ನಿಮ್ಮತರ ಕೆಟ್ಟ ಜನರನ್ನ ನಾನು ಎಲ್ಲಿಯೂ ನೋಡಿಲ್ಲ. ಲೇ ಅರೆಸ್ಸೆಸ್ಸು.. ಆರೆಸ್ಸೆಸ್ಸು.. ಥೂ ನಿಮ್ ಯೋಗ್ಯತೆಗೆ ಬೆಂಕಿ ಹಾಕ? ಎಂದು ಹಿಗ್ಗಾಮುಗ್ಗ ಜಾಡಿಸಿದರು.


ಅಬಕಾರಿ ಹಗರಣದ ಹೊಣೆಹೊತ್ತು ಸಚಿವ ತಿಮ್ಮಾಪುರ ರಾಜೀನಾಮೆ ನೀಡಬೇಕೆಂದು ಬಿಜೆಪಿ ಸದಸ್ಯರು ಸದನದ ಬಾವಿಗಿಳಿದು ಬುಧವಾರ ಪ್ರತಿಭಟನೆ ನಡೆಸುತ್ತಿದ್ದರು. ಈ ಸಂದರ್ಭದಲ್ಲಿ ಕಠಿಣ ಪದಗಳನ್ನ ಬಳಸಿ ಶಿವಲಿಂಗೇಗೌಡ ಅವರು ಹಿಗ್ಗಾಮುಗ್ಗಾ ವಾಗ್ದಾಳಿ ನಡೆಸಿದರು. ಇಂತಹ ಕೆಟ್ಟ ವಿಪಕ್ಷವನ್ನು ನಾನು ಹಿಂದೆಂದೂ ನೋಡಿಲ್ಲ. ರೀ ಅಧ್ಯಕ್ಷರೇ ಇವರನ್ನ ಹೊರಗೆ ಹಾಕಿ. ನಾವು ವಿಬಿಜಿರಾಮ್‌ಜಿ ಬಗ್ಗೆ ಚರ್ಚೆ ಮಾಡೋಣ. ಪುಟ 2ಕ್ಕೆ

### ಕ್ಷಮೆಗೆ ಬಿಜೆಪಿ ಆಗ್ರಹ

ಶಾಸಕ ಶಿವಲಿಂಗೇಗೌಡ ಅವರು, ಸದನದಲ್ಲಿ ಏಕವಚನದಲ್ಲಿ ಸದಸ್ಯರನ್ನು ನಿಂದಿಸಿದ್ದಾರೆ. ವಿಪಕ್ಷ ನಾಯಕರನ್ನು ಈ ರೀತಿ ಬೈದಿದ್ದು ಸರಿಯಲ್ಲ. ಅವರು ಕ್ಷಮೆ ಕೇಳಬೇಕು ಎಂದು ಬಿಜೆಪಿ ಸದಸ್ಯರು ಆಕ್ರೋಶ ವ್ಯಕ್ತಪಡಿಸಿದರು.

## ಕೇಂದ್ರದ ನಡೆ ಪ್ರಜಾಪ್ರಭುತ್ವ ವಿರೋಧಿ

### ವಿಪಕ್ಷ ನಾಯಕರ ಧ್ವನಿ ಅಡಗಿಸುವ ಯತ್ನ: ಸಿಎಂ ಸಿದ್ದರಾಮಯ್ಯ ಕಿಡಿ



**ಬೆಂಗಳೂರು:** ಸಂಸತ್ತಿನಲ್ಲಿ ವಿರೋಧ ಪಕ್ಷದ ನಾಯಕನ ಧ್ವನಿ ಅಡಗಿಸುವ ಯತ್ನ ನಡೆಯುತ್ತಿರುವುದು ಆತಂಕಕಾರಿ ಬೆಳವಣಿಗೆ ಮುಖ್ಯಮಂತ್ರಿ ಸಿದ್ದ ರಾಮಯ್ಯ ಕಿಡಿಕಾರಿದ್ದಾರೆ.

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಸದನದಲ್ಲಿ ಮಾತನಾಡಲು ಅವಕಾಶ ನೀಡದ ಬಗ್ಗೆ ಅವರು, ಪ್ರಜಾಪ್ರಭುತ್ವದ ಆಶಯಕ್ಕೆ ವಿರುದ್ಧವಾಗಿರುವ ಆಡಳಿತ ಪಕ್ಷದ ಈ ನಡೆಯನ್ನು ತೀವ್ರವಾಗಿ ಖಂಡಿಸುತ್ತೇನೆ ಎಂದು ಪೋಸ್ಟ್ ಮಾಡಿ ಟೀಕಿಸಿದ್ದಾರೆ.

ರಾಹುಲ್ ಗಾಂಧಿಯವರು ಮಾಜಿ ಸೇನಾ ಮುಖ್ಯಸ್ಥ ಎಂ.ಎಂ.ನರವಣೆಯವರ 'ಫೋರ್ ಸ್ಟಾರ್ಸ್ ಆಫ್ ಡೆಸ್ಟಿನಿ' ಎಂಬ ಪುಸ್ತಕದಲ್ಲಿನ ವಿಷಯಗಳನ್ನು ಉಲ್ಲೇಖಿಸಿ ರಾಷ್ಟ್ರೀಯ ಭದ್ರತೆಯ ಕುರಿತು ಕೆಲವು ಪ್ರಮುಖ ಪ್ರಶ್ನೆಗಳನ್ನು ಎತ್ತಿದ್ದರು. ಈ ಪುಸ್ತಕವು 2024ರಲ್ಲೇ ಬಿಡುಗಡೆಯಾಗಬೇಕಿತ್ತು, ಆದರೆ, ಕೇಂದ್ರ ಸರ್ಕಾರ ಇದರ ಬಿಡುಗಡೆಗೆ ತಡೆಯೊಡ್ಡಿರುವ ಕಾರಣಕ್ಕೆ ಇನ್ನೂ ಪ್ರಕಟವಾಗಿಲ್ಲ. ಕಾರವಾನ್ ಮ್ಯಾಗಜೀನ್‌ನ ಲೇಖನದಲ್ಲಿ ಈ ಪುಸ್ತಕದ ಕೆಲವು ಬರಹಗಳನ್ನು ಉಲ್ಲೇಖಿಸಲಾಗಿದೆ. ನರವಣೆಯವರು ಕಾರವಾನ್‌ನ ಲೇಖನದಲ್ಲಿ ಪ್ರಕಟಗೊಂಡಿರುವ ವಿಚಾರಗಳು ತಮ್ಮದಲ್ಲ ಎಂದು ಅಲ್ಲಗಳೆದಿಲ್ಲ. ಬದಲಿಗೆ, ತಮ್ಮ ಪುಸ್ತಕ ಬಿಡುಗೆಯಾಗಲು ಸರ್ಕಾರದ ಅನುಮತಿಗಾಗಿ ಕಾಯುತ್ತಿದ್ದೇನೆ ಎಂದು ಸಾರ್ವಜನಿಕವಾಗಿ ಹೇಳಿದ್ದಾರೆ ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ.

ಸರ್ಕಾರದ ದ್ವಂದ್ವ ನಿಲುವಿನಿಂದ ಸೇನಾ ಪಡೆಗಳು ಎರಡು ರಾಷ್ಟ್ರಗಳ ನಡುವಿನ ರಾಜಕೀಯ ಸಂದಿಗ್ಧತೆಯನ್ನು ಪುಟ 2ಕ್ಕೆ

## ದಲಿತ ಸಚಿವರಿಗೆ ಬಿಜೆಪಿ ತೊಂದರೆ: ಡಿಕೆಶಿ ಆರೋಪ


**ಬೆಂಗಳೂರು:** ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ರಾಜೀನಾಮೆಗೆ ಆಗ್ರಹಿಸುತ್ತಿರುವ ಬಿಜೆಪಿ ನಾಯಕರು ದಲಿತ ಸಚಿವನಿಗೆ ತೊಂದರೆ ನೀಡಲು ಈ ರೀತಿ ಮಾಡುತ್ತಿದ್ದಾರೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕಿಡಿಕಾರಿದರು.



ವಿಧಾನಸೌಧದ ಆವರಣದಲ್ಲಿ ಸುದ್ದಿಗಾರರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, ಬಿಜೆಪಿ ಕಾಲದಲ್ಲಿ ಪಿಎಸ್‌ಐ ಪುಟ 2ಕ್ಕೆ

## 6 ಸಾವಿರ ಕೋಟಿ ಅಬಕಾರಿ ಹಗರಣ: ವಿಜಯೇಂದ್ರ ಆರೋಪ

**ಬೆಂಗಳೂರು:** ಅಬಕಾರಿ ಇಲಾಖೆಯಲ್ಲಿ ಬರೋಬ್ಬರಿ 6 ಸಾವಿರ ಕೋಟಿ ಹಗರಣ ನಡೆದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದರು.



ವಿಧಾನಸೌಧದ ಬಳಿ ಮಾಧ್ಯಮಗಳ ಜೊತೆ ಮಾತನಾಡಿದ ಶಾಸಕ ವಿಜಯೇಂದ್ರ, ಸಿದ್ದರಾಮಯ್ಯ ಸರ್ಕಾರ ಬಹಳ ಭಂಡತನದಿಂದ ನಡೆದುಕೊಳ್ಳುತ್ತಿದೆ. ಹಗರಣಗಳ ಅಲೆಯಲ್ಲಿ ಸಿಲುಕಿಕೊಂಡಿದೆ. ಹಗರಣ ಅಬಕಾರಿ ಇಲಾಖೆವರೆಗೂ ಬಂದು ತಲುಪಿದೆ. ಮನಸೋ ಇಚ್ಛೆ ಬೇಕಾಬಿಟ್ಟಿ ಲಿಕ್ಕರ್ ಲೆಸೆನ್ಸ್ ಕೊಡ್ತಾ ಇದ್ದಾರೆ. ಇಷ್ಟು ಭ್ರಷ್ಟಾಚಾರ ಯಾವುದೇ ಇಲಾಖೆ ನಡೆದಿರಲಿಲ್ಲ. 6 ಸಾವಿರ ಕೋಟಿ ಹಗರಣ ಆಗಿದೆ. ಆಡಿಯೋ ಟೇಪ್ ನಲ್ಲಿ ಅಬಕಾರಿ ಸಚಿವರ ಹೆಸರು ಬಂದಿದೆ ಎಂದು ಕಿಡಿಕಾರಿದರು.

ಡಿವೈಎಸ್‌ಪಿ ಗಣಪತಿ ಆತ್ಮಹತ್ಯೆ ಕೇಸ್‌ನಲ್ಲಿ ಕೆ.ಜೆ.ಜಾರ್ಜ್ ರಾಜೀನಾಮೆ ಕೊಟ್ಟಿದ್ದರು. ಅಬಕಾರಿ ಸಚಿವರ ವಿರುದ್ಧ ಸೂಕ್ತ ಸಿಎಂ ತೆಗೆದುಕೊಳ್ಳಬೇಕು. ಮೊದಲು ರಾಜೀನಾಮೆ ಪಡೆದು ನಂತರ ತನಿಖೆ ಆಗಲಿ. ಅವರು ಭ್ರಷ್ಟಾಚಾರ ನಡೆಸಿಲ್ಲ ಎಂದಾದರೆ ಮತ್ತೆ ಬರಲಿ. ಸರ್ಕಾರ ಕೂಡಲೇ ರಾಜೀನಾಮೆ ಪಡೆಯದಿದ್ದರೆ ಹೋರಾಟ ಎಂದು ಎಚ್ಚರಿಸಿದರು.

## ಪರಿಶಿಷ್ಟ ಸಚಿವರು, ಶಾಸಕರು ಗೌಪ್ಯ ಸಭೆ

**ಗ್ಯಾರಂಟಿ ಯೋಜನೆಗಳಿಗೆ ಎಸ್‌ಸಿಪಿ-ಟಿಎಸ್‌ಪಿ ನಿಧಿ ಬಳಕೆಗೆ ಸ್ವಪಕ್ಷೀಯರ ವಿರೋಧ**

**ಬೆಂಗಳೂರು:** ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಗಿರಿಜನ ಉಪ ಯೋಜನೆ ಅನುದಾನವನ್ನು ಬಳಕೆ ಮಾಡುತ್ತಿರುವ ಬಗ್ಗೆ ಕಾಂಗ್ರೆಸ್ ಶಾಸಕರು ಮತ್ತು ಸಚಿವರಿಂದಲೇ ಅಸಮಾಧಾನ ವ್ಯಕ್ತವಾಗಿದೆ.

ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ಕಾಂಗ್ರೆಸ್ ಸಚಿವರು ಹಾಗೂ ಶಾಸಕರು ಮಂಗಳವಾರ ರಾತ್ರಿ ಬೆಂಗಳೂರಿನಲ್ಲಿ ಗೌಪ್ಯ ಸಭೆ ನಡೆಸಿದ್ದಾರೆ. ಸಭೆಯಲ್ಲಿ ಈ ಸಂಬಂಧ ಅಸಮಾಧಾನ ವ್ಯಕ್ತಪಡಿಸಿದ್ದಾರೆಂದು ತಿಳಿದುಬಂದಿದೆ. ವಿಧಾನಮಂಡಲ ಅಧಿವೇಶನ ಮುಕ್ತಾಯವಾಗವ ಹಿಂದಿನ ರಾತ್ರಿ ಈ ಸಭೆ ನಡೆದಿದೆ. ಎಸ್‌ಸಿ ಮತ್ತು ಎಸ್‌ಟಿ ಸಮುದಾಯಗಳಿಗೆ ಅವರ ಹಕ್ಕಿನ ಅನುದಾನ ಸಿಗುತ್ತಿಲ್ಲ. ಇದು ದೊಡ್ಡ ಮಟ್ಟದ ನಿರಾಸೆ ಮತ್ತು ಮೋಸ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಸಭೆಯಲ್ಲಿ ಪ್ರಮುಖವಾಗಿ, ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ಒದಗಿಸುವ ಶಕ್ತಿ ಯೋಜನೆ ಸೇರಿದಂತೆ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಗೆ ಎಸ್‌ಸಿಪಿ/ಟಿಎಸ್‌ಪಿ ನಿಧಿಗಳನ್ನು ಬಳಸಲಾಗುತ್ತಿದೆ ಎಂಬ ವಿಚಾರ ಚರ್ಚೆಗೆ ಬಂದಿದೆ.

ಈ ಅನುದಾನವನ್ನು ನೇರವಾಗಿ ದಲಿತರು ಮತ್ತು ಆದಿವಾಸಿಗಳ ಸಬಲೀಕರಣಕ್ಕೆ ಬಳಸಬೇಕಾಗಿತ್ತು. ಇತರ ಯೋಜನೆಗಳಿಗೆ ವರ್ಗಾವಣೆ ಮಾಡಿರುವುದನ್ನು ಪುಟ 2ಕ್ಕೆ

### ಸಚಿವರೊಬ್ಬರ ಸಮರ್ಥನೆ!

ಗ್ಯಾರಂಟಿ ಯೋಜನೆಗಳಲ್ಲಿಯೂ ಎಸ್‌ಸಿ/ಎಸ್‌ಟಿ ಫಲಾನುಭವಿಗಳಿಗೆ ಮಾತ್ರ ಈ ಹಣ ಬಳಸಲಾಗುತ್ತಿದೆ. ಯಾವುದೇ ದುರುಪಯೋಗವಾಗಿಲ್ಲ ಎಂದು ಸಭೆಯಲ್ಲಿದ್ದ ಸಚಿವರೊಬ್ಬರು ಸಮರ್ಥಿಸಿಕೊಂಡಿದ್ದಾರೆ. ಅವರು ಈ ವಿಚಾರದಲ್ಲಿ ಈ ಹಿಂದೆ ಸರ್ಕಾರದ ನಿಲುವನ್ನು ಸಮರ್ಥಿಸಿಕೊಂಡಿದ್ದರು. ಕಾಯ್ದೆಯ ಸೆಕ್ಷನ್ 7ಅ ಅಡಿಯಲ್ಲಿ, ಎಸ್‌ಸಿ/ಎಸ್‌ಟಿ ಸಮುದಾಯಕ್ಕೂ ಲಾಭವಾಗುವ ಯೋಜನೆಗಳಿಗೆ ಅನುಪಾತದಂತೆ ನಿಧಿ ಬಳಸಲು ಅವಕಾಶವಿದೆ ಎಂದು ಸಚಿವರು ಹೇಳಿದ್ದರು.

# ರಾಜ್ಯದ ಬಾಕಿ ರೈಲ್ವೆ ಯೋಜನೆಗಳ ಜಾರಿ

## ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಭೇಟಿ ಮಾಡಿ ಎಚ್.ಡಿ.ಕುಮಾರಸ್ವಾಮಿ ಚರ್ಚೆ

**ನವದೆಹಲಿ:** ಮಂಡ್ಯ ಲೋಕಸಭೆ ಕ್ಷೇತ್ರಕ್ಕೆ ಸಂಬಂಧಿಸಿದಂತೆ ರೈಲ್ವೆ ಮೂಲಸೌಕರ್ಯ ಅಭಿವೃದ್ಧಿ ಪಡಿಸುವ ಹಾಗೂ ರಾಜ್ಯದ ಬಾಕಿ ಉಳಿದಿರುವ ರೈಲ್ವೆ ಯೋಜನೆಗಳ ಜಾರಿ ಬಗ್ಗೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್ ಭೇಟಿ ಮಾಡಿ ಚರ್ಚೆ ನಡೆಸಿದ್ದಾರೆ.

ಈಗಾಗಲೇ ರಾಜ್ಯಕ್ಕೆ 2 ಹೈಸ್ಪೀಡ್ ರೈಲು ಕಾರಿಡಾರ್‌ಗಳನ್ನು ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿದೆ. ಹೆಚ್ಚುವರಿಯಾಗಿ ಬೆಂಗಳೂರು-ಪುಣೆ ಹೈಸ್ಪೀಡ್ ರೈಲು ಕಾರಿಡಾರ್ ನೀಡಲಾಗಿದೆ. ಈ ಮಾರ್ಗವು ಹುಬ್ಬಳ್ಳಿ, ಬೆಳಗಾವಿ ಮೂಲಕ ಹಾದು ಹೋಗಲಿದೆ ಎಂದು ರೈಲ್ವೆ ಸಚಿವರು ತಿಳಿಸಿದರು ಎಂದು ಎಚ್.ಡಿ.ಕುಮಾರಸ್ವಾಮಿ ಮಾಹಿತಿ ನೀಡಿದ್ದಾರೆ.

ಬೆಂಗಳೂರು-ಮುಂಬೈಗೆ ಹೊಸ ರೈಲು ಆರಂಭಿಸಲಾಗುವುದು ಎನ್ನುವ ಮಾಹಿತಿಯನ್ನು ರೈಲ್ವೆ ಸಚಿವರು ತಮಗೆ ಮಾಹಿತಿ ನೀಡಿದರು. ಬೆಂಗಳೂರು-ಪುಣೆ ಹೈಸ್ಪೀಡ್ ರೈಲು ಕಾರಿಡಾರ್ ಹಾಗೂ ಬೆಂಗಳೂರು-ಮುಂಬೈ ನಡುವಿನ ಹೊಸ ರೈಲಿನಿಂದ ಕರ್ನಾಟಕಕ್ಕೆ ಮತ್ತಷ್ಟು ಅನುಕೂಲ ಆಗಲಿದೆ ಎಂದು ತಿಳಿಸಿದರು.



ಹೊಸ ರೈಲು ಸಂಪರ್ಕ ಮತ್ತು ಹಾಲಿ ರೈಲು ಮಾರ್ಗಗಳಲ್ಲಿ ವನ್ಯಜೀವಿಗಳ ಅಪಘಾತಗಳನ್ನು ತಡೆಗಟ್ಟಲು ರೈಲ್ವೆ ಬೇಲಿ ಮತ್ತು ಬ್ಲಾಕ್ ಕಾರಿಡಾರ್‌ಗಳ ಅನುಷ್ಠಾನದ ಕುರಿತು ವಿವರವಾದ ಮಾತುಕತೆ ನಡೆಸಲಾಯಿತು ಎಂದು ಹೇಳಿದರು.

### ಮಂಡ್ಯದಲ್ಲಿ ರೈಲ್ವೆ ಮೂಲಸೌಕರ್ಯ

ಮಂಡ್ಯ ಲೋಕಸಭೆ ಕ್ಷೇತ್ರವೂ ಸೇರಿದಂತೆ ಕರ್ನಾಟಕದ ಎಲ್ಲಾ ಬಾಕಿ ಇರುವ ರೈಲ್ವೆ ಯೋಜನೆಗಳ ಬಗ್ಗೆ ಚರ್ಚಿಸಲಾಯಿತು. ಮೈಸೂರು- ಬೆಂಗಳೂರು ನಡುವೆ ಸಂಚರಿಸುವ ಒಡೆಯರ್ ಎಕ್ಸ್‌ಪ್ರೆಸ್ ರಾಮನಗರದಲ್ಲಿ ನಿಲುಗಡೆಗೆ ಮನವಿ ಮಾಡಲಾಯಿತು.

ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಅನುಕೂಲ ಆಗುವಂತೆ ಮಂಡ್ಯ ಜಿಲ್ಲೆಯಲ್ಲಿ ಸುಧಾರಿತ ಪುಟ 2ಕ್ಕೆ

### ವನ್ಯಜೀವಿ ದಾಳಿ ತಡೆಗೆ ಮನವಿ

**ನವದೆಹಲಿ:** ಕರ್ನಾಟಕದಲ್ಲಿ ನಿರಂತರವಾಗಿ ನಡೆಯುತ್ತಿರುವ ಮಾನವ-ವನ್ಯಜೀವಿ ಸಂಘರ್ಷವನ್ನು ಶಾಶ್ವತವಾಗಿ ತಡೆಯುವ ಬಗ್ಗೆ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಅವರು ಕೇಂದ್ರ ಪರಿಸರ, ಪುಟ 2ಕ್ಕೆ

# ಆಹಾರ ಭದ್ರತೆ, ಸುರಕ್ಷತೆ ಕಾಯ್ದೆ ಉಲ್ಲಂಘನೆ ವಿರುದ್ಧ ಕಠಿಣ ಕ್ರಮ

ಚಾಮರಾಜನಗರ, ಆಹಾರ ಭದ್ರತೆ ಹಾಗೂ ಆಹಾರ ಸುರಕ್ಷತಾ ಕಾಯ್ದೆ ನಿಯಮಗಳ ಉಲ್ಲಂಘನೆ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ. ಎಚ್. ಕೃಷ್ಣ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ. ಎಚ್. ಕೃಷ್ಣ ಅವರು ಭಾರತ ದೇಶದಲ್ಲಿ ಆಹಾರ ಭದ್ರತೆ ಇದೆ. ಸಾರ್ವಜನಿಕ ಆಹಾರ ವಿತರಣಾ ವ್ಯವಸ್ಥೆಯಡಿ ಬಡವರು, ದುರ್ಬಲರು, ಮಹಿಳೆಯರು, ಅಂಗವಿಕಲರು, ವೃದ್ಧರು ಸೇರಿದಂತೆ ಪ್ರತಿಯೊಬ್ಬರಿಗೂ ಸಮರ್ಪಕ ಆಹಾರ ಒದಗಿಸುವುದು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಪ್ರಮುಖ ಉದ್ದೇಶವಾಗಿದೆ. ಸರ್ಕಾರದ ಆಹಾರ ಯೋಜನೆ, ಕಾರ್ಯಕ್ರಮಗಳ ಪರಿಶೀಲನೆಗಾಗಿ ವಿವಿಧ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಾಗುತ್ತಿದೆ ಎಂದರು.

ಆಹಾರ ಭದ್ರತೆಯಷ್ಟೆ ಆಹಾರ ಸುರಕ್ಷತೆಯು ಮಹತ್ವ ಪಡೆದಿದೆ. ಅಂಗನವಾಡಿ ಮಕ್ಕಳು, ಶಾಲಾ ವಿದ್ಯಾರ್ಥಿಗಳು, ಸಾರ್ವಜನಿಕರು ಸೇರಿದಂತೆ ಎಲ್ಲರಿಗೂ ಸುರಕ್ಷತೆ ಹಾಗೂ ಗುಣಮಟ್ಟದ ಆಹಾರ



ಪೂರೈಸುವುದು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿ, ನೌಕರರ ಜವಾಬ್ದಾರಿಯಾಗಿದೆ. ಆಹಾರ ಭದ್ರತಾ ಕಾಯ್ದೆ ವ್ಯಾಪ್ತಿಗೆ 14 ಇಲಾಖೆಗಳು ಬರಲಿವೆ. ಆಹಾರ ಕಾಯ್ದೆ, ಸುರಕ್ಷತೆಯ ಬಗ್ಗೆ ಜನರಿಗೆ ಅರಿವಿನ ಕೊರತೆ ಇದ್ದು, ಪ್ರತಿಯೊಬ್ಬರಿಗೂ ಆಹಾರ ಸುರಕ್ಷತೆಯ ಬಗ್ಗೆ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಹೇಳಿದರು.

ವಿವಿಧ ಜಿಲ್ಲೆಗಳಿಗೆ ಭೇಟಿ ಸಂದರ್ಭದಲ್ಲಿ ಆಹಾರ ಪೂರೈಕೆ ಸಂಬಂಧ ಲೆಕ್ಕ ಪರಿಶೋಧನೆ, ಗ್ರಾಮಸಭೆ ಹಾಗೂ ವಾರ್ಡ್ ಸಭೆಗಳಲ್ಲಿ ದಾಖಲಾಗುವ ದೂರುಗಳು ಹಾಗೂ ಆಹಾರ ಉಗ್ರಾಣಗಳಲ್ಲಿ ಸ್ವಚ್ಛತೆ ಸೇರಿದಂತೆ ಮೂಲಸೌಲಭ್ಯಗಳ ಪರಿಶೀಲನೆ, ಅರ್ಹರಿಗೆ ಪಡಿತರ ಚೀಟಿ ವಿತರಣೆ, ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಸಮರ್ಪಕ ವಿತರಣೆ, ಬಯೋಮೆಟ್ರಿಕ್ ನಿರ್ವಹಣೆಯಲ್ಲಿ ಸಾರ್ವಜನಿಕ ದೂರುಗಳನ್ನು ಆಯೋಗ ಪರಿಶೀಲಿಸುತ್ತಿದೆ. ಸಮಸ್ಯೆಗಳನ್ನು ಆದ್ಯತೆ ಮೇರೆಗೆ ಪರಿಹರಿಸಲು ಮುಂದಾಗುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

**▸▸ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ. ಎಚ್. ಕೃಷ್ಣ ಎಚ್ಚರಿಕೆ**

ಶಾಲೆಗಳಲ್ಲಿ ಮಧ್ಯಾಹ್ನ ಬಿಸಿಯೂಟ ಉತ್ತಮವಾಗಿರಬೇಕು. ಅದಕ್ಕಾಗಿ ಗುಣಮಟ್ಟದ ಅಕ್ಕಿ, ತರಕಾರಿ, ಕಾಳು, ಮೊಟ್ಟೆಯನ್ನೇ ಖರೀದಿಸಬೇಕು. ಬಿಸಿಯೂಟವನ್ನು ಮೆನು ಪ್ರಕಾರವೇ ನೀಡಬೇಕು. ಈ ಬಗ್ಗೆ ಮಕ್ಕಳಿಂದ ಯಾವುದೇ ದೂರುಗಳು ಬರಬಾರದು. ಬಿಸಿಯೂಟದ ಹಣ ದುರುಪಯೋಗವಾಗದಂತೆ ನೋಡಿಕೊಳ್ಳಬೇಕು. ಅಂಗನವಾಡಿಗಳಲ್ಲಿ ಮಕ್ಕಳಿಗೆ ಪೌಷ್ಠಿಕಾಂಶಯುಕ್ತ ಆಹಾರವನ್ನು ನೀಡಬೇಕು. ಶಾಲೆ, ವಿದ್ಯಾರ್ಥಿನಿಲಯ, ಅಂಗನವಾಡಿಗಳಲ್ಲಿ ಗುಣಮಟ್ಟದ ಆಹಾರ ಶುದ್ಧ ಕುಡಿಯುವ ನೀರು, ಸ್ವಚ್ಛತೆ, ಶೌಚಾಲಯ ನಿರ್ವಹಣೆ ಸಮರ್ಪಕವಾಗಿರಬೇಕು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು. ಅಂಗನವಾಡಿ ಮೂಲಕ ಗರ್ಭಿಣಿಯರಿಗೆ, ತಾಯಂದಿರಿಗೆ ಪೌಷ್ಠಿಕ ಆಹಾರವನ್ನು ತಲುಪಿಸಬೇಕು. ಯಾವುದೇ ಕಾರಣಕ್ಕೂ ಪೋಷಣಾ ಹಕ್ಕುಗಳ ಉಲ್ಲಂಘನೆ ಆಗಬಾರದು. ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಮತ್ತು ವೃದ್ಧಾಶ್ರಮಗಳಲ್ಲಿ ಗುಣಮಟ್ಟದ ಆಹಾರ ನೀಡಬೇಕು. ಪ್ರತಿಯೊಬ್ಬರ ಅಹಾರದ ಹಕ್ಕುಗಳಿಗೂ ಕಾನೂನಿನಾತ್ಮಕ ರಕ್ಷಣೆ ಇದೆ. ಬಡವರಿಗೆ ಹಾಗೂ ದುರ್ಬಲ ವರ್ಗದವರಿಗೆ ಯಾವುದೇ ಕಾರಣಕ್ಕೂ ಅನ್ಯಾಯವಾಗಬಾರದು. ಚಾಮರಾಜನಗರ ಜಿಲ್ಲೆಯಲ್ಲಿ ಆಹಾರ ಉಗ್ರಾಣದ ಅವಶ್ಯವಿದೆ. 90 ಸಾವಿರ ಕ್ವಿಂಟಾಲ್ ದಾಸ್ತಾನು ಇಡಲು ಸುಸಜ್ಜಿತ ಉಗ್ರಾಣ ತೆರೆಯಲು ಪ್ರಸ್ತಾವನೆ ಸಲ್ಲಿಸಬೇಕಿದೆ ಎಂದು ಹೇಳಿದರು.

ಆಹಾರ ಮತ್ತು ನಾಗರಕ ಸರಬರಾಜು ಇಲಾಖೆಯ ಉಪನಿರ್ದೇಶಕರಾದ ಡಾ. ವಸುಂಧರಾ ಹೆಗಡೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರೂಪಣಾ ಅಧಿಕಾರಿ ಮಂಜುಳಾ ದೇವಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಹಾಜರಿದ್ದರು.

## ಕೃಷ್ಣ ವಂದನ



ಸ್ನೇಹಾ ಆನಂದ್



### ಹೇ ಕೃಷ್ಣಾ !

ತಂದೆಯಾದೆ,ತಾಯಿಯಾದೆ
ಬಂಧು ಬಳಗವಾದೆ, ಆತ್ಮೀಯನೂ
ನೀನಾದೆ !
ಉಸಿರಾದೆ,ಹಸಿರಾದೆ,
ಮನದ ಮಂದಿರದಲ್ಲಿ ಪಸರಿಸಿದೆ!

ಧನವಾದೆ, ಧಾನ್ಯವಾದೆ,
ದೇಹದೊಳಗೆ ನಿಂತು ಆತ್ಮವಾದೆ!
ಪ್ರಕೃತಿಯೂ ನೀನೇ,ಪುರುಷನೂ ನೀನೆ,
ನಮ್ಮ ಬಾಳಿನ ಬೆಳಕು ನೀನೆ!

ಬದುಕು ನೀನೇ, ಬಯಕೆ ನೀನೆ,
ಅಂತರಾತ್ಮದೊಳು ನುಡಿಸುವವನು ನೀನೆ!
ಆದಿ ನೀನೇ ಅಂತ್ಯ ನೀನೆ,
ಜೀವನಕೆ ಆಮ್ಲಜನಕವೂ ನೀನೆ!

ಜೀವಿಯ ಜನಕನು ನೀನೇ,
ಜತನದಿ ಕಾಯುವವ ನೀನೆ!
ಕ್ಷಣ ಕ್ಷಣದ ಲೆಕ್ಕ ಇಟ್ಟವ ನೀನೆ,
ಅದಕ್ಕೆ ತಕ್ಕಂತೆ ಫಲ ಕೊಡುವವನು ನೀನೆ

# ಶಿವರಾತ್ರಿ ಜಾತ್ರೆ: ಸಿದ್ಧತೆ ಪರಿಶೀಲನೆ

## ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಫೆ.14 ರಿಂದ 18ರವರೆಗೆ ಸಂಭ್ರಮ

ಹನೂರು: ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಫೆ.14ರಿಂದ 18ರವರೆಗೆ ನಡೆಯಲಿರುವ ಮಹಾ ಶಿವರಾತ್ರಿ ಜಾತ್ರಾ ಮಹೋತ್ಸವ ಪ್ರಯುಕ್ತ ಮಾಸ್ಟರ್ ಪ್ಲಾನ್ ಆವರಣದಲ್ಲಿ ನಡೆಯುತ್ತಿರುವ ಸಿದ್ಧತೆಗಳನ್ನು ಪ್ರಾಧಿಕಾರದ ಕಾರ್ಯದರ್ಶಿ ಎಈ ರಘು ಸಿಬ್ಬಂದಿ ವರ್ಗದವರ ಜೊತೆ ಪರಿಶೀಲನೆ ನಡೆಸಿದರು.

ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಐದು ದಿನಗಳ ಕಾಲ ನಡೆಯಲಿರುವ ಮಹಾಶಿವರಾತ್ರಿ ಜಾತ್ರಾ ಮಹೋತ್ಸವಕ್ಕೆ ಪಾದಯಾತ್ರೆಯ ಮೂಲಕ ಹಾಗೂ ವಾಹನಗಳ ಮೂಲಕ ರಾಜ್ಯದ ವಿವಿಧ ಜಿಲ್ಲೆಗಳಿಂದ ಹಾಗೂ ನೆರೆಯ ತಮಿಳುನಾಡು ರಾಜ್ಯದಿಂದ 10 ಲಕ್ಷಕ್ಕೂ ಹೆಚ್ಚು ಭಕ್ತಾದಿಗಳು ಆಗಮಿಸುವ ನಿರೀಕ್ಷೆ ಇರುವುದರಿಂದ ಜಾತ್ರೆಗೂ ಹತ್ತು ದಿನಗಳ ಮುನ್ನವೇ ಸಿದ್ಧತೆಗಳನ್ನು ಕೈಗೊಂಡಿದ್ದಾರೆ.

### ಪ್ಲಾಸ್ಟಿಕ್ ನಿಷೇಧ

ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟಕ್ಕೆ ಪಾದಯಾತ್ರೆಯ ಮೂಲಕ ಬರುವ ಭಕ್ತಾದಿಗಳಿಗೆ ದಾನಿಗಳು ಪ್ಲಾಸ್ಟಿಕ್ ಬಾಟಲ್ ನೀರು, ಹಣ್ಣು, ಜ್ಯೂಸ್ ವಿತರಣೆ ಮಾಡುತ್ತಿದ್ದಾರೆ. ಪ್ರಸ್ತುತ ಶಿವರಾತ್ರಿ ಜಾತ್ರಾ ಮಹೋತ್ಸವದಿಂದ ತಾಳುಬೆಟ್ಟದಿಂದ ಮಲೆ ಮಹದೇಶ್ವರ ಬೆಟ್ಟದ ವರೆಗೆ ಪ್ಲಾಸ್ಟಿಕ್ ನೀರಿನ ಬಾಟಲ್ ವಿತರಣೆ ಮಾಡುವುದನ್ನು ನಿಬಂಧ ವಿಧಿಸಲಾಗಿದೆ. ಈಗಾಗಲೇ ತಾಳು ಬೆಟ್ಟದಲ್ಲಿ ತೆರೆದಿರುವ ಚೆಕ್ಪೋಸ್ಟ್‌ನಲ್ಲಿ ಪ್ಲಾಸ್ಟಿಕ್ ನೀರಿನ ಬಾಟಲ್ ತರುವ ವಾಹನಗಳನ್ನು ತಡೆಯಲು ಹೆಚ್ಚಿನ ಸಿಬ್ಬಂದಿಯನ್ನು ನಿಯೋಜನೆ ಮಾಡಲಾಗಿದೆ. ಭಕ್ತಾದಿಗಳು ಸಹ ಪ್ಲಾಸ್ಟಿಕ್ ಬಳಕೆ ಮಾಡದೆ ಪ್ಲಾಸ್ಟಿಕ್ ಮುಕ್ತ ಮಲೆ ಮಾದೇಶ್ವರ ಬೆಟ್ಟವನ್ನು ಮಾಡಲು ಸಹಕಾರ ನೀಡಬೇಕು ಎಂದು ಮನವಿ ಮಾಡಿದ್ದಾರೆ.



### ಡಾರ್ಮೆಟ್ರಿ ರಸ್ತೆಗೆ ಡಾಂಬರೀಕರಣ

ಮಹಾಶಿವರಾತ್ರಿ ಜಾತ್ರಾ ಮಹೋತ್ಸವ ಪ್ರಯುಕ್ತ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಹರಕೆ ಹೊತ್ತ ಭಕ್ತಾದಿಗಳು ಪರ ಮಾಡುವುದು ಸಂಪ್ರದಾಯ. ಅದರಂತೆ ಡಾರ್ಮೆಟ್ರಿ ರಸ್ತೆ ಹದಗೆಟ್ಟಿರುವುದರಿಂದ ಅಭಿವೃದ್ಧಿ ಪಡಿಸಲಾಗುತ್ತಿದೆ ಗುರುವಾರದಿಂದ ಡಾಂಬರೀಕರಣ ಕಾಮಗಾರಿ ಪ್ರಾರಂಭವಾಗಲಿದ್ದು ಪರ ಮಾಡುವ ಭಕ್ತಾದಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ.

### ವಿಶ್ರಾಂತಿಗಾಗಿ ನೆರಳು

ಪಾದಯಾತ್ರೆಯ ಮೂಲಕ ಶ್ರೀ ಕ್ಷೇತ್ರಕ್ಕೆ ಬರುವ ಭಕ್ತಾದಿಗಳು ವಿಶ್ರಾಂತಿ ತೆಗೆದುಕೊಳ್ಳಲು ರಾಜಗೋಪುರದ ಬಲ ಭಾಗದಲ್ಲಿ ನೆರಳಿನ ವ್ಯವಸ್ಥೆ ಕಲ್ಪಿಸಲಾಗಿದೆ.ಈಗಾಗಲೇ ಸ್ವಚ್ಛತಾ ಕಾರ್ಯಗಳು ಪೂರ್ಣಗೊಂಡಿದ್ದು ಶುದ್ಧ ಕುಡಿಯುವ ನೀರು, ನೆರಳಿನ ವ್ಯವಸ್ಥೆ ಕಲ್ಪಿಸಲಾಗಿದೆ. ಇದಲ್ಲದೆ ಮಲೆ ಮಹದೇಶ್ವರ ಸ್ವಾಮಿಯ ದರ್ಶನ ಪಡೆಯಲು ಬರುವ ಭಕ್ತಾದಿಗಳಿಗೂ ಪ್ರತಿ ಗೇಟ್ ನಲ್ಲಿಯೂ ನೆರಳಿನ ವ್ಯವಸ್ಥೆ ಕಲ್ಪಿಸಲಾಗಿದೆ.

### ತುರ್ತು ಚಿಕಿತ್ಸೆ ಕೇಂದ್ರ ಪ್ರಾರಂಭ

ಶ್ರೀ ಕ್ಷೇತ್ರ ಮಲೆ ಮಾದೇಶ್ವರ ಬೆಟ್ಟಕ್ಕೆ ಬರುವ ಪಾದಯಾತ್ರಿಕರಿಗೆ ರಾಜಗೋಪುರದ ಬಲ ಭಾಗ ನೆರಳಿನ ವ್ಯವಸ್ಥೆ ಕುಡಿಯುವ ನೀರಿನ ಜೊತೆಗೆ ತುರ್ತು ಚಿಕಿತ್ಸಾ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಿ ಚಿಕಿತ್ಸೆಯನ್ನು ನೀಡಲು ಕ್ರಮವಹಿಸಲಾಗಿದೆ. ಇದಲ್ಲದೆ ವಿಶೇಷವಾಗಿ ವಿಶ್ರಾಂತಿ ಪಡೆಯುವ ಭಕ್ತಾದಿಗಳಿಗೆ ಪ್ರಾಧಿಕಾರದ ವತಿಯಿಂದ ಬಿಸಿಬೇಳೆ ಬಾತ್ ಹಾಗೂ ಮೊಸರನ್ನ ವಿತರಣೆ ಮಾಡಲು ಕ್ರಮ ವಹಿಸಲಾಗಿದೆ.

### ಕುಡಿಯುವ ನೀರಿನ ವ್ಯವಸ್ಥೆ

ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟಕ್ಕೆ ಬರುವ ಭಕ್ತಾದಿಗಳಿಗೆ ತಾಳು ಬೆಟ್ಟದಿಂದ ಮಲೆ ಮಹದೇಶ್ವರ ಬೆಟ್ಟದವರೆಗೆ 15 ಕಡೆ ಕುಡಿಯುವ ನೀರಿನ ಟ್ಯಾಂಕ್ ಇಟ್ಟು ನೀರು ಪೂರೈಕೆ ಮಾಡಲಾಗುತ್ತಿದೆ. ಮೊಬೈಲ್ ಶೌಚಾಲಯ ನಿರ್ಮಾಣ ಮಾಡಲು ಅರಣ್ಯ ಇಲಾಖೆಯ ಅನುಮತಿಗಾಗಿ ಪತ್ರ ಬರೆಯಲಾಗಿದೆ. ಅನುಮತಿ ಸಿಕ್ಕ ನಂತರ ಆನೆ ತಲೆದಿಂಬ, ರಂಗಸ್ವಾಮಿ ಒಡ್ಡು ಹಾಗೂ ತಾಳಬೆಟ್ಟ ತಿರುವಿನಲ್ಲಿ ಪುರುಷರು ಹಾಗೂ ಮಹಿಳೆಯರಿಗೆ ಪ್ರತ್ಯೇಕ 6 ಮೊಬೈಲ್ ಶೌಚಾಲಯ ಪ್ರಾರಂಭಿಸಲು ಕ್ರಮ ವಹಿಸಲಾಗಿದೆ.

### ಪಾದಯಾತ್ರಿಕರ ಭದ್ರತೆಗೆ 50 ಗೃಹರಕ್ಷಕ ದಳದ ಸಿಬ್ಬಂದಿ

ಶ್ರೀ ಕ್ಷೇತ್ರ ಮಲೆ ಮಾದೇಶ್ವರ ಬೆಟ್ಟಕ್ಕೆ ಪಾದಯಾತ್ರೆಯ ಮೂಲಕ ತೆರಳುತ್ತಿದ್ದ ಪಾದಯಾತ್ರಿಕನ ಮೇಲೆ ಕಳೆದ ತಿಂಗಳು ಚಿರತೆ ದಾಳಿ ಮಾಡಿದ ಪರಿಣಾಮ ಭಕ್ತ ಮೃತಪಟ್ಟಿದ್ದ. ಈಸಹಿನ್ನೆಲೆ ಮುನ್ನೆಚ್ಚರಿಕೆ ಕ್ರಮವಾಗಿ ಮಹಾ ಶಿವರಾತ್ರಿ ಜಾತ್ರಾ ಮಹೋತ್ಸವ ಪ್ರಯುಕ್ತ ಪಾದಯಾತ್ರೆಯ ಮೂಲಕ ಬರುವ ಭಕ್ತಾದಿಗಳ ಸುರಕ್ಷತೆ ದೃಷ್ಟಿಯಿಂದ ಪ್ರಾಧಿಕಾರದ ವತಿಯಿಂದ ತಾಳುಬೆಟ್ಟದಿಂದ ಮಲೆ ಮಹದೇಶ್ವರ ಬೆಟ್ಟದ ವರೆಗೆ ಅರಣ್ಯ ಇಲಾಖೆ ಸಿಬ್ಬಂದಿ ವರ್ಗದವರ ಜೊತೆಗೆ 50 ಗೃಹ ರಕ್ಷಕ ದಳದ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆ ಎಂದು ಪ್ರಾಧಿಕಾರದ ಕಾರ್ಯದರ್ಶಿ ಎಇರಘು ಪತ್ರಿಕೆ ಮಾಹಿತಿ ನೀಡಿದ್ದಾರೆ.

### ಪಾದಯಾತ್ರಿಕರಿಗೆ ಪ್ರತ್ಯೇಕ ಕ್ಯೂ ಲೈನ್

ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟಕ್ಕೆ ಕನಕಪುರ ರಾಮನಗರ ಮಂಡ್ಯ ಮೈಸೂರು ಚಾಮರಾಜನಗರ ತಮಿಳುನಾಡಿನಿಂದ ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತಾದಿಗಳು ಪಾದಯಾತ್ರೆಯ ಮೂಲಕ ಶಿವರಾತ್ರಿ ಜಾತ್ರಾ ಮಹೋತ್ಸವಕ್ಕೆ ಆಗಮಿಸುವುದು ವಿಶೇಷ. ಈ ಹಿನ್ನೆಲೆ ಪ್ರಾಧಿಕಾರದ ಕಚೇರಿ ಸಮೀಪದ ಅರಳಿ ಮರದ ಮುಂಭಾಗದಿಂದ ಪ್ರತ್ಯೇಕ ಕ್ಯೂ ಲೈನ್ ನಿರ್ಮಾಣ ಮಾಡಿ ರಾಜಗೋಪುರ ಮುಖ್ಯದ್ವಾರ ಹಾಗೂ 250 ಟಿಕೆಟ್ ಕೌಂಟರ್ ಮೂಲಕ ಉಚಿತ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ


## ಫೆ.10ಕ್ಕೆ ಹಸಗೂಲಿ ಪಾರ್ವತಾಂಭೆ ದೇವಸ್ಥಾನ ಮೊದಲ ವರ್ಷದ ಅರಾಧನೆ ಮಹೋತ್ಸವ

ಗುಂಡ್ಲುಪೇಟೆ: ತಾಲ್ಲೂಕಿನ ಹಸಗೂಲಿ ಗ್ರಾಮದಲ್ಲಿ ಕಳೆದ ವರ್ಷ ಶ್ರೀ ಅಲ್ಲಹಳ್ಳಿ ಪಾರ್ವತಾಂಭೆ ನೂತನ ಸ್ವರ್ಣಕಲ್ಲಿನ ದೇವಾಲಯ ಅದ್ದೂರಿಯಾಗಿ ಲೋಕಾರ್ಪಣೆಗೊಂಡಿತು ಫೆ10 2026 ಕ್ಕೆ ದೇವಸ್ಥಾನ ಲೋಕಾರ್ಪಣೆ ಗೊಂಡು ಒಂದು ವರ್ಷ ತುಂಬಿದ ಹಿನ್ನಲೆಯಲ್ಲಿ ಹಸಗೂಲಿ ಗ್ರಾಮದಲ್ಲಿ ಒಂದು ವರ್ಷದ ಆರಾಧನೆ ಮಹೋತ್ಸವ ಏರ್ಪಡಿಸಲಾಗಿದೆ.

ತಾಲ್ಲೂಕಿನ ಪ್ರಸಿದ್ದ ಜಾತ್ರೆ ನಡೆಯುವ ಶ್ರೀ ಅಲ್ಲಹಳ್ಳಿ ಪಾರ್ವತಾಂಭೆಯ ದೇವಸ್ಥಾನದ ಮೊದಲ ವರ್ಷದ ಆರಾಧನೆ ಮಹೋತ್ಸವಕ್ಕೆ ಹೆಚ್ಚಿನ ಸಂಖ್ಯೆಯ ಭಕ್ತರು ಭಾಗಿಯಾಗುವಂತೆ ಶ್ರೀ ಪಾರ್ವತಾಂಭೆ ಜಾತ್ರಾ ಸಮಿತಿಯವರು ಕೋರಿದ್ದಾರೆ. ಕಾರ್ಯಕ್ರಮದಲ್ಲಿ ಸುಮಾರು ಐವತ್ತು ಸಾವಿರ ಭಕ್ತರು ಸೇರುವ ಹಿನ್ನಲೆ ಎಲ್ಲರಿಗೂ ಪ್ರಸಾದ ವ್ಯವಸ್ಥೆ ಮಾಡಿಸಲಾಗಿದೆ ಅಲ್ಲದೆ ಶ್ರೀ ಸಚ್ಚಿದಾನಂದ ಸೇವಾ ಟ್ರಸ್ಟ್ ನ ಅಧ್ಯಕ್ಷ ಸಚ್ಚಿದಾನಂದ ರವರು ಮಾಜಿ ಬಿಗ್ ಬಾಸ್ ಸ್ಪರ್ಧಿ ಹಾಗೂ ಹಳ್ಳಿಕಾರ್ ಒಡೆಯ ಎಂದು ಹೆಸರುಗಳಿಸಿರುವ ವರ್ತೂರ್ ಸಂತೋಷ್, ಹಾಗೂ ಕನ್ನಡ ಚಲನಚಿತ್ರ ರಂಗದ ಹಾಸ್ಯ ಕಲಾವಿದ ಟೆನ್ನಿಸ್ ಕೃಷ್ಣ ಅವರನ್ನು ಕರೆಸುತಿದ್ದು, ಜೊತೆಗೆ ಅಂತರಾಷ್ಟ್ರೀಯ ಜಾನಪದ ಕಲಾವಿದ ಅಮ್ಮ ರಾಮಚಂದ್ರ ಅವರನ್ನು ಅರಾಧನ ಮಹೋತ್ಸವ ಕ್ಕೆ ಕರೆಸುತಿದ್ದಾರೆ.

**ಹಳ್ಳಿಕಾರ್ ಜೋಡೆತ್ತುಗಳ ಪ್ರದರ್ಶನ ಬಹುಮಾನ:** ಶ್ರೀ ಅಲ್ಲಹಳ್ಳಿ ಪಾರ್ವತಾಂಭೆ ಜಾನುವಾರುಗಳ ಪ್ರೀತಿಯ ದೇವರು ಎಂತಹ ರೋಗರುಜಿನೆ ಇದ್ದರೂ ಹರಕೆ ತೊಟ್ಟು ಪಂಜು ಹಚ್ಚಿದಿದರೆ ಎಲ್ಲವೂ ಗುಣವಾಗುವ ನಂಬಿಕೆ ಹಾಗಾಗಿ ಹಸಗೂಲಿ ಜಾತ್ರೆಯನ್ನು ದನಗಳ ಜಾತ್ರೆ ಎಂತಲು ಕರೆಯುವ ವಾಡಿಕೆ ಈ ಹಿನ್ನಲೆಯಲ್ಲಿ ಹಳ್ಳಿಕಾರ್ ಜೋಡೆತ್ತುಗಳ ಪ್ರದರ್ಶನ ಏರ್ಪಡಿಸಿದ್ದು ಬಾಗಿಯಾಗುವ ಉತ್ತಮ ಜೋಡೆತ್ತುಗಳಿಗೆ ಪ್ರಥಮ ಬಹುಮಾನ ಇಪ್ಪತ್ತು ಸಾವಿರ, ದ್ವಿತೀಯ ಬಹುಮಾನ ಹದಿನೈದು ಸಾವಿರ, ತೃತೀಯ ಬಹುಮಾನ ಹತ್ತು ಸಾವಿರ ರೂಗಳು ನೀಡಲಾಗುವುದು ಹಾಗೂ ಭಾಗಿಯಾಗುವ ಎಲ್ಲಾ ರೈತರಿಗೂ ಸಮಾಧಾನಕರ ಬಹುಮಾನ ನೀಡಲಾಗುವುದು.

ಹಳ್ಳಿಕಾರ್ ಜೊಡೆತ್ತು ಪ್ರದರ್ಶನ ಕ್ಕೆ ಬರುವ ಆಸಕ್ತ ರೈತರು ನಂ 12 ಸುರಭಿ ಹೋಟೆಲ್ ರಸ್ತೆ , ದ,ರಾ ಬೇಂದ್ರ ನಗರ ಗುಂಡ್ಲುಪೇಟೆ ಟೌನ್, ದೂ.ಸಂ 8050833123, 7975330155 ಗೆ ಸಂಪರ್ಕಿಸುವಂತೆ ಕೋರಲಾಗಿದ್ದು ಗುಂಡ್ಲುಪೇಟೆ ತಾಲ್ಲೂಕಿನ ಹಳ್ಳಿಕಾರ್ ಜೋಡೆತ್ತುಗಳಿಗೆ ಮಾತ್ರ ಆದ್ಯತೆ.



## 7ಕ್ಕೆ ರಂಗಾಂತರಂಗ ಮಕ್ಕಳ ನಾಟಕೋತ್ಸವ



ಮೈಸೂರು: ರಂಗಾಂತರಂಗ ಮೈಸೂರು ವತಿಯಿಂದ ಫೆ.7ರಂದು ಸಂಜೆ 5.30ಕ್ಕೆ ರಂಗಾಯಣದ ಕಿರು ರಂಗ ಮಂದಿರದಲ್ಲಿ ರಂಗಾಂತರಂಗ ಮಕ್ಕಳ ನಾಟಕೋತ್ಸವ ಆಯೋಜಿಸಲಾಗಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್‌ನ ಮಾಜಿ ಅಧ್ಯಕ್ಷ ಎಂ. ಚಂದ್ರಶೇಖರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇರಿಯ ರಂಗಕರ್ಮಿ ಮೈಮ್ ರಮೇಶ್ ಉದ್ಘಾಟಿಸುವರು, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಅಧ್ಯಕ್ಷತೆ ವಹಿಸುವರು, ವಿ. ಎನ್. ಮಲ್ಲಿಕಾರ್ಜುನ ಸ್ವಾಮಿ, ಎಂ.ಆರ್. ಸತ್ಯನಾರಾಯಣ, ಡಾ.ಎಂ.ಎಸ್. ಅನಿತಾ, ಡಾ.ಸಿ.ಇ. ಸುಬ್ರಹ್ಮಣ್ಯ ಅತಿಥಿಗಳಾಗಿರುವರು. ಸಂಸ್ಥಾಪಕ ಕೀರ್ತಿರಾಜ್ ಉಪಸ್ಥಿತರಿರುವರು ಎಂದರು.

ಕೆ.ಎಂ. ಕೀರ್ತಿರಾಜ್ ಮಾತನಾಡಿ, ತಮ್ಮ ಸಂಸ್ಥೆಯೇ ತರಬೇತಿ ನೀಡಿದ ಮಕ್ಕಳು ಪ್ರದರ್ಶನ ನೀಡಲಿದ್ದಾರೆ. ಫೆ. 7 ರಂದು ಸಂಜೆ 6ಕ್ಕೆ ಹುಲಿ ಬೇಟೆಯ ಹಿಂದೆ ಮುಂದೆ, ಫೆ. 8 ರಂದು ಮಧ್ಯಾಹ್ನ 2.30ಕ್ಕೆ ತಿಕ್ಕಲು ರಾಜ ತಿರುಬೋಕಿ ರಾಜ್ಯ, ಫೆ. 8 ರ ಸಂಜೆ 5.30ಕ್ಕೆ ಮುಟ್ಟಿಸಿಕೊಂಡವರು ನಾಟಕ ಪ್ರದರ್ಶನವಿದೆ. ಎಲ್ಲಕ್ಕೂ ಉಚಿತ ಪ್ರವೇಶವಿದೆ ಎಂದು ಮಾಹಿತಿ ನೀಡಿದರು. ವೆಂಕಟೇಶ್, ಭವ್ಯ ಹಾಜರಿದ್ದರು.

## ಭಾಷ್ಯಂ ಸ್ವಾಮೀಜಿ, ಲಿಂಗರಾಜುಗೆ ಅಭಿನಂದನೆ



ಮೈಸೂರು: ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದಿಂದ ಗೌರವ ಡಾಕ್ಟರೇಟ್ ಪದವಿ ಪಡೆದ ಶ್ರೀ ಯೋಗ ನರಸಿಂಹಸ್ವಾಮಿ ದೇವಸ್ಥಾನದ ಸ್ಥಾಪಕರು ಪ್ರೊ. ಶ್ರೀ ಭಾಷ್ಯಂ ಸ್ವಾಮೀಜಿ ಹಾಗೂ ಮೈಸೂರು ವಾಣಿಜ್ಯ ಮಂಡಳಿಯ ಅಧ್ಯಕ್ಷ ಕೆ.ಬಿ.ಲಿಂಗರಾಜು ಅವರನ್ನು ಮೈಸೂರು ಪತ್ರಿಕಾ ಛಾಯಾಗ್ರಹಕ ಸಂಘದಿಂದ ಗೌರವಿಸಿ ಅಭಿನಂದಿಸ ಲಾಯಿತು ಈ ಸಂದರ್ಭ ಸಂಘದ ಅಧ್ಯಕ್ಷ ಪ್ರಗತಿ ಗೋಪಾಲಕೃಷ್ಣ, ಉಪಾಧ್ಯಕ್ಷ ಕೆ.ಎಚ್.ಚಂದ್ರು, ಪ್ರಧಾನ ಕಾರ್ಯದರ್ಶಿ ಲಕ್ಷ್ಮೀನಾರಾಯಣ ಯಾದವ್, ಖಜಾಂಚಿ ಉದಯ್ ಶಂಕರ್, ಛಾಯಾಗ್ರಾಹಕ ಅನುರಾಗ ಬಸವರಾಜ್. ಎಸ್.ಆರ್.ಮಧುಸೂದನ್. ಹಂಪಾ ನಾಗರಾಜ್ ನಂದನ್, ಯೋಗ ನರಸಿಂಹಸ್ವಾಮಿ ದೇವಸ್ಥಾನದ ವ್ಯವಸ್ಥಾಪಕ ರಾದ ಶ್ರೀನಿವಾಸ್ ಇತರರು ಹಾಜರಿದ್ದರು.

## ಗಾಜನೂರಿನಲ್ಲಿ ರಾಜಕುಮಾರ್ ಸರ್ಕಲ್

ಚಾಮರಾಜನಗರ, ಚಾಮರಾಜನಗರ ಜಿಲ್ಲೆಯ ಗಡಿಭಾಗಕ್ಕೆ ಹೊಂದಿಕೊಂಡಿರುವ ಗಾಜನೂರು ಗ್ರಾಮದಲ್ಲಿ ಗ್ರಾಮಸ್ಥರ ಮುಂದಾಳತ್ವದಲ್ಲಿ ಇಂದು ಕಣ್ಮನ ಸೆಳೆಯುವಂತೆ ವರನಟ ಡಾ. ರಾಜಕುಮಾರ್ ಅವರ ಹೆಸರಿನ ಸರ್ಕಲ್ ಸ್ಥಾಪಿಸಲಾಯಿತು.

ಗಾಜನೂರಿನ ಪೆಟ್ರೋಲ್ ಬಂಕ್ ಸಮೀಪದಲ್ಲಿರುವ ಸರ್ಕಲ್ ಗೆ ಡಾ.ರಾಜಕುಮಾರ್ ಅವರ ಹೆಸರನ್ನು ನಾಮಕರಣ ಮಾಡಲಾಗಿದ್ದು, ಇದೇ ಸಂದರ್ಭದಲ್ಲಿ ಡಾ.ರಾಜಕುಮಾರ್ ಅವರ ಭಾವಚಿತ್ರವನ್ನು ಅನಾವರಣಗೊಳಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ಸಾಂಸ್ಕೃತಿಕ ಕಲಾತಂಡಗಳು ಭಾಗವಹಿಸಿ ವಿವಿಧ ಪ್ರದರ್ಶನಗಳನ್ನು ನೀಡುವ ಮೂಲಕ ಕಾರ್ಯಕ್ರಮಕ್ಕೆ ಮೆರಗು ನೀಡಿದವು. ಈ ಸಂದರ್ಭದಲ್ಲಿ ಡಾ.ರಾಜಕುಮಾರ್ ಅವರ ಸಂಬಂಧಿಗಳಾದ ಗೋಪಾಲ್, ರಾಮಮೂರ್ತಿ, ಕದಿರಯ್ಯ ಮಾಸ್ಟರ್, ನಾಗರಾಜು, ಪ್ರೇಮಗೋಪಾಲ್, ಮಂಗಳಮ್ಮ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.




### ನಿಲುವಾಗಿಲು ಮತ್ತು ತುಂಬಸೋಗೆ ಗ್ರಾಮಗಳಲ್ಲಿ ಕೊಂಡೋತ್ಸವ ಸೇರಿದಂತೆ ಇತರೆ ಪೂಜಾ ಕೈಂಕರ್ಯ

## ಶ್ರೀಮಹದೇಶ್ವರಸ್ವಾಮಿ ದನಗಳ ಜಾತ್ರೆ ಸಂಪನ್ನ

ಎಚ್.ಡಿ.ಕೋಟೆ: ಮೂರು ದಿನಗಳ ಕಾಲ ನಡೆದ ನಿಲುವಾಗಿಲು ಮತ್ತು ತುಂಬಸೋಗೆ ಗ್ರಾಮಗಳ ಶ್ರೀಮಹದೇಶ್ವರಸ್ವಾಮಿ ದನಗಳ ಜಾತ್ರೆ ಅಪಾರ ಸಂಖ್ಯೆಯ ಭಕ್ತರ ಜೈಕಾರ, ಕೊಂಡೋತ್ಸವ ಸೇರಿದಂತೆ ಇತರೆ ಪೂಜಾ ಕೈಂಕರ್ಯಗಳಿಂದ ಸಂಪನ್ನಗೊಂಡಿತು.

ಸೋಮವಾರದಿಂದ ಆರಂಭಗೊಂಡ ಜಾತ್ರೆಗೆ, ನಿಲುವಾಗಿಲು ಗ್ರಾಮದಿಂದ ಬಸವ, ಮಹದೇಶ್ವರ, ಕಂಡಾಯ, ತೇರು, ಮಂಟಪ, ಸತ್ತಿಗೆ, ತುಂಬಸೋಗೆ ಗ್ರಾಮದಿಂದ ಮಲೆಮಹದೇಶ್ವರ, ಶ್ರೀಮಾರಮ್ಮ ಅವರನ್ನು ಅಲಂಕೃತ ಪಲ್ಲಕ್ಕಿಯಲ್ಲಿರಿಸಿ ಗ್ರಾಮದ ರಾಜಬೀದಿಗಳಲ್ಲಿ ನಾದಸ್ವರ, ಮಂಗಳವಾದ್ಯದ ಮೂಲಕ ಸತ್ತಿಗೆ ಸಮೇತ ಜಾತ್ರಾ ಮೈದಾನಕ್ಕೆ ತರಲಾಯಿತು. ಬೆ.5ರಿಂದ 7ರ ಶುಭ ಲಗ್ನದಲ್ಲಿ ಬಿಡುಗಲು ಪಡವಲು ವಿರಕ್ತಮಠದ ಮಹದೇಶ್ವರ ಸ್ವಾಮೀಜಿ ಸಾನ್ನಿಧ್ಯದಲ್ಲಿ ದೇವಸ್ಥಾನದ ಪುರೋಹಿತರು ಹೋಮ, ರುದ್ರಾಭಿಷೇಕ ನೆರವೇರಿಸುವ ಮೂಲಕ ಜಾತ್ರೆ ಪ್ರಾರಂಭಿಸಲಾಯಿತು. ರಾತ್ರಿವೇಳೆ ಭಕ್ತಿ–



ಭಾವಗೀತೆಗಳ ಗಾಯನ ಕಾರ್ಯಕ್ರಮ ನಡೆಯಿತು.

ಬುಧವಾರ ಬೆ.9ರಲ್ಲಿ ರಥೋತ್ಸವ ನಡೆಯಿತು. ದಿನ ಪೂರ್ತಿ ವಿಶೇಷ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ವಿಧಾನಸಭೆ ವಿಶೇಷ ಅಧಿವೇಶನದಲ್ಲಿ ಕ್ಷೇತ್ರದ ಶಾಸಕ ಅನಿಲ್ ಚಿಕ್ಕಮಾದು ಭಾಗಿಯಾಗಿರುವುದರಿಂದ, ಅವರ ತಾಯಿ ನಾಗಮ್ಮ ಮಧ್ಯಾಹ್ನ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆದರು. ರಾತ್ರಿ ಸಂಗೀತ ರಸಸಂಜೆ ಕಾರ್ಯಕ್ರಮ ನಡೆಯಿತು. ಇಂದು ಮುಂಜಾನೆ ಸ್ವಾಮಿಯವರನ್ನು ಅಲಂಕೃತ ಪಲ್ಲಕ್ಕಿಯಲ್ಲಿರಿಸಿ ಕಪಿಲಾ ನದಿಯಲ್ಲಿ ನಡೆಸಲಾದ ತೆಪ್ಪೋತ್ಸವವನ್ನು ಭಕ್ತರು ಕಣ್ತುಂಬಿಕೊಂಡರು. ಸರಗೂರು ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಕಿರಣ್ ಕುಮಾರ್ ನೇತೃತ್ವದಲ್ಲಿ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಜಾತ್ರಾ ಕಮಿಟಿ ಅಧ್ಯಕ್ಷ, ಕಾರ್ಯದರ್ಶಿ, ಉಪಾಧ್ಯಕ್ಷ ಹಾಗೂ ಪದಾಧಿಕಾರಿಗಳು, ಸದಸ್ಯರು, ಎರಡು ಗ್ರಾಮಗಳ ಯಜಮಾನರು, ಅಕ್ಕ–ಪಕ್ಕದ ಗ್ರಾಮಸ್ಥರು ಸೇರಿದಂತೆ ಅಪಾರ ಸಂಖ್ಯೆಯ ಭಕ್ತರು ನೆರೆದಿದ್ದರು.

### ಕೊಂಡ ಹಾಯ್ದು ಭಕ್ತಿ ಸಮರ್ಪಣೆ

ಮಂಗಳವಾರ ಬೆ.9:30ರಲ್ಲಿ ಮಹದೇಶ್ವರ ಸ್ವಾಮಿಗೆ ಹಾಲು–ಹರವೆ ಮೂಲಕ ಕಪಿಲಾ ನದಿಯಲ್ಲಿ ಪೂಜೆ ಸಲ್ಲಿಸಿ, ಉತ್ಸವ ಮೂರ್ತಿಗಳನ್ನು ವೀರಗಾಸೆ ಕುಣಿತ, ಮಂಗಳವಾದ್ಯಗಳ ಮೂಲಕ ದೇವಸ್ಥಾನ ಪ್ರದಕ್ಷಿಣೆ ಮಾಡಿ ಕೊಂಡೋತ್ಸವದ ಜಾಗಕ್ಕೆ ತರಲಾಯಿತು. ದೇವರ ಹೊತ್ತ ಅರ್ಚಕರು ಸತ್ತಿಗೆ, ಕಂಡಾಯದೊಂದಿಗೆ ಹರಕೆಹೊತ್ತ ಭಕ್ತರು ಕೊಂಡ ಹಾಯುವ ಮೂಲಕ ಭಕ್ತಿ ಸಮರ್ಪಿಸಿದರು. ಜಾತ್ರಾ ಮೈದಾನದಲ್ಲಿ ಏರ್ಪಡಿಸಿದ್ದ ಅನ್ನದಾನದಲ್ಲಿ ಸಾವಿರಾರು ಭಕ್ತರು ಪ್ರಸಾದ ಸ್ವೀಕರಿಸಿದರು. ನೆರೆ–ಹೊರೆ ಗ್ರಾಮಸ್ಥರು ದನ, ಕರುಗಳನ್ನು ಕರೆತಂದು ಪೂಜೆ ಸಲ್ಲಿಸಿದರು. ಕಾಳಮ್ಮ ಕೃಪಾಪೋಷಿತ ನಾಟಕ ಮಂಡಳಿಯವರು ರಾತ್ರಿ ಶನಿಪ್ರಭಾವ ಅಥವಾ ರಾಜಾವಿಕ್ರಮ ಎಂಬ ಪೌರಾಣಿಕ ನಾಟಕ ಪ್ರದರ್ಶಿಸಿದರು.

ಧನ್ವೀರ್ ನಟನೆಯ ಹಯಗ್ರೀವ ಚಿತ್ರದ ಹಾಡು ಬಿಡುಗಡೆ

## ಭ್ರಮರಾಂಬ ಚಿತ್ರಮಂದಿರದ 75ನೇ ವಾರ್ಷಿಕೋತ್ಸವ ಸಮಾರಂಭ

**ಹೂಮಳೆ ಸುರಿಸುವ ಮೂಲಕ ಧನ್ವೀರ್ ಗೆ ಅದ್ದೂರಿ ಸ್ವಾಗತ. ಸಂಭ್ರಮಿಸಿದ ಅಭಿಮಾನಿಗಳು.**



ಚಾಮರಾಜನಗರ: ಧನ್ವೀರ್ ಗೌಡ ಹಾಗೂ ಸಂಜನಾ ಆನಂದ್ ನಟನೆಯ 'ಹಯಗ್ರೀವ' ಚಿತ್ರದ 'ಮೊದಲನೆಯ ಮಾತು' ಹಾಡಿನ ಬಿಡುಗಡೆ ಹಾಗೂ ಭ್ರಮರಾಂಬ ಚಿತ್ರಮಂದಿರದ 75ನೇ ವಾರ್ಷಿಕೋತ್ಸವ ಕಾರ್ಯಕ್ರಮ ನಡೆಯಿತು.

ನಗರದ ಭ್ರಮರಾಂಬ ಚಿತ್ರಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಧನ್ವೀರ್ ಗೌಡ ಹಾಗೂ ಸಂಜನಾ ಆನಂದ್ ನಟನೆಯ 'ಹಯಗ್ರೀವ' ಚಿತ್ರದ 'ಮೊದಲನೆಯ ಮಾತು' ಹಾಡಿನ ಬಿಡುಗಡೆ ಬಿಡುಗಡೆ ಯಾಯಿತು. ಸಮೃದ್ಧಿ ಮಂಜುನಾಥ್ ಅವರ ಕೆ.ವೆ.ಸಿ ಪ್ರೊಡಕ್ಷನ್ಸ್ ಅಡಿಯಲ್ಲಿ ನಿರ್ಮಾಣವಾದ ಈ ಚಿತ್ರವನ್ನು ರಘುಕುಮಾರ್ ಅವರು ನಿರ್ದೇಶಿಸಿದ್ದಾರೆ. 'ಹಯಗ್ರೀವ' ಚಿತ್ರದ ಟೀಸರ್ ಬಿಡುಗಡೆಯಾಗಿ ಪ್ರೇಕ್ಷಕರ ಗಮನ ಸೆಳೆದಿದೆ. ಚಿತ್ರದಲ್ಲಿ ಧನ್ವೀರ್ ಗೌಡ ಅವರು ಮಾಸ್ ಲುಕ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಚಿತ್ರಮಂದಿರಕ್ಕೆ ಧನ್ವೀರ್ ಆಗಮಿಸುತ್ತಿದ್ದಂತೆ ಅಭಿಮಾನಿಗಳು ಪಟಾಕಿ ಸಿಡಿಸಿ, ಪುಷ್ಪವೃಷ್ಟಿ ಮೂಲಕ ಅದ್ದೂರಿ ಸ್ವಾಗತ ಕೋರಿ ಬರ ಮಾಡಿಕೊಂಡರು. ಅಭಿಮಾನಿಗಳು ಡಿ ಬಾಸ್, ಡಿಬಾಸ್ ಘೋಷಣೆ ಕೂಗಿ ಸಂಭ್ರಮಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಚಿತ್ರದ ನಾಯಕ ನಟ ಧನ್ವೀರ್ ಗೌಡ, ನಾಯಕ ನಟಿ ಸಂಜನಾ ಆನಂದ್, ನಿರ್ದೇಶಕ ರಘುಕುಮಾರ್ ಮಾತನಾಡಿ, ಹಯಗ್ರೀವ್ ಚಿತ್ರ ಚೆನ್ನಾಗಿ ಮೂಡಿ ಬಂದಿದ್ದು ಒಂದು ಉತ್ತಮ ಚಿತ್ರವಾಗಿದೆ ಸುಮಧುರ ಹಾಡುಗಳು, ಫೈಟ್, ಡೈಲಾಗ್ ,ಕಾಮಿಡಿ ಒಳಗೊಂಡಿದೆ ಫೆ.27 ರಂದು ಸಿನಿಮಾ ಬಿಡುಗಡೆಯಾಗಲಿದ್ದು, ಚಿತ್ರಮಂದಿರಕ್ಕೆ ಬಂದು ನೋಡುವ ಮೂಲಕ ಚಾಮರಾಜನಗರ ಜಿಲ್ಲೆಯ ಜನತೆ ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು. ಚಿತ್ರ ಮಂದಿರದ ಮಾಲೀಕರಾದ ರೇವಂತ್ ದೇವರು ಮಾತನಾಡಿ, ಧನ್ವೀರ್ ಗೌಡ ಹಾಗೂ ಸಂಜನಾ ಆನಂದ್ ನಟನೆಯ 'ಹಯಗ್ರೀವ' ಚಿತ್ರದ 'ಮೊದಲನೆಯ ಮಾತು' ಹಾಡಿನ ಬಿಡುಗೆಡೆ ಬಿಡುಗಡೆ ಕಾರ್ಯಕ್ರಮ ನಮ್ಮ ಚಿತ್ರಮಂದಿರದಲ್ಲಿ ಮಾಡಿರುವುದು ತುಂಬಾ ಖುಷಿಯಾಗಿದೆ. ಚಿತ್ರವು ಶತಮಾನೋತ್ಸವ ಆಚರಿಸಲಿ ಎಂದು ಶುಭ ಕೋರಿದರು.


**ಸನ್ಮಾನ**

ಚಿತ್ರನಟ ಧನ್ವೀರ್ ಅವರಿಗೆ ಚಿತ್ರಮಂದಿರ ಮಾಲೀಕರು ಶಾಲುಹೊದಿಸಿ, ಹಾರಹಾಕಿ ಅಮೃತ ಮಹೋತ್ಸವದ ನೆನಪಿಗೆ ಕಾಣಿಕೆ ನೀಡಿ ಸನ್ಮಾನಿಸಿದರು ಕಾರ್ಯಕ್ರಮದಲ್ಲಿ ಚಿತ್ರಮಂದಿರದ ಮಾಲೀಕರಾದ ಸುಂದರೇಶ್ ಮೂರ್ತಿ, ಶಿವಬಸವಸ್ವಾಮಿ, ರೇವಂತ್ ದೇವರು, ರಕ್ಷಿತ್ ಮಾಂಬಳ್ಳಿ ಇತರರು ಹಾಜರಿದ್ದರು.

## ಹನುಮಾನ್ ಚಾಲೀಸಾ ಪಾರಾಯಣ ರಥೋತ್ಸವಕ್ಕೆ ನಾಗೇಂದ್ರ ಚಾಲನೆ

ಮೈಸೂರು: ನಗರದ ಅವಧೂತ ದತ್ತಪೀಠದಿಂದ ಗಣಪತಿ ಸಚ್ಚಿದಾನಂದ ಸ್ವಾಮೀಜಿ ನೇತೃತ್ವದಲ್ಲಿ ಫೆ.14ರಂದು ಮಹಾರಾಜ ಕಾಲೇಜು ಮೈದಾನದಲ್ಲಿ ಹನುಮಾನ್ ಚಾಲೀಸ ಮಾಹಾಪಾರಾಯಣ ಮಹಾಯಜ್ಞವನ್ನ ಆಯೋಜಿಸಲಾಗಿದೆ. ಇದರ ಪ್ರಯುಕ್ತ ಪಡುವಾರಹಳ್ಳಿ ವಾಲ್ಮೀಕಿ ರಸ್ತೆಯಲ್ಲಿ ಪ್ರಚಾರ ವಾಹನ ಮತ್ತು ಹನುಮಾನ್ ಟ್ಯಾಬ್ಲೋ ಸ್ಥಬ್ಧಚಿತ್ರದ ವಾಹನಕ್ಕೆ ಪುಷ್ಪನಮನ ಸಲ್ಲಿಸಿ ನಗರ ಬಿಜೆಪಿ ಅಧ್ಯಕ್ಷ ಹಾಗೂ ಮಾಜಿ ಶಾಸಕ ಎಲ್. ನಾಗೇಂದ್ರ ಚಾಲನೆ ನೀಡಿದರು.

ನಂತರ ಮಾತನಾಡಿ ಅವರು, ಗಣಪತಿ ಸಚ್ಚಿದಾನಂದ ಆಶ್ರಮ ದವತಿಯಿಂದ ಧಾರ್ಮಿಕ, ಸಾಮಾಜಿಕ, ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಜನಹಿತ ಕಾರ್ಯಗಳಿಂದ ಹೆಸರನ್ನು ಪಡೆದಿದೆ. ಇದರ ಭಾಗವಾಗಿ ಇದೇ ಫೆ.14ರಂದು ನಡೆಯುವ ಶ್ರೀ ಹನುಮಾನ್ ಚಾಲೀಸಾ ಕಾರ್ಯಕ್ರಮವು ಸರ್ವ ಜನ ಹಿತಕ್ಕಾಗಿ ಹಮ್ಮಿಕೊಂಡಿದೆ. ಸಾಂಸ್ಕೃತಿಕ ರಾಜಧಾನಿ ಮೈಸೂರಿನ ಜನ ಪಾಲ್ಗೊಳ್ಳಲು ಮನವಿ ಮಾಡಿದರು. ಈ ಸಂಧರ್ಭದಲ್ಲಿ ನಗರ ಬಿಜೆಪಿ ಎಸ್.ಟಿ.ಮೋರ್ಚಾ ಅಧ್ಯಕ್ಷ ಪಡುವಾರಹಳ್ಳಿ ಎಂ. ರಾಮಕೃಷ್ಣ, ನಗರ ಬಿಜೆಪಿ ಕಾರ್ಯದರ್ಶಿ ಎಂ.ಎಸ್. ಪುನೀತ್, ಯುವ ಮೋರ್ಚಾ ಅಧ್ಯಕ್ಷ ರಾಕೇಶ್ ಗೌಡ, ಜನಹಿತ ವಿವಿಧೋದ್ದೇಶ ಸಹಕಾರ ಸಂಘದ ನಿರ್ದೇಶಕ ಎಸ್ ಕೃಷ್ಣಕುಮಾರ್, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಎನ್. ಯೋಗಾನಂದ್, ಕೆ.ಗಿರೀಶ್, ಅಜಯ್ ಶಾಸ್ತ್ರೀ,ವಿಕಾಸ್ ಶಾಸ್ತ್ರೀ, ಆಶ್ರಮದ ರಮೇಶ್, ವಿನಯ್ ಬಾಬು,ಪ್ರಜ್ವಲ್,ತೇಜಸ್ ವೇಣು,ಜೆ.ಸಿ.ಬಿ.ರವಿ,ಸಂತೋಷ, ಛಾಯಾ ಇದ್ದರು.



# ದೇಶದ ಅಭಿವೃದ್ಧಿಗೆ ಶಿಕ್ಷಣ ಸಹಕಾರಿ: ವಿಶ್ವನಾಥ್ ಶೇಷಾಚಲ






ಎಚ್.ಡಿ.ಕೋಟೆ: ಮಕ್ಕಳು ಹಾಗೂ ಸಮಾಜ ಅಭಿವೃದ್ಧಿಯಾಗಬೇಕಾದರೆ ಶಿಕ್ಷಣ ಪ್ರಮುಖ ಪಾತ್ರವಹಿಸುತ್ತದೆ. ಯಾವುದೇ ದೇಶ ಬಲಿಷ್ಠವಾಗಬೇಕೆಂದರೆ ಶಿಕ್ಷಣ ಗುಣಮಟ್ಟವಾಗಿರಬೇಕು ಎಂದು ಡಾ.ಬಿ.ಆರ್. ಅಂಬೇಡ್ಕರ್ ತಿಳಿಸಿದ್ದಾರೆ ಎಂದು ಶ್ರೀವಿಶ್ವಭಾರತಿ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ವಿಶ್ವನಾಥ್ ಶೇಷಾಚಲ ಹೇಳಿದರು.

ವಿಶ್ವ ಪರ್ವ 2026ನೇ ಸಾಲಿನ ಶಾಲಾ ವಾರ್ಷಿಕೋತ್ಸವ ಸಮಾರಂಭದಲ್ಲಿ ಮಾತನಾಡಿ, ದೇಶ ಬಲಿಷ್ಠವಾಗಲು ಶಿಕ್ಷಣ ಅತಿ ಮುಖ್ಯವಾದದ್ದು, ಶಿಕ್ಷಣ ಮಕ್ಕಳು ಸಮಾಜದಲ್ಲಿ ಹೇಗಿರಬೇಕು ಎಂಬುದನ್ನು ಕಲಿಸುತ್ತದೆ. ಶಿಕ್ಷಣ ಆಹಾರ ಇದ್ದ ಹಾಗೆ. ಹಸಿದ ಮಕ್ಕಳು ಶಿಕ್ಷಣದಲ್ಲಿ ಸಾಧನೆ ಮಾಡಬಲ್ಲರು ಎಂದರು.

ಸಮವಸ್ತ್ರದ ಮೇಲೆ ಮಕ್ಕಳ ಕಲಿಕೆಯನ್ನು ಧೃಡಪಡಿಸಲು ಸಾಧ್ಯವಿಲ್ಲ. ನಮ್ಮ ಶಾಲೆಯಲ್ಲಿ ಅನುದಾನಿತ ಶಾಲೆಯ ಮಕ್ಕಳು, ಡೊನೇಷನ್ ನೀಡಿ ಓದುವ ಮಕ್ಕಳು ಇದ್ದಾರೆ. ಶಾಲೆಯಲ್ಲಿ ಶಿಕ್ಷಕರು ಆತ್ಮ ಸಾಕ್ಷಿಯಿಂದ ಬೇಧ, ಭಾವವಿಲ್ಲದೆ ಮಕ್ಕಳ ಬೌದ್ಧಿಕ ವಿಕಸನಕ್ಕೆ ಬೇಕಾಗುವ ಶಿಕ್ಷಣವನ್ನು ನೀಡುತ್ತಿದ್ದೇವೆ. ಮುಂದಿನ ವರ್ಷದಲ್ಲಿ ಕೋಟೆ ಪಟ್ಟಣದಲ್ಲಿ ಸಿ.ಬಿ.ಎಸ್.ಸಿ ಶಾಲೆ, ಬಿ.ಇ.ಡಿ ಕಾಲೇಜು ತೆರೆಯುವ ಇಂಗಿತ ವ್ಯಕ್ತ ಪಡಿಸಿದರು. ಅಂತಾರಾಷ್ಟ್ರೀಯ ಮಟ್ಟದ ಎಕ್ಸ್ಪೋಸರ್ ತಾಲೂಕಿಗೆ ತರುವ ಭರವಸೆ ನೀಡುವ ಮೂಲಕ ತಾಲೂಕಿನ ಪೋಷಕರ ಸಹಕಾರ ಇರಲಿ ಎಂದು ಮನವಿ ಮಾಡಿದರು.

**ಸಂಸ್ಕಾರವಂತ ಶಿಕ್ಷಣ ಮುಖ್ಯ**

ಮಕ್ಕಳಲ್ಲಿ ಮಾನವೀಯ ಮೌಲ್ಯಗಳು ಕ್ಷೀಣಿಸುತ್ತಿವೆ. ಪೋಷಕರು ಮಕ್ಕಳ ಅಂಕಗಳನ್ನು ಗುರಿಯಾಗಿಸದೆ ಮನೆಯಲ್ಲಿ ಸಂಸ್ಕಾರಗಳಿಗೆ ಹೊತ್ತು ನೀಡುವ ಮೂಲಕ ಮಕ್ಕಳ ಕಲಿಕೆಗೆ ಅವಕಾಶವನ್ನು ಕಲ್ಪಿಸಿಕೊಡಬೇಕು. ಶಾಲೆಯಲ್ಲಿ ಮಕ್ಕಳು 8 ಗಂಟೆಗಳ ನಂತರ, ಉಳಿದ 16ಗಂಟೆ ಮನೆಯಲ್ಲಿಯೇ ಹೆಚ್ಚು ಸಮಯ ಇರವುದರಿಂದ ಮಕ್ಕಳಿಗೆ ಹೆಚ್ಚಿನ ಕಲಿಕೆ ಯಾಗುವುದು ಮನೆಯಲ್ಲಿ. ಸಮಾಜದಲ್ಲಿ ಹಾಗೂ ಕುಟುಂಬದಲ್ಲಿ ಮಕ್ಕಳು ಹೇಗಿರಬೇಕು ಎಂಬ ಮಾನವೀಯ ಮೌಲ್ಯಗಳು ಕ್ಷೀಣಿಸುತ್ತಿವೆ. ಹೆಚ್ಚಿನ ಒತ್ತು ಕೊಟ್ಟು ಪೋಷಕರು ಸಂಸ್ಕಾರ, ಸಂಪ್ರದಾ ಯವನ್ನು ಕಲಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎನ್ ರಾಜು ತಿಳಿಸಿದರು.

ಈ ವರ್ಷ ವಿಶ್ವ ಭಾರತಿ ಶಾಲೆಯಲ್ಲಿ ಎಸ್.ಎಸ್.ಎಲ್ ಸಿಯಲ್ಲಿ 52 ಮಕ್ಕಳು ಓದುತ್ತಿದ್ದು, ಶೇ.100 ಫಲಿತಾಂಶ ಬರುವ ನಿರೀಕ್ಷೆಯೊಂದಿಗೆ ಶುಭ ಆರೈಸಿದರು. ಎಸ್.ವಿ.ಜಿ ಸೆಂಟರ್ ಆಫ್ ಎಕ್ಸಲೆನ್ಸ್ ಮೈಸೂರು ಶ್ರೀ ವಿಶ್ವ ಭಾರತಿ ಶಿಕ್ಷಣ ಸಂಸ್ಥೆ ಇವರ ಸಹಯೋಗದಲ್ಲಿ ವಿಶ್ವಪರ್ವ ಶೀರ್ಷಿಕೆಯಲ್ಲಿ ಶಾಲೆ ವಾರ್ಷಿಕೋತ್ಸವ ಕಾರ್ಯಕ್ರಮ ಶಾಲೆಯ ಆವರಣದಲ್ಲಿ ಶಾಲಾ ಮಕ್ಕಳಿಂದ ನೃತ್ಯ ಹಾಗೂ ಹಲವು ಸಂಸ್ಕೃತಿಕ ಕಾರ್ಯಕ್ರಮ ಪೋಷಕರನ್ನು ಮನರಂಜಿಸಿತ್ತು ಹಾಗೂ ಶಾಲೆಯಲ್ಲಿ ಅವಧಿಯಲ್ಲಿ ನಡೆಯುವ ಚಟುವಟಿಕೆಗಳ ವಾರ್ಷಿಕ ವರದಿ ಮಂಡನೆ ಮಾಡಿದರು.

ಶ್ರೀ ವಿಶ್ವ ಭಾರತಿ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಶ್ರುತಿ ಶಿವಣ್ಣ, ವಿಶ್ವನಾಥ್, ಆಡಳಿತಾಧಿಕಾರಿ ಜಯ ದೇವರಾಜ್ ಅರಸು, ಮೈಸೂರು ವಿಶ್ವವಿದ್ಯಾನಿಲಯದ ನಿವೃತ ಪ್ರಾಧ್ಯಾಪಕಿ ಡಾ.ಎನ್. ಎಲ್ ಶ್ರೀಮತಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾಧಿಕಾರಿ ಭಾಸ್ಕರ್, ಮೈಸೂರು ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ಎಸ್.ಟಿ.ರವಿಕುಮಾರ್, ಮಂಜುನಾಥ್, ನಂಜುಂಡಸ್ವಾಮಿ ಹರೀಶ್, ಪಲ್ಲವಿ, ಸುನೀಲ್, ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಾ.ಎಸ್.ಡಿ ಕುಮಾರಸ್ವಾಮಿ, ಸಂಯೋಜಕ ಶಿವ ರಾಜು, ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಕಂದಸ್ವಾಮಿ, ಪ್ರೌಢ ಶಾಲ ಮುಖ್ಯ ಶಿಕ್ಷಕ ಕುಮಾರ್, ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕ ಪರಮೇಶ, ಉಪನ್ಯಾಸಕರಾದ ವಾಸು, ಕಾಳರಾಜು, ಭರತ್ ರಾಜ್, ಪ್ರದೀಪ್ ಕುಮಾರ್, ಭೈರೇಗೌಡ, ರಾಜೇಶ್, ರಮೇಶ್, ಗೀತಾ, ಪುಷ್ಪಾವತಿ, ಭಾಗ್ಯವತಿ, ಶಿವ ಕುಮಾರ್ ಹಾಗೂ ಮಕ್ಕಳು ಪೋಷಕರು ಇದ್ದರು.

# ಅವೈಜ್ಞಾನಿಕ ಬೃಹತ್ ಮೈಸೂರು

## ಪ್ರಜ್ಞಾವಂತ ನಾಗರಿಕರಿಂದ ಯೋಜನೆಗೆ ಆಕ್ಷೇಪಣೆ ಸಲ್ಲಿಕೆ



ಮೈಸೂರು: ಪ್ರಜ್ಞಾವಂತ ನಾಗರಿಕರು ಮತ್ತು ನಾಗರಿಕ ಸಮಾಜದ ಸಂಘಟನೆಗಳ ಒಕ್ಕೂಟವು ಪ್ರಸ್ತಾವಿತ 'ಬೃಹತ್ ಮೈಸೂರು' ಮಹಾನಗರ ಪಾಲಿಕೆ ವಿಸ್ತರಣೆ ಯೋಜನೆಗೆ ಸಂಬಂಧಿಸಿದಂತೆ ವಿಸ್ತೃತ ಆಕ್ಷೇಪಣೆಯನ್ನು ಸಲ್ಲಿಸಿತು. ಪ್ರಸ್ತುತ ಹೊರಡಿಸಲಾಗಿರುವ ಅಧಿಸೂಚನೆಯನ್ನು ತಕ್ಷಣ ಹಿಂಪಡೆದು, ವೈಜ್ಞಾನಿಕ ಹಾಗೂ ಜನಸಹಭಾಗಿತ್ವದ ಮೂಲಕ ಬೃಹತ್ ಮೈಸೂರು ಮಹಾನಗರಪಾಲಿಕೆ ರಚಿಸುವಂತೆ ಸರ್ಕಾರವನ್ನು ಆಗ್ರಹಿಸಿದರು.

"ಭವಿಷ್ಯದರ್ಶಿ ಮಹಾ ಮೈಸೂರು" ಸಂಘಟನೆಯ ಪ್ರವರ್ತಕ ಮತ್ತು ಬಿಜೆಪಿ ಮುಖಂಡ, ನರರೋಗ ತಜ್ಞ ಡಾ.ಸುಶ್ರುತ ಗೌಡ ನೇತೃತ್ವದ ನಗರದ ಪ್ರಜ್ಞಾವಂತ ನಾಗರೀಕರತಂಡ ಬೆಂಗಳೂರಿನಲ್ಲಿ ನಗರಾಭಿವೃದ್ಧಿ ಇಲಾಖೆಯ ಪೌರಾಡಳಿತ ನಿರ್ದೇಶನಾಲಯದ ಸಹಾಯಕ ನಿರ್ದೇಶಕಿ ಕೆ.ಡಿ.ಶೈಲಾರನ್ನು ಭೇಟಿ ಮಾಡಿ ಆಕ್ಷೇಪಣೆ ಸಲ್ಲಿಸಿತು. ನಮ್ಮ ಮೈಸೂರು ಫೌಂಡೇಶನ್, ಕ್ರಿಸ್ಟಲ್ ಗ್ರೀನ್ ಬಡ್ಸ್, ಕ್ರೆಡಿಟ್–ಐ ಸಂಸ್ಥೆ, ರಾಷ್ಟ್ರೀಯ ಮಾನವ ಹಕ್ಕುಗಳ ಮತ್ತು ಸಾಮಾಜಿಕ ನ್ಯಾಯ ಸಮಿತಿ, ಕನ್ನಡ ರಕ್ಷಣಾ ವೇದಿಕೆ, ಮೈಸೂರು ಗ್ರಾಹಕರ ಪರಿಷತ್ತು, ಮಿಷನ್ ಮೋದಿ ಡೆಮಾಕ್ರಸಿ ಡೆವಲಪ್‌ಮೆಂಟ್ ಟ್ರಸ್ಟ್, ಯೂತ್ ಫಾರ್ ನೇಷನ್ ಒಳಗೊಂಡ ಹಲವಾರು ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳು ಹಾಗೂ ಸ್ವಸಹಾಯ ಸಂಘಗಳ ಪ್ರತಿನಿಧಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದು ಬೃಹತ್ ಮೈಸೂರು ಮಹಾನಗರ ಪಾಲಿಕೆ ಅಧಿಸೂಚನೆ ವಿರೋಧಿಸಿದರು.

ಮೈಸೂರು ಗ್ರಾಹಕರ ಪರಿಷತ್ತಿನ ಸ್ಥಾಪಕ ಅಧ್ಯಕ್ಷ ಡಾ.ಭಾಮಿ ವಿ ಶೆಣೈ ಮಾತನಾಡಿ, ಯೋಜನೆಯ ಪರಿಸರ ಪರಿಣಾಮಗಳ ಮೌಲ್ಯಮಾಪನ ನಡೆದಿಲ್ಲ ಎಂದು ದೂರಿದರು.

### ನಾವು ಅಭಿವೃದ್ಧಿಗೆ ವಿರುದ್ಧವಾಗಿಲ್ಲ

**ಈ ಸಂದರ್ಭದಲ್ಲಿ ಮಾತನಾಡಿದ ಡಾ.ಸುಶ್ರುತ ಗೌಡ ನಾವು ಅಭಿವೃದ್ಧಿಗೆ ವಿರುದ್ಧವಾಗಿಲ್ಲ. ನಗರಗಳು ಬೆಳೆಯಬೇಕು ಮತ್ತು ಮೂಲಸೌಕ ರ್ಯಗಳು ಸುಧಾರಿಸಬೇಕು. ಆದರೆ, ಸರಿ ಯಾದ ಪೂರ್ವತಯಾರಿ– ಯೋಜನೆ, ವೈಜ್ಞಾನಿಕ ದತ್ತಾಂಶ ಮತ್ತು ಪ್ರಜಾಸತ್ತಾತ್ಮಕ ಮಾದರಿಯ ಸಮಾಲೋಚನೆ ಇಲ್ಲದ, ಏಕ ಪಕ್ಷೀಯ ಅವೈಜ್ಞಾನಿಕ ಅಭಿವೃದ್ಧಿಯು ಪ್ರಗತಿ ಯಲ್ಲ. ಇದು ಭವಿಷ್ಯದಲ್ಲಿ ಒಳ್ಳೆಯದಕ್ಕಿಂತ ಹೆಚ್ಚು ಹಾನಿಯನ್ನು ಉಂಟು ಮಾಡಬಹುದು. ಪ್ರಸ್ತುತ ಹೊರಡಿಸಲಾಗಿರುವ ಪ್ರಸ್ತಾವನೆಯಲ್ಲಿ ಪಾರದರ್ಶಕತೆ ಮತ್ತು ಸಮರ್ಪಕ ಸಿದ್ಧತೆಯ ಕೊರತೆಯಿದೆ. ಈ ವಿಸ್ತರಣೆಯನ್ನು ಹಂತ ಹಂತವಾಗಿ ಮತ್ತು ಸಾರ್ವಜನಿಕ ಸಹಭಾಗಿತ್ವದೊಂದಿಗೆ ಯೋಜಿಸಬೇಕು. ದುರದೃಷ್ಟವಶಾತ್, ಪ್ರಸ್ತುತ ಬೃಹತ್ ಮೈಸೂರು ಪ್ರಸ್ತಾವನೆಯು ಈ ಮೂಲಭೂತ ತತ್ವಕ್ಕೆ ವಿರುದ್ಧವಾಗಿದೆ ಎಂದು ಟೀಕಿಸಿದರು.**

"ಯಾವುದೇ ಪರಿಸರ ಪ್ರಭಾವದ ಮೌಲ್ಯಮಾಪನ ವರದಿ ಸಾರ್ವಜನಿಕವಾಗಿ ಲಭ್ಯವಿಲ್ಲ. ಅಗತ್ಯ ಮುನ್ನೆಚ್ಚರಿಕೆಗಳಿಲ್ಲದೆ ಈ ಯೋಜನೆಯನ್ನು ಜಾರಿಗೆ ತಂದರೆ ಕೆರೆಗಳು, ಜೌಗು ಪ್ರದೇಶಗಳು, ಹಸಿರು ವಲಯಗಳು ಮತ್ತು ವನ್ಯಜೀವಿ ಕಾರಿಡಾರ್‌ಗಳ ಮೇಲೆ ತೀವ್ರ ಪರಿಣಾಮ ಬೀರುತ್ತದೆ ಎಂದು ಎಚ್ಚರಿಸಿದರು. ಗ್ರಾಮ ಸಭೆ ಮತ್ತು ವಾರ್ಡ್ ಸಮಿತಿಗಳ ಕಡೆಗಣನೆ, ಮಾಸ್ಟರ್ ಪ್ಲಾನ್ ಅಲಭ್ಯತೆ, ನಗರ ಎದುರಿಸುತ್ತಿರುವ ನೀರಿನ ಅಭಾವ, ಒಳ ಚರಂಡಿ ಅವ್ಯವಸ್ಥೆ, ಪ್ರವಾಹ, ಸಂಚಾರ ದಟ್ಟಣೆ ಮತ್ತು ಘನತ್ಯಾಜ್ಯ ವಿಲೇವಾರಿಯಂತಹ ಸಮಸ್ಯೆಗಳನ್ನು ಬಗೆಹರಿಸದೆ ನಗರ ವಿಸ್ತರಣೆ ಮಾಡುತ್ತಿರುವುದು. ರೈತರು ಮತ್ತು ಗ್ರಾಮೀಣ ಜೀವನೋಪಾಯದ ಮೇಲೆ ಪ್ರತಿಕೂಲ ಪರಿಣಾಮ ಸಾಧ್ಯತೆ, ಹೆಚ್ಚಿನ ತೆರಿಗೆ ಮತ್ತು ಸೌಲಭ್ಯಗಳ ಮೇಲಣ ಶುಲ್ಕದಿಂದ ಜೀವನ ವೆಚ್ಚ ಏರಿಕೆ ಮೊದಲಾದ ಅಂಶಗಳನ್ನು ಮುಂದಿಟ್ಟು ಬೃಹತ ಮೈಸೂರು ಮಾಡದಂತೆ ಕೋರಿದರು. ನಮ್ಮ ಮೈಸೂರು ಫೌಂಡೇಶನ್‌ನ ದಶರಥ್ ಮಾತನಾಡಿದರು.

ಶ್ರೀ ಮಂಟೇಸ್ವಾಮಿ ದೇವಸ್ಥಾನ

## ನೂತನ ರಾಜಗೋಪುರ ಉದ್ಘಾಟನೆ

ಚಾಮರಾಜನಗರ, ತಾಲ್ಲೂಕಿನ ಗಡಿ ಭಾಗದಲ್ಲಿರುವ ತಾಳವಾಡಿ ದೊಡ್ಡ ಗಾಜನೂರು ಗ್ರಾಮದಲ್ಲಿ ಧರೆಗೆ ದೊಡ್ಡವರು ಶ್ರೀ ಮಂಟೇಸ್ವಾಮಿ ಹಾಗೂ ಸಿದ್ದಪ್ಪಾಜಿ ದೇವಸ್ಥಾನದ ನೂತನ ರಾಜಗೋಪುರದ ಕುಂಭಾಭಿಷೇಕ ಮಹೋತ್ಸವದ ಉದ್ಘಾಟನೆಯನ್ನು ಇಂದು ಬೋಪ್ಪೇಗೌಡನ ಪುರದ ಶ್ರೀಗಳು ನೆರವೇರಿಸಿದರು.

ರಾಜಗೋಪುರ ಉದ್ಘಾಟನಾ ಕಾರ್ಯಕ್ರಮದ ಅಂಗವಾಗಿ ದೇವಸ್ಥಾನದಲ್ಲಿ ಕಳಸ ಸ್ಥಾಪನೆ, ಹೋಮ ಸೇರಿದಂತೆ ವಿಶೇಷ ಪೂಜಾ ಕಾರ್ಯಕ್ರಮಗಳು ಜರುಗಿದವು. ಈ ಪೂಜಾ ಕಾರ್ಯಕ್ರಮಕ್ಕೆ ತಾಳವಾಡಿ, ಹೊಸೂರು, ತಿಗಣಾರೆ, ಪಣಕಹಳ್ಳಿ,




ಚಿಮಟಹಳ್ಳಿ, ಅರಳವಾಡಿ, ಮೆಟ್ಟಳವಾಡಿ, ಇಗ್ಗಲೂರು, ಚಿಕ್ಕಳ್ಳಿ, ತಲೆಮಲ್ಲೆ, ನೈತಾಲಪುರ, ಚಿಕ್ಕಹೊಳೆ, ವೆಂಕಟಯ್ಯನ ಛತ್ರ, ಬಿಸಲಾವಾಡಿ ಸೇರಿದಂತೆ ವಿವಿಧ ಭಾಗಗಳಿಂದ ಸಾವಿರಾರು ಸಂಖ್ಯೆಯ ಭಕ್ತರು ಭಾಗವಹಿಸಿ ದೇವರ ದರ್ಶನ ಪಡೆದು ಪುನೀತರಾದರು. ಗ್ರಾಮಸ್ಥರ ಸಹಕಾರದಿಂದ ನಡೆದ ರಾಜಗೋಪುರ ಉದ್ಘಾಟನೆ ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಾವಿರಾರು ಸಂಖ್ಯೆಯ ಭಕ್ತರಿಗೆ ಅನ್ನ ಸಂತರ್ಪಣೆ ಏರ್ಪಾಡು ಮಾಡಲಾಗಿತ್ತು, ವೇದಿಕೆಯಲ್ಲಿ ಮುಖಂಡರು ಹಾಗೂ ಗಣ್ಯರಿಗೆ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಮುಖಂಡ ರಾದ ಮಾ ದಾಣಿ ನಾಯ್ಕ, ಸಿ ವೆಂಕಟಾಚಲ, ಲಿಂಗರಾಜು, ಬಂಗಾರನಾಯ್ಕ, ಕದಿರಯ್ಯ ಮಾಸ್ಟರ್, ಜಯರಾಜು, ಮಾದೇಶ ಮಾಸ್ಟರ್, ಶ್ರೀನಿವಾಸ ಮಾಸ್ಟರ್, ಸೋಮಣ್ಣ, (ದೇವ ಶೆಟ್ರು) ಎನ್. ವೆಂಕಟಾಚಲ, ಶಿವಣ್ಣ ಶೆಟ್ರು, ಗುರುಸಿದ್ಧ ಶೆಟ್ಟರು ಸೋಮಣ್ಣ, ಶಂನಂಜ ನಾಯಕ ಸೇರಿದಂತೆ ಇತರರು ಇದ್ದರು.

ಜಿಲ್ಲೆಗೆ ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರ ಭೇಟಿ

## ಕುಂದುಕೊರತೆ ಸಮಸ್ಯೆಗಳಿದ್ದಲ್ಲಿ ಗಮನಕ್ಕೆ ತನ್ನಿ

ಚಾಮರಾಜನಗರ, ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಹೆಚ್.ಕೃಷ್ಣ ಅವರು ಚಾಮರಾಜನಗರ ಜಿಲ್ಲೆಗೆ ಭೇಟಿ ನೀಡಿದ್ದು, ಆಯೋಗದ ವ್ಯಾಪ್ತಿಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಬರುವ 14 ಇಲಾಖೆಗಳಿಗೆ ಸಂಬಂಧಿಸಿದಂತೆ ಕುಂದುಕೊರತೆ, ಸಮಸ್ಯೆ, ದೂರುಗಳಿದ್ದಲ್ಲಿ ಆಯೋಗದ ಅಧ್ಯಕ್ಷರಿಗೆ ತಿಳಿಸಬಹುದಾಗಿದೆ.



ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ. ಹೆಚ್. ಕೃಷ್ಣ ಅವರು ಚಾಮರಾಜನಗರ ಜಿಲ್ಲೆಗೆ 3 ದಿನಗಳ ಭೇಟಿಗಾಗಿ ಆಗಮಿಸಿದ್ದಾರೆ. ಆಯೋಗದ ವ್ಯಾಪ್ತಿಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವ ಹಾರಗಳ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ಅಂಗನವಾಡಿ ಪೌಷ್ಠಿಕಾಂಶ), ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ (ಮಧ್ಯಾಹ್ನದ ಬಿಸಿ ಯೂಟ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪಂಚಾಯತ್ ರಾಜ್ ಇಲಾಖೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕಾರ್ಮಿಕ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ (ವಸತಿ ಯೋಜನೆ), ಕೃಷಿ ಇಲಾಖೆ, ಸಹಕಾರ ಇಲಾಖೆ (ಪರಿಕರ ವಿತರಣಾ ಸಂಸ್ಥೆಗಳು) ಇಲಾಖೆಗಳು ಬರಲಿವೆ. ಆಹಾರ ಭದ್ರತಾ ಕಾಯ್ದೆ ಫಲಾನುಭವಿಗಳಿಗೆ ಈ ಇಲಾಖೆಗಳು ಪಡಿತರ, ಪೌಷ್ಠಿಕ ಆಹಾರ, ಬಿಸಿಯೂಟ ಒದಗಿಸುವ ಜವಾಬ್ದಾರಿಯು ಹೊಂದಿವೆ. ಸಂಬಂಧಪಟ್ಟ ಇಲಾಖೆಗಳಿಗೆ ಸಂಬಂಧಿಸಿದಂತೆ ಕುಂದುಕೊರತೆ, ಅಹವಾಲುಗಳು, ಸಮಸ್ಯೆ ದೂರುಗಳಿದ್ದಲ್ಲಿ ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ. ಹೆಚ್. ಕೃಷ್ಣ ಅವರ ಗಮನಕ್ಕೆ ತರಬಹುದಾಗಿದೆ. ಆಯೋಗದ ಅಧ್ಯಕ್ಷರಾದ ಡಾ. ಕೃಷ್ಣ ಅವರ ಮೊ.ಸಂ 9448466099 ಆಗಿದ್ದು ಸಮಸ್ಯೆಗಳಿದ್ದಲ್ಲಿ ಸಂಪರ್ಕಿಸುವಂತೆ ಕೋರಲಾಗಿದೆ

## ನಾಳೆಯಿಂದ ರಾಜ್ಯಮಟ್ಟದ ಕುಸ್ತಿ



ಮೈಸೂರು: ಕರ್ನಾಟಕ ಕುಸ್ತಿ ಸಂಘ ಹಾಗೂ ಜಿಲ್ಲಾ ಸಂಘಗಳ ಸಂಯುಕ್ತಾಶ್ರಯದಲ್ಲಿ ಫೆ. 6 ರಿಂದ 8 ರವರೆಗೆ ನಂಜನಗೂಡಿನ ಊಟಿ ರಸ್ತೆಯ ಜೂನಿಯರ್ ಕಾಲೇಜು ಮೈದಾನದಲ್ಲಿ ರಾಜ್ಯ ಮಟ್ಟದ ಹೊನಲು ಬೆಳಕಿನ ಪುರುಷರ ಮತ್ತು ಮಹಿಳೆಯರ ಕುಸ್ತಿ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಸಂಘಟನಾ ಅಧ್ಯಕ್ಷ ಪೈ.ಪ್ರಸನ್ನ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಸಂಸದ ಸುನಿಲ್ ಬೋಸ್ ಹಾಗೂ ಶಾಸಕ ದರ್ಶನ್ ಧ್ರುವನಾರಾಯಣ ಸಾರಥ್ಯ ವಹಿಸಿದ್ದಾರೆ. ಅಧಿಕೃತವಾಗಿ ಫೆ. 7 ರ ಬೆಳಗ್ಗೆ 11ಕ್ಕೆ ಜ್ಞಾನಪ್ರಕಾಶ ಸ್ವಾಮೀಜಿಯವರ ಸಾನ್ನಿಧ್ಯದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ, ಸುನಿಲ್ ಬೋಸ್, ದರ್ಶನ್ ಧ್ರುವನಾರಾಯಣ್, ಡಾ. ಯತೀಂದ್ರ ಸಿದ್ದರಾಮಯ್ಯ ಚಾಲನೆ ನೀಡಲಿದ್ದಾರೆ ಎಂದರು. ಸಮಾರೋಪ ಸಮಾರಂಭ ಫೆ. 8 ರ ಸಂಜೆ 4ಕ್ಕೆ ನಡೆಯಲಿದೆ. ಡಾ.ಎಚ್.ಸಿ. ಮಹದೇವಪ್ಪ, ಸುನಿಲ್ ಬೋಸ್, ದರ್ಶನ್ ಧ್ರುವನಾರಾಯಣ್ ಇನ್ನಿತರರು ಅತಿಥಿಗಳಾಗಿರುವರು. ಈ ಪಂದ್ಯಾವಳಿಯಲ್ಲಿ ರಾಜ್ಯದ ಎಲ್ಲೆಡೆಯಿಂದ ಸುಮಾರು ಕುಸ್ತಿ ಪಟುಗಳು ಆಗಮಿಸಲಿದ್ದಾರೆ. ಇಲ್ಲಿ ವಿಜೇತರಾದವರು ರಾಷ್ಟ್ರ ಮಟ್ಟದ ಕುಸ್ತಿ ಪಂದ್ಯಾವಳಿಗೆ ನೇರವಾಗಿ ಆಯ್ಕೆಯಾಗಲಿದ್ದಾರೆ. ವಿಜೃತರೆಲ್ಲರಿಗೂ ಗದೆ ಹಾಗೂ ನಗದು ಬಹುಮಾನ ನೀಡಲಾಗುವುದು ಎಂದು ಮಾಹಿತಿ ನೀಡಿದರು. ಮಹದೇವಮೂರ್ತಿ, ಗಿರೀಶ್ ತೊರೆಮಾವು, ಡಾ.ಕೆ. ವಿನೋದ್‌ಕುಮಾರ್, ರ?ಯಾಂಬೋ ಕಿರಣ್, ಶ್ರೀಕಂಠ ಪ್ರಸಾದ್ ಹಾಜರಿದ್ದರು.

## ಪರಿಣಾಮಕಾರಿಯಾಗಿ ಶಿಕ್ಷಣ ಕೊಡಿ

ಮೈಸೂರು: ಶಿಕ್ಷಕರು ಸ್ಮಾರ್ಟ್ ಬೋರ್ಡ್ ಹಾಗೂ ಕಂಪ್ಯೂಟರ್ ತರಬೇತಿ ಕಲಿಕೆಯನ್ನು ಹೆಚ್ಚಿನ ರೀತಿಯಲ್ಲಿ ಪಡೆದುಕೊಂಡು ಆಶ್ರಮ ಶಾಲೆಯ ಮಕ್ಕಳಿಗೆ ಪರಿಣಾಮಕಾರಿಯಾಗಿ ಶಿಕ್ಷಣವನ್ನು ಕೊಡಬೇಕಿದೆ ಎಂದು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಉಪನಿರ್ದೇಶಕಿ ಹೆಚ್.ಎಸ್. ಗಿರಿಜಾಂಬ ತಿಳಿಸಿದರು.

ಪರಿಶಿಷ್ಟವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ವತಿಯಿಂದ ಟಿ.ನರಸೀಪುರ ರಸ್ತೆಯಲ್ಲಿರುವ ಮೈಸೆಮ್ ಇಂಜಿನಿಯರಿಂಗ್ ಕಾಲೇಜಿನಲ್ಲಿ ಬುಧವಾರ ನಡೆದ ಮಹರ್ಷಿ ವಾಲ್ಮೀಕಿ ಆಶ್ರಮ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಇಂಗ್ಲಿಷ್, ಗಣಿತ ಮತ್ತು ವಿಜ್ಞಾನ ಶಿಕ್ಷಕರಿಗೆ ಸ್ಮಾರ್ಟ್ ಬೋರ್ಡ್, ಕಂಪ್ಯೂಟರ್ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾನಾಡಿದ ಅವರು ಈತರಬೇತಿಗೆ ಮೈಸೂರು, ಕೊಡಗು, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳ 50 ಜನ ಶಿಕ್ಷಕರು ತರಬೇತಿಗೆ ಬಂದಿದ್ದು, ಶಿಕ್ಷಕರು ಆಧುನಿಕ ಡಿಜಿಟಲ್ ಉಪಕರಣಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಬುಡಕಟ್ಟು ಸಮುದಾಯದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡುವ ಉದ್ದೇಶದಿಂದ ಸರ್ಕಾರ ಈ ತರಬೇತಿ ಕಾರ್ಯಾಗಾರವನ್ನು ಆಯೋಜಿಸಿದ್ದು, ಇದರ



ಸದುಪಯೋಗವನ್ನು ಶಿಕ್ಷಕರು ಉಪಯೋಗಿಸಿಕೊಳ್ಳಬೇಕು ಎಂದರು. ಮೈಸೆಮ್ ಕಾಲೇಜಿನ ಪ್ರಾಂಶುಪಾಲ ಡಾ.ಟಿ.ಎಸ್.ಮಂಜುನಾಥ್ ಮಾತನಾಡಿ ಸ್ಮಾರ್ಟ್ ಬೋರ್ಡ್ ಮತ್ತು ಕಂಪ್ಯೂಟರ್ ತರಬೇತಿಗೆ ಬೇಕಾದ ಎಲ್ಲಾ ಸಹಕಾರವನ್ನು ನೀಡುತ್ತೇವೆ ನಮ್ಮಲ್ಲಿರುವ ನುರಿತ ಪ್ರೊಫೆಸರ್‌ಗಳು ತರಬೇತಿಯನ್ನು ನೀಡುತ್ತಾರೆ. ಇದರ ಸದುಪಯೋಗವನ್ನು ಶಿಕ್ಷಕರು ಪಡೆದುಕೊಳ್ಳಬೇಕು ಎಂದರು. ಸಮಾರಂಭದಲ್ಲಿ ರಾಷ್ಟ್ರಪ್ರಶಸ್ತಿ ವಿಜೇತ ಶಿಕ್ಷಕ ಮಧುಸೂದನ್, ಕಾಲೇಜಿನ ಪ್ರಾಧ್ಯಾಪಕರಾದ ಡಾ. ಜಯರಾಂ, ಡಾ.ಹರ್ಷಕುಮಾರ್, ಪ್ರೊ.ಅಶ್ವಿನಿ, ಪ್ರೊ.ಬಿ.ಆರ್.ಸಂತೋಷ್, ಪ್ರೊ.ಮಾಧುರಿ, ಪ್ರೊ.ಪ್ರಜ್ವಲ್, ನಾಗೇಂದ್ರ ಹಬ್ಬಾರ್ ಸ್ವಾಗತಿಸಿದರು. ಭರತ್ ಕುಮಾರ್, ಮಮತ, ಸಿದ್ದರಾಜು ಹಾಜರಿದ್ದರು.

ಕುವೆಂಪು ಕನ್ನಡ ಅದ್ಯಯನ ಸಂಸ್ಥೆಯ ನಿರ್ದೇಶಕರಾದ ಪ್ರೊ.ಎನ್.ಕೆ.ಲೋಲಾಕ್ಷಿ ಅಭಿಪ್ರಾಯ

## ಪಠ್ಯಗಳಲ್ಲಿ ಪ್ರಾದೇಶಿಕತೆಗೆ ಹೆಚ್ಚು ಒತ್ತು ನೀಡಿ

ಮೈಸೂರು: ಎನ್‌ಇಪಿ ಮತ್ತು ಎಸ್‌ಇಪಿ ಬಂದ ಸಂದರ್ಭದಲ್ಲಿ ಪ್ರಾದೇಶಿಕವಾದಂತಹ ಪಠ್ಯಗಳನ್ನು ಹೆಚ್ಚು ಇಡಬೇಕು ಎಂದು ಸೂಚಿಸಲಾಗಿದೆ. ಹಾಗಾಗಿ ಪ್ರಾದೇಶಿಕತೆ ಎನ್ನುವುದು ಪಠ್ಯಗಳಲ್ಲಿ ಕಾಣಿಸಬೇಕು ಎಂದು ಕುವೆಂಪು ಕನ್ನಡ ಅದ್ಯಯನ ಸಂಸ್ಥೆಯ ನಿರ್ದೇಶಕರಾದ ಪ್ರೊ.ಎನ್.ಕೆ.ಲೋಲಾಕ್ಷಿ ಅಭಿಪ್ರಾಯಪಟ್ಟರು.

ನಗರದ ಮಾಳವೀಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದಲ್ಲಿ ಕನ್ನಡ ವಿಭಾಗ ಹಾಗೂ ಕನ್ನಡ ಅಧ್ಯಯನ ಮಂಡಳಿ ವಿಭಾಗದಿಂದ ರೂಸಾ ಯೋಜನೆಯಡಿ ಆಯೋಜಿಸಿರುವ ಪದವಿ ಪಠ್ಯ ರಚನೆ–ಬೋಧನೆ ಪ್ರಶ್ನೆಪತ್ರಿಕೆ ತಯಾರಿ ಮತ್ತು ಮೌಲ್ಯಮಾಪನದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದಕ್ಷಿಣ ಕನ್ನಡಕ್ಕೆ ಹೋದರೆ ಕುವೆಂಪು, ಮಲೆ ಮಹದೇಶ್ವರ, ಮಂಟೇಸ್ವಾಮಿ, ಯಾರೆಂದು ಗೊತ್ತಿಲ್ಲ. ಬೆಂಗಳೂರಿನ ಕವಿಗಳಲ್ಲಿ ಪಠ್ಯಗಳಲ್ಲಿ ಇಡುತ್ತೇವೆ ಎಂದರೆ ನಮ್ಮ ಪ್ರಾದೇಶಿಕವಾದಂತಹ ಮಂಟೇಸ್ವಾಮಿ, ಮಲೆ ಮಹದೇಶ್ವರ ಸ್ವಾಮಿ, ಚಾಮುಂಡಿ, ಯದುವಂಶದ ಕೃತಿಗಳನ್ನು ಓದಿಸುವವರು ಯಾರು ಎಂದು ಪ್ರಶ್ನಿಸಿದರು.




ಶಿಕ್ಷಕರು ವಿದ್ಯಾರ್ಥಿಗಳಿಗೆ ಸೃಜನಾತ್ಮಕವಾಗಿ ಯೋಚನೆ ಮಾಡುವ ಶಕ್ತಿಯನ್ನು ಬೆಳೆಸುವದರ ಜತೆಗೆ ಜೀವನಕ್ಕಾಗಿ ಬೇಕಾಗುವ ಕೌಶಲ್ಯಗಳನ್ನು ಮೈಗೂಡಿಸುವ ಕೆಲಸ ಮಾಡಬೇಕು. ಇಂದು ಮಕ್ಕಳಿಗೆ 100 ಅಂಕ ತೆಗೆಯುವ ಪಾಠ ಅಥವಾ ಪರೀಕ್ಷೆಯಲ್ಲ. ಅವರು ಎಷ್ಟೇ ಅಂಕ ಪಡೆದರೂ ಕ್ರಿಯಾತ್ಮಕವಾಗಿ ಏನನ್ನು ಸೃಷ್ಟಿ ಮಾಡುತ್ತಾರೆ ಎಂಬುದು ಮುಖ್ಯ. ಮಕ್ಕಳಿಗೆ ಪಠ್ಯಪುಸ್ತಕಗಳು ಅನುಭವವಾಗಬೇಕು. ಬರೆಯುವ ಶಕ್ತಿ, ಕಥೆಯನ್ನು ಬರೆಯುವ, ವಿಮರ್ಶೆಗಳನ್ನು ಬರೆಯುವುದನ್ನು ಕಲಿಸಬೇಕು ಎಂದು ತಿಳಿಸಿದರು. ಮಹಾರಾಜ ಕಾಲೇಜಿನ ಪ್ರಾಂಶುಪಾಲ ಪ್ರೊ.ವಿ.ಷಣ್ಮುಗಂ, ಎಂಎಂಟಿಸಿ ನಿರ್ದೇಶಕಿ ಎಚ್.ಪಿ.ಜ್ಯೋತಿ, ಮಹಾರಾಜ ಕಾಲೇಜಿನ ಕನ್ನಡ ಅಧ್ಯಯನ ವಿಭಾಗದ ಮುಖ್ಯಸ್ಥೆ ಪ್ರೊ.ಡಿ.ವಿಜಯಲಕ್ಷ್ಮಿ, ಕನ್ನಡ ಸಂಘದ ಸಂಚಾಲಕಿ ಪ್ರೊ.ಬಿ.ಪಿ.ಆಶಾಕುಮಾರಿ, ಕನ್ನಡ ಅಧ್ಯಯನ ಮಂಡಳಿಯ ಸದಸ್ಯ ಡಾ.ಟಿ.ಕೆ.ಕೆಂಪೇಗೌಡ ಹಾಜರಿದ್ದರು.

# ಬಾಲ್ಯ ವಿವಾಹವು ಸಾಮಾಜಿಕ ಪಿಡುಗು

## ಸಾಮಾಜಿಕ ಪಿಡುಗನ್ನು ಹೋಗಲಾಡಿಸಲು ಶಿಕ್ಷಣದಿಂದ ಮಾತ್ರ ಸಾಧ್ಯ: ಡಾ. ಕುಮಾರ

**ಮದ್ದೂರು :** ಬಾಲ್ಯ ವಿವಾಹ ಸಾಮಾಜಿಕ ಪಿಡುಗು . ಹೀಗಾಗಿ ಬಾಲ್ಯ ವಿವಾಹ ಮುಕ್ತ ಜಿಲ್ಲೆಯಾಗಿ ಮಾಡುವುದು ಸಾರ್ವಜನಿಕರ ಹೊಣೆಗಾರಿಕೆಯಾಗಿದೆ. ಜಿಲ್ಲೆಯಲ್ಲಿ ಬಾಲ್ಯ ವಿವಾಹವು ಕಳೆದ ಮೂರು ವರ್ಷಗಳಿಗೆ ಹೋಲಿಕೆ ಮಾಡಿದರೆ ಈ ವರ್ಷ 14 ಕ್ಕೆ ಇಳಿಕೆ ಯಾಗಿದೆ ಬಾಲ್ಯ ವಿವಾಹ ಮುಕ್ತ ಜಿಲ್ಲೆಯಾಗಿ ಮಾಡಬೇಕು ಎಂದು ಜಿಲ್ಲಾಧಿಕಾರಿ ಕುಮಾರ್ ಹೇಳಿದರು.

ಬಾಲ್ಯವಿವಾಹ ಮುಕ್ತ ಮಂಡ್ಯ ಜಿಲ್ಲೆಯ ಅಭಿಯಾನದ ಅಂಗವಾಗಿ, ಬುಧವಾರ ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಬಾಲ್ಯವಿವಾಹದ ವಿರುದ್ಧ ಬೃಹತ್ ಜನಜಾಗೃತಿ ಜಾಥಾ ಹಾಗೂ ಪ್ರತಿಜ್ಞಾ ವಿಧಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹೆಣ್ಣಿಗೆ ಸ್ಥಾನಮಾನ ಕೊಡುವುದರಿಂದ ಜಿಲ್ಲೆಯ ಅಭಿವೃದ್ಧಿಯಾಗಲು ಸಾಧ್ಯ.ಕಾನೂನು ಉಲ್ಲಂಘನೆ ಆಗದಂತೆ ನೋಡಿಕೊಳ್ಳವುದರ ಜೊತೆ ಮಾನವೀಯತೆ ಹೃದಯವಂತಿಕೆಯನ್ನು ಬೆಳೆಸಿಕೊಳ್ಳಬೇಕು. ಅನಕ್ಷರತೆ ಸಾಂಪ್ರದಾಯಿಕ ಮೂಡನಂಬಿಕೆಗಳನ್ನು ಹೋಗಲಾಡಿಸಬೇಕು



ಎಂದು ತಿಳಿಸಿದರು. ಈ ಜಾಥಾದಲ್ಲಿ ಜಿಲ್ಲಾ ಆಡಳಿತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ವಿವಿಧ ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿಗಳು, ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಭಾಗವಹಿಸಿದರು. ಬಾಲ್ಯವಿವಾಹವು ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಭವಿಷ್ಯಕ್ಕೆ ಗಂಭೀರ ಹಾನಿಯನ್ನುಂಟುಮಾಡುವುದರಿಂದ, ಅದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಬೇಕಾದ ಅಗತ್ಯವಿದೆ ಎಂಬ ಸಂದೇಶವನ್ನು ಜಾಥಾ ಮೂಲಕ ಸಾರಲಾಯಿತು.

ಕಾರ್ಯಕ್ರಮದ ಅಂತ್ಯದಲ್ಲಿ ಭಾಗವಹಿಸಿದ ಎಲ್ಲರೂ ? ಬಾಲ್ಯವಿವಾಹವನ್ನು ಮಾಡಿಸದೇ, ಕಂಡರೆ ತಡೆದು, ಮಕ್ಕಳ ಹಕ್ಕುಗಳನ್ನು ರಕ್ಷಿಸುತ್ತೇವೆ? ಎಂಬ ಪ್ರತಿಜ್ಞೆಯನ್ನು ಸ್ವೀಕರಿಸಿದರು.

ಬಾಲ್ಯವಿವಾಹ ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬ ನಾಗರಿಕನ ಸಹಕಾರ ಅತ್ಯಗತ್ಯವೆಂದು ಈ ಸಂದರ್ಭದಲ್ಲಿ ಮನವಿ ಮಾಡಲಾಯಿತು.

ಜಿಲ್ಲಾ ಕಾನೂನು ಸೇವಗಳ ಪ್ರಾಧಿಕಾರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ಆನಂದ್ ಎಮ್. ಪೊಲೀಸ್ ಅಧೀಕ್ಷಕರಾದ ಶೋಭಾರಾಣಿ ವಿ. ಜೆ. ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ್, ಹಿರಿಯ ನ್ಯಾಯಾಧೀಶರು ಹರಿಣಿ, ನಳಿನಿ, ಮದ್ದೂರಿನ ತಹಸೀಲ್ದಾರ್ ರವರು ಉಪಸ್ಥಿರಿದ್ದರು.

# ಫೆ. 6ರಂದು ಬೀರೇಶ್ವರ ದೇವಸ್ಥಾನಕ್ಕೆ ಸಿಎಂ ಭೇಟಿ



**ಮಂಡ್ಯ :** ಮುಖ್ಯಮಂತ್ರಿಗಳು ಫೆಬ್ರವರಿ 6ರಂದು ಮಂಡ್ಯ ತಾಲ್ಲೂಕಿನ ಬೇವುಕಲ್ಲು ಗ್ರಾಮದಲ್ಲಿರುವ ಬೀರೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಲಿದ್ದಾರೆ

ಈ ಹಿನ್ನೆಲೆಯಲ್ಲಿ, ಜಿಲ್ಲಾಧಿಕಾರಿಗಳು ಬುಧವಾರ ಸ್ಥಳಕ್ಕೆ ಭೇಟಿ ನೀಡಿ ಪೂರ್ವಸಿದ್ಧತೆಗಳ ಪರಿಶೀಲನೆ ನಡೆಸಿದರು.

ಮುಖ್ಯಮಂತ್ರಿಗಳ ಭೇಟಿ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಿಕೆ, ಸುಗಮ ಸಂಚಾರ ವ್ಯವಸ್ಥೆ, ಸಾರ್ವಜನಿಕರ ಸುರಕ್ಷತೆ, ಸ್ವಚ್ಛತೆ ಹಾಗೂ ಮೂಲಸೌಕರ್ಯಗಳ ಸಮರ್ಪಕ ನಿರ್ವಹಣೆ ಕುರಿತು ಜಿಲ್ಲಾಧಿಕಾರಿಗಳು ವಿಶೇಷ ಗಮನ ಹರಿಸುವಂತೆ ಸೂಚಿಸಿದರು.

ದೇವಸ್ಥಾನ ಆವರಣ ಮತ್ತು ಸುತ್ತಮುತ್ತಲ ಪ್ರದೇಶದಲ್ಲಿ ಯಾವುದೇ ಅಡಚಣೆ ಉಂಟಾಗದಂತೆ ಭದ್ರತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು, ವಾಹನಗಳ ನಿಲುಗಡೆಗೆ ಸೂಕ್ತ ವ್ಯವಸ್ಥೆ ಕಲ್ಪಿಸಲು ಹಾಗೂ ತುರ್ತು ಪರಿಸ್ಥಿತಿಗಳಿಗೆ ಅಗತ್ಯವಿರುವ ವೈದ್ಯಕೀಯ ಮತ್ತು ಅಗ್ನಿಶಾಮಕ ಸೌಲಭ್ಯಗಳನ್ನು ಸಿದ್ಧವಾಗಿಟ್ಟುಕೊಳ್ಳಲು ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮುಖ್ಯಮಂತ್ರಿಗಳ ಕಾರ್ಯಕ್ರಮವು ಸುಗಮವಾಗಿ ಹಾಗೂ ಯಶಸ್ವಿಯಾಗಿ ನೆರವೇರಲು ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವಂತೆ ಹಾಗೂ ನಿಗದಿತ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಪರಿಶೀಲನೆ ಸಂದರ್ಭದಲ್ಲಿ ಪೊಲೀಸ್ ಅಧೀಕ್ಷಕರು, ಹೆಚ್ಚುವರಿ ಪೊಲೀಸ್ ಅಧೀಕ್ಷಕರು, ಮಂಡ್ಯ ತಹಶೀಲ್ದಾರ್, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ಇತರೆ ಸಂಬಂಧಪಟ್ಟ ಇಲಾಖಾಧಿಕಾರಿಗಳು ಉಪಸ್ಥಿತರಿದ್ದರು.

# ಬುದನೂರು ಉತ್ಸವಕ್ಕೆ ಹೆಲಿ ಟೂರಿಸಂ: ಜಿಲ್ಲಾಧಿಕಾರಿಗಳಿಂದ ಸ್ಥಳ ಪರಿಶೀಲನೆ

**ಮಂಡ್ಯ:** ಬುದನೂರು ಉತ್ಸವದ ಸಂದರ್ಭದಲ್ಲಿ ಹೇಲಿ ಟೂರಿಸಂ ಸೇವೆ ಆರಂಭಿಸುವ ಸಂಬಂಧ ಜಿಲ್ಲಾಧಿಕಾರಿ ಡಾ ಕುಮಾರ

ಬುಧಬಾರ ಬೆಳಿಗ್ಗೆ 11.30ಕ್ಕೆ ಮಂಡ್ಯ ತಾಲೂಕಿನ ಚಿಕ್ಕ ಮಂಡ್ಯದಲ್ಲಿ ಸಂಬಂಧಿಸಿದ ಸ್ಥಳಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.

ಈ ವೇಳೆ ಭದ್ರತೆ, ಸಾರ್ವಜನಿಕ ಸುರಕ್ಷತೆ, ಸಂಚಾರ ವ್ಯವಸ್ಥೆ ಹಾಗೂ ಅಗತ್ಯ ಮೂಲಸೌಕರ್ಯಗಳ ಕುರಿತು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಮಾರ್ಗಸೂಚಿಗಳನ್ನು ನೀಡಿದರು. ಸಾರ್ವಜನಿಕ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಎಲ್ಲಾ ನಿಯಮಾನುಸಾರ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.



# ಮಹಿಳೆಯರು ಸ್ವಾವಲಂಬಿ ಬದುಕು ನಡೆಸಲು ಟೈಲರಿಂಗ್ ವೃತ್ತಿ ಸಹಕಾರಿ



**ಕೆ.ಆರ್.ನಗರ:** ಮಹಿಳೆಯರು ಸ್ವಾವಲಂಬಿ ಬದುಕು ನಡೆಸಲು ಟೈಲರಿಂಗ್ ವೃತ್ತಿಯು ಅತಿ ಹೆಚ್ಚು ಉಪಯುಕ್ತವಾಗುತ್ತದೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕಿ ಮಮತಾರಾವ್ ಹೇಳಿದರು.

ಅವರು ತಾಲೂಕಿನ ಗಾಯನಹಳ್ಳಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನವಿಕಾಸ ಕಾರ್ಯಕ್ರಮದಡಿಯಲ್ಲಿ ಮೂರು ತಿಂಗಳುಗಳ ಕಾಲ ನಡೆದ ಹೊಲಿಗೆ ತರಬೇತಿ ಶಿಬಿರದ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ತರಬೇತಿ ಪಡೆದಂತಹ ಮಹಿಳೆಯರು ವೃತ್ತಿಯನ್ನು ಆರಂಭಿಸಿ ಉತ್ತಮವಾಗಿ ಕಾರ್ಯನಿರ್ವಹಿಸುವ ಮೂಲಕ ಆರ್ಥಿಕ ಅಭಿವೃದ್ಧಿ ಹೊಂದಬೇಕು ಜೊತೆಗೆ ಕುಟುಂಬದ ನಿರ್ವಹಣೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸಿ ಸುಖೀ ಕುಟುಂಬದ ಬದುಕು ನಡೆಸಬೇಕು ಎಂದರು.

ಯೋಜನೆಯ ವತಿಯಿಂದ ಮಹಿಳೆಯರಿಗೆ ನೀಡುವ ವಿವಿಧ ಅರಿವು ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಜಾಗೃತಿಯನ್ನು ಹೊಂದಿ ಸಮಾಜದ ಮುಖ್ಯವಾಹಿನಿಗೆ ಬರಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಯೋಜನೆಯ ತಾಲೂಕು ಯೋಜನಾಧಿಕಾರಿ ಉಮೇಶ್ ಪೂಜಾರಿ, ಜ್ಞಾನ ವಿಕಾಸ ಸಮನ್ವಯಧಿಕಾರಿ ಸುಜಾತ, ತರಬೇತಿ ಶಿಕ್ಷಕಿ ಜ್ಯೋತಿ, ಸೇವಾ ಪ್ರತಿನಿಧಿ ಶಿಲ್ಪಾ, ರಜನಿ, ಗೌರಮ್ಮಣಿ ಹಾಗೂ ಸಂಘದ ಸದಸ್ಯರುಗಳು ಉಪಸ್ಥಿತರಿದ್ದರು.



**ತುಮಕೂರು :** ಇತ್ತೀಚೆಗೆ ತುಮಕೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಸರ್ಕಾರಿ ನೌಕರರ ಸಂಘದ ವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಸಂಘದ ಕ್ರೀಡಾಕೂಟದಲ್ಲಿ ಭಾಗವಹಿಸಿ ಪವರ್ ಲಿಫ್ಟಿಂಗ್ ವಿಭಾಗದಲ್ಲಿ ಪ್ರಥಮ ಸ್ಥಾನ, ವೈಟ್ ಲಿಫ್ಟಿಂಗ್ ವಿಭಾಗದಲ್ಲಿ ದ್ವಿತೀಯ ಸ್ಥಾನ ಮತ್ತು ಗುಂಡು ಎಸೆತ ವಿಭಾಗದಲ್ಲಿ ತೃತೀಯ ಸ್ಥಾನವನ್ನು ಅಲಂಕರಿಸಿ, ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಆದಿ ಜಾಂಭವ ಅಭಿವೃದ್ಧಿ ನಿಗಮದ ತುಮಕೂರು ಜಿಲ್ಲಾ ವ್ಯವಸ್ಥಾಪಕರಾದ ಮಂಜುನಾಥ್ ರವರನ್ನು ಅಖಿಲ ಭಾರತ ದಲಿತ ಕ್ರಿಯಾ ಸಮಿತಿ ರಾಜ್ಯ ಉಪಾಧ್ಯಕ್ಷರಾದ ಇಂದ್ರಕುಮಾರ್ ಸೇರಿದಂತೆ ಇನ್ನಿತರರು ಅಭಿನಂದಿಸಿ ಶುಭ ಕೋರಿದರು.

### ಮಾಚಿದೇವ ಜಯಂತೋತ್ಸವ | ಮಡಿವಾಳರ ಜನಜಾಗೃತಿ ಶೋಭಾ ಯಾತ್ರೆ,ಜಾಥಾ

# ಮಡಿವಾಳರು ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಿ

> ಶ್ರೀ ಭಾಷ್ಯಕಾರ ಸ್ವಾಮಿ ದೇವಸ್ಥಾನ ಪೀಠದ ಶ್ರೀ ಧನುರ್ದಾಸೆ ರಾಮಾನುಜ ಜೀಯರ್ ಸ್ವಾಮೀಜಿ ನುಡಿ

ಕೆ.ಆರ್.ನಗರ: ಮಡಿವಾಳ ಸಮುದಾಯ ದವರು ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡಬೇಕೆಂದು ಸಾಲಿಗ್ರಾಮ ಪಟ್ಟಣದ ಶ್ರೀ ಭಾಷ್ಯಕಾರ ಸ್ವಾಮಿ ದೇವಸ್ಥಾನ ಪೀಠದ ಶ್ರೀ ಧನುರ್ದಾಸೆ ರಾಮಾನುಜ ಜೀಯರ್ ಸ್ವಾಮೀಜಿ ಹೇಳಿದರು.

ಅವರು ಸಾಲಿಗ್ರಾಮದಲ್ಲಿ ತಾಲೂಕು ಮಡಿವಾಳ ಸಂಘದ ವತಿಯಿಂದ ಆಯೋಜಿಸಿದ್ದ ಮನ ಮನೆಗೆ ಮಾಚಿದೇವ ಜಯಂತೋತ್ಸವ ಹಾಗೂ ಮಡಿವಾಳರ ಜನಜಾಗೃತಿ ಶೋಭಾ ಯಾತ್ರೆ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪ್ರತಿಯೊಂದು ಕುಟುಂಬದವರು ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣವನ್ನು ಕೊಡಿಸಬೇಕು ಜೊತೆಗೆ ಉತ್ತಮ ಸಂಸ್ಕಾರವನ್ನು ಕಲಿಸಬೇಕು ಎಂದರು. ಎಲ್ಲರೂ ಒಗ್ಗಟ್ಟಾಗಿ ಸಮಾಜದ ಕೆಲಸಗಳನ್ನು ಮಾಡುವ ಮೂಲಕ ಸಮುದಾಯದ ಅಭಿವೃದ್ಧಿಯ ಜೊತೆಗೆ ತಾವುಗಳು ಕೂಡ ಅಭಿವೃದ್ಧಿಯ ಪಥದತ್ತ ಸಾಗಬೇಕು ಎಂದು ಕರೆ ನೀಡಿದರು.

ಸಾಲಿಗ್ರಾಮ ತಾಲೂಕು ಮಡಿವಾಳ ಸಂಘದ ಅಧ್ಯಕ್ಷ ಹರ್ಷವರ್ಧನ ಮಾತನಾಡಿ ಮಡಿವಾಳ ಸಮುದಾಯದ ಜಗದ್ಗುರು ಶ್ರೀ ಡಾ.ಬಸವ ಮಾಚಿದೇವ ಸ್ವಾಮೀಜಿಯವರ ಸಾರಥ್ಯದಲ್ಲಿ ಸಮುದಾಯದವರು ವಾಸ ಮಾಡುತ್ತಿರುವ ಭಾಗಗಳಿಗೆ ತೆರಳಿ ಜನ ಜಾಗೃತಿ ಮೂಡಿಸುವಂತಹ " ಮನ ಮನೆ ಮಾಚಿದೇವ" ಎಂಬ ವಿನೂತನ ಕಾರ್ಯಕ್ರಮವನ್ನು ಮಾಡಲಾಗುತ್ತಿದೆ. ಈ ಕಾರ್ಯಕ್ರಮದ ಅಂಗವಾಗಿ ಶ್ರೀ ವೀರ ಮಡಿವಾಳ ಮಾಚಿದೇವರ ಭಾವಚಿತ್ರವನ್ನು ವಿಶೇಷವಾಗಿ ಅಲಂಕಾರ ಮಾಡಿರುವ ಬೆಳ್ಳಿ ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ ಆ ರಥದೊಂದಿಗೆ ಸಮುದಾಯದ ಯುವಕರು ಬೈಕ್ ಗಳ ಮೂಲಕ ತಾಲೂಕಿನ ವಿವಿಧಡೆ ಸಮುದಾಯದವರು ವಾಸಿಸುತ್ತಿರುವ ಗ್ರಾಮಗಳಲ್ಲಿ ಜಾಥಾ ಕಾರ್ಯಕ್ರಮವನ್ನು ಮಾಡಿ ಜನಜಾಗೃತಿ ಮೂಡಿಸುವ ಕೆಲಸವನ್ನು ಮಾಡಲಾಗುತ್ತಿದೆ ಎಂದರು.

ಕೆ.ಆರ್.ನಗರ ತಾಲ್ಲೂಕು ಮಡಿವಾಳ ಸಂಘದ ಅಧ್ಯಕ್ಷ ಸಿದ್ದನಕೊಪ್ಪಲು ಕುಮಾರ್ ಮಾತನಾಡಿ ಫೆ.27ರಂದು ಕೆ.ಆರ್.ನಗರ ಪಟ್ಟಣದಲ್ಲಿ ಶ್ರೀ ಮಡಿವಾಳ ಮಾಚಿದೇವರ ಜಯಂತೋತ್ಸವವನ್ನು ಸಮಾಜದ ಕುಲಗುರುಗಳ ದಿವ್ಯ ಸಾನಿಧ್ಯದಲ್ಲಿ ಅದ್ದೂರಿಯಾಗಿ ಆಚರಣೆ ಮಾಡಲಾಗುತ್ತಿದೆ. ಈ ಕಾರ್ಯಕ್ರಮಕ್ಕೆ ಸಮಾಜದ ಹಲವು ಗಣ್ಯರುಗಳನ್ನು ಒಂದು ವೇದಿಕೆಗೆ ಕರೆತರುವ ಕೆಲಸವನ್ನು ವಿಶೇಷವಾಗಿ ಮಾಡಲಾಗುತ್ತಿದೆ.

ಕಾರ್ಯಕ್ರಮದ ಅಂಗವಾಗಿ ಪೂರ್ಣ ಕುಂಭ ಕಳಸಗಳೊಂದಿಗೆ ಮೆರವಣಿಗೆಯನ್ನು ನಡೆಸಲಾಗುವುದು. ವಿಶೇಷತೆಯೊಂದಿಗೆ ವಿನೂತನವಾಗಿ ಆಚರಣೆ ಮಾಡಲಾಗುತ್ತಿರುವ ಶ್ರೀ ಮಡಿವಾಳ ಮಾಚಿದೇವರ ಜಯಂತೋತ್ಸವ ಕಾರ್ಯಕ್ರಮಕ್ಕೆ ಸಮಾಜದ ಎಲ್ಲ ಬಂಧುಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಜಯಂತೋತ್ಸವವನ್ನು ಯಶಸ್ವಿ ಮಾಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷರಾದ ಬೋರಶೆಟ್ಟಿ, ಕುಮಾರ್, ನಗರಾಧ್ಯಕ್ಷ ಗೋಪಾಲ್, ಮುಖಂಡರುಗಳಾದ ಸ್ವಾಮಿಶೆಟ್ಟಿ, ಕುಮಾರ್, ವಿಶ್ವನಾಥ, ಬಾಲರಾಜ್, ಸಣ್ಣಸ್ವಾಮಿ, ಜಲೇಂದ್ರ, ವೆಂಕಟೇಶ್, ರವಿ, ರಮೇಶ್, ಮೋಹನ್, ರಾಜಶೇಖರ್, ನಟೇಶ್, ಪ್ರಸನ್ನ, ಶಿವುಶೆಟ್ಟಿ, ಕಿಟ್ಟಿ, ಮನು, ರಾಜೇಶ್, ಮಂಜುನಾಥ, ಪ್ರವೀಣ್ ಸೇರಿದಂತೆ ಹಲವರು ಇದ್ದರು.



# ತಾಲ್ಲೂಕು ಕಚೇರಿಗೆ ಜಿಲ್ಲಾಧಿಕಾರಿ ಡಾ.ಕುಮಾರ ಅನಿರೀಕ್ಷಿತ ಭೇಟಿ ಪರಿಶೀಲನೆ



**ಕೆ.ಆರ್.ಪೇಟೆ:** ತಾಲೂಕು ಕಚೇರಿಗೆ ಅನಿರೀಕ್ಷಿತ ಭೇಟಿ ನೀಡಿದ ಜಿಲ್ಲಾಧಿಕಾರಿ ಡಾ.ಕುಮಾರ ವಿವಿಧ ಶಾಖೆಗಳಿಗೆ ಆಗಮಿಸಿ ಕಚೇರಿ ಕಾರ್ಯನಿರ್ವಹಣೆ, ಕಡತ ವಿಲೇವಾರಿ, ಸಾರ್ವಜನಿಕ ಸೇವೆ, ಸಿಬ್ಬಂದಿ ಹಾಜರಾತಿ ಪರಿಶೀಲಿಸಿದರು.

ಕಚೇರಿಯಲ್ಲಿ ಹಾಜರಿದ್ದ ಸಾರ್ವ ಜನಿಕರ ಅಹವಾಲು ಸ್ವೀಕರಿಸಿ ಅವುಗಳನ್ನು ನಿಗದಿತ ಅವಧಿಯೊಳಗೆ ಇತ್ಯರ್ಥಪಡಿಸುವಂತೆ ತಹಸೀಲ್ದಾರ್ಗೆ ಸೂಚನೆ ನೀಡಿದ ಡಿಸಿ, ಇ–ಆಫೀಸ್ ವ್ಯವಸ್ಥೆಯಲ್ಲಿನ ಬಾಕಿ ಕಡತಗಳನ್ನು ಕಾಲಮಿತಿಯೊಳಗೆ ವಿಲೇವಾರಿ ಮಾಡಿ ಡಿಜಿಟಲ್ ಕಾರ್ಯವಿಧಾನವನ್ನು ಪರಿ ಣಾಮಕಾರಿಯಾಗಿ ಅನುಷ್ಠಾನಗೊಳಿ ಸುವಂತೆ ನಿರ್ದೇಶನ ನೀಡಿದರು.

ಆದಾಯ, ಜಾತಿ, ಭೂ ಹಿಡುವಳಿ, ವಂಶವೃಕ್ಷ, ನಿವಾಸ ಪ್ರಮಾಣಪತ್ರ ಸೇರಿದಂತೆ ಎಲ್ಲಾ ಸೇವೆಗಳನ್ನು ಸಕಾಲ ಯೋಜನೆಯಡಿ ನಿಗದಿತ ಅವಧಿಯಲ್ಲಿಯೇ ಒದಗಿಸುವಂತೆ ಕಟ್ಟುನಿಟ್ಟಾಗಿ ಸೂಚಿಸಿ ವಿಳಂಬ ಕಂಡುಬಂದಲ್ಲಿ ಶಿಸ್ತು ಕ್ರಮ ಜರುಗಿಸಲಾಗುವುದು ಎಂದರು.

ಅಭಿಲೇಖಾಲಯ ಶಾಖೆ ದಾಖಲೆ ನಿರ್ವಹಣೆ ಹಾಗೂ ಡಿಜಿಟಲೀಕರಣಕ್ಕೆ ಒತ್ತು ನೀಡಿ, ಸರ್ಕಾರಕ್ಕೆ ನಿಗದಿತ ಶುಲ್ಕ ವನ್ನು ಕಡ್ಡಾಯವಾಗಿ ವಸೂಲಿಸಿ ದಾಖಲೆಗಳನ್ನು ಸರಿಯಾಗಿ ಸಂರಕ್ಷಿಸುವಂತೆ ಸೂಚಿಸಿದರು. ಹೋಬಳಿ ಮಟ್ಟದ ಸಿಬ್ಬಂದಿ ಕೇಂದ್ರ ಸ್ಥಾನದಲ್ಲಿಯೇ ಲಭ್ಯ ವಿದ್ದು, ಸಾರ್ವಜನಿಕರ ಮನವಿಗಳಿಗೆ ತ್ವರಿತ ಸ್ಪಂದನೆ ನೀಡಬೇಕು, ಕಚೇರಿ ಶಿಸ್ತು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ನಿರ್ದೇಶನ ನೀಡಿದರು.

ನಂತರ ಇಂದಿರಾ ಕ್ಯಾಂಟೀನ್ ಅನಿರೀಕ್ಷಿತವಾಗಿ ಆಗಮಿಸಿ ಪರಿಶೀಲನೆ ಮಾಡಿ ಕ್ಯಾಂಟೀನ್‌ನ ಸ್ವಚ್ಛತೆ, ಆರೋಗ್ಯ ಹಾಗೂ ಆಹಾರ ಸುರಕ್ಷತಾ ಮಾನದಂಡಗಳ ಅನುಷ್ಠಾನವನ್ನು ಪರಿಶೀಲಿಸಿದರು. ಆಹಾರದ ಗುಣಮಟ್ಟ, ಪ್ರಮಾಣ ಹಾಗೂ ವಿತರಣೆ ವ್ಯವಸ್ಥೆ ಕುರಿತು ಪರಿಶೀಲನೆ ನಡೆಸಿದರು. ಆಹಾರ ತಯಾರಿಕೆ ಮತ್ತು ವಿತರಣೆಯಲ್ಲಿ ಸರ್ಕಾರದ ನಿಗದಿತ ಮಾರ್ಗಸೂಚಿಗಳ ಕಟ್ಟುನಿಟ್ಟಿನ ಪಾಲನೆ ಕುರಿತು ಪರಿಶೀಲಿಸಿದರು.

ಬಳಿಕ ಪುರಸಭೆ ವ್ಯಾಪ್ತಿಯ ಘನ ತ್ಯಾಜ್ಯ ನಿರ್ವಹಣಾ ಘಟಕಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ಸ್ವಚ್ಛ ಭಾರತ್ ಮಿಷನ್ (ನಗರ) ಯೋಜನೆಯಡಿ ಅನುಷ್ಠಾನಗೊಳಿಸಲಾಗುತ್ತಿರುವ ತಾಂತ್ರಿಕ ವ್ಯವಸ್ಥೆಗಳ ಸಮಗ್ರ ಪರಿಶೀಲನೆ ನಡೆಸಿದರು.

ಕಸದಸಂಗ್ರಹಣೆ, ಮೂಲದಲ್ಲಿಯೇ ಕಸವಿಂಗಡಣೆ, ಸಂಸ್ಕರಣೆ, ಮರುಬಳಕೆ ಹಾಗೂ ವೈಜ್ಞಾನಿಕ ವಿಲೇವಾರಿ ಪ್ರಕ್ರಿಯೆಗಳ ಕಾರ್ಯಾಚರಣೆಯನ್ನು ಸೂಕ್ಷ್ಮವಾಗಿ ವೀಕ್ಷಿಸಿದರು. ಮನೆಮನೆ ಕಸ ಸಂಗ್ರಹಣೆ, ತೇವ ಕಸದ ಕಾಂಪೊ? ಸ್ಟಿಂಗ್, ಒಣ ಕಸದ ಮರುಬಳಕೆ, ಪರಿಸರ ಸುರಕ್ಷತಾ ಕ್ರಮಗಳು, ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಶೇ.100ರಷ್ಟು ಕಸ ವಿಂಗಡಣೆ ಗುರಿ ಸಾಧಿಸಲು ಸೂಚನೆ ನೀಡಿದರು.

ಈ ವೇಳೆ ಪುರಸಭೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿ

### ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳ ವಿರುದ್ಧ ಬಿ.ಎಂ ನಂಜೇಗೌಡ ಆಕ್ರೋಶ



**ಕೆ.ಎಂ.ದೊಡ್ಡಿ:** ಕೆಆರ್‌ಎಸ್ ಕಡೆಯ ಭಾಗದವಾದ ಹೆಬ್ಬಾಕವಾಡಿ ನಾಲೆಗಳ ಅಚ್ಚುಕಟ್ಟು ಪ್ರದೇಶದ ಜಮೀನುಗಳಿಗೆ ಸಮರ್ಪಕವಾಗಿ ನೀರನ್ನು ಹರಿಸದೇ ಮಾತಿಗೆ ತಪ್ಪಿರುವ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳ ವಿರುದ್ಧ ಕೆಆರ್‌ಎಸ್ ನೀರು ಬಳಕೆದಾರರ ಮಹಾಮಂಡಳಿ ನಿರ್ದೇಶಕ, ಕಾವೇರಿ ನಿರಾವರಿ ಸಲಹ ಸಮಿತಿ ಸದಸ್ಯ ಬಿ.ಎಂ ನಂಜೇಗೌಡ ಆಕ್ರೋಶ ವ್ಯಕ್ತಪಡಿಸಿದರು.

ಮದ್ದೂರು ತಾಲೂಕಿನ ಮಣಿಗೆರೆ, ಅಣ್ಣೂರು, ಮೆಣಸಗೆರೆ, ಬೊಪ್ಪಸಮುದ್ರ, ಹೊನ್ನಾಯಕನಹಳ್ಳಿ, ಪುಟ್ಟೇಗೌಡನದೊಡ್ಡಿ ಗ್ರಾಮಗಳು ಸೇರಿದಂತೆ ಹಲವು ಗ್ರಾಮಗಳ ಸಾವಿರಾರು ಎಕ್ಕರೆ ಪ್ರದೇಶದ ಬೆಳೆಗಳಿಗೆ ನೀರಿಲ್ಲದೆ ಕಬ್ಬಿನ ಬೆಳೆ ಒಣುಗುವ ಭೀತಿ ಎದುರಾಗಿದ್ದು ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ನೀರು ಕೊಡದೇ ರೈತರ ಬೆಳೆಗಳನ್ನು ಅಳಿಸಲು ಹೊರಟಿದೆ ಎಂದು ಸುದ್ದಿ ಗೋಷ್ಠಿಯಲ್ಲಿ ಕಿಡಿಕಾರಿದರು.

ಈ ಹಿಂದಿನ ಕಾವೇರಿ ನೀರಾವರಿ ಸಲಹ ಸಮಿತಿಯ ತೀರ್ಮಾನದಂತೆ ಬೆಳೆದು ನಿಂತಿರುವ ಬೆಳೆಗಳಿಗೆ ನೀರು ಕೊಡುವುದಾಗಿ ಒಪ್ಪಿ ಈಗ ನೀರು ನೀಡದೇ ಹೇಳಿದ್ದರಿಂದ ರೈತರು ಬೆಳೆ ಹಾಕಿದ್ದು, ಈಗ ಏಕಾಏಕಿ ನೀರು ನೀಡುವುದಿಲ್ಲ ಅಂದರೆ, ರೈತರ ಪಾಡೇನು ಎಂದು ಕಾವೇರಿ ನೀರಾವರಿ ನಿಗಮದ ಅಧೀಕ್ಕ ಅಭಿಯಂತರ ರಘುರಾಮ್ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಒಂದು ಕಣ್ಣಿಗೆ ಬೇಣ್ಣೆ ಮತ್ತೊಂದು ಕಣ್ಣಿಗೆ ಸುಣ್ಣ ಎಂಬಂತೆ ಮಳವಳ್ಳಿ ತಾಲೂಕಿನ ಕಡೆ ಭಾಗದ ಹೆಬ್ಬಾಕವಾಡಿ ಶಾಖಾ ನಾಲೆಗೆ ನೀರು ಹರಿಸಿದ್ದು ಮದ್ದೂರು ತಾಲೂಕಿನ ಕಡೆ ಭಾಗದ ರೈತರಿಗೆ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ತಾರತಮ್ಯ ಮಾಡಿ ನೀರು ನೀಡದೆ ವಂಚಿಸುತಿದ್ದಾರೆ ಎಂದರು.

ಕಾವೇರಿ ನೀರು ಕನ್ನಂಬಾಡಿಯಿಂದ ಯತ್ತಂಬಾಡಿ ಎಂಬ ಮಾತಿದ್ದು ನಾಲಾ ಆಧುನೀಕರಣ ನೆಪದಲ್ಲಿ ಬೆಳೆದಿರುವ ಬೆಳೆಗಳಿಗೆ ಕಟ್ಟು ಪದ್ದತಿಯಲ್ಲಿ ನೀರು ಪೂರೈಕೆ ಮಾಡುತ್ತೇವೆಂದು ಭರವಸೆ ನೀಡಿತ್ತಾದರೂ ಅಧಿಕಾರಿಗಳು ಮದ್ದೂರು ತಾಲ್ಲೂಕಿನ ಕೊನೆಯ ಭಾಗಕ್ಕೆ ನೀರು ಕೊಡುದೇ ಇರುವುದು ರೈತರ ಬದುಕಿನ ಮೇಲೆ ಬರೆ ಎಳೆದಂತಾಗಿದೆ ಎಂದರು.

ಕಳೆದ ಎರಡು ಮೂರು ವರ್ಷಗಳಿಂದ ನೀರಿನ ಅಭಾವದಿಂದ ವ್ಯವಸಾಯವನ್ನೆ ಮಾಡದ ರೈತರು ಪ್ರಸ್ತುತದಲ್ಲಿ ಕನ್ನಂಬಾಡಿ ಕಟ್ಟೆಯಲ್ಲಿ ನೀರು ತುಂಬಿರುವ ಮಂದಹಾಸದಲ್ಲಿ ಈಗಗಲೇ ಕಬ್ಬು ಸೇರಿದಂತೆ ವಿವಿಧ ಬೆಳೆಗಳು ಸಾವಿರಾರು ಎಕರೆಯಲ್ಲಿ ಬೆಳೆದಿದ್ದು ನೀರು ಕೊಡದಿದ್ದರೇ ಕೋಟ್ಯಾಂತರ ನಷ್ಟವನ್ನು ರೈತರು ಅನುಭವಿಸಬೇಕಾಗುತ್ತದೆ ಎಂದು ಅಳಲು ತೋಡಿ ಕೊಂಡರು.

ಹೆಬ್ಬಾಕವಾಡಿ ಅಚ್ಚು ಕಟ್ಟು ವ್ಯಾಪ್ತಿಯ ಕೊನೆ ಭಾಗದ ಶಾಖಾ ನಾಲೆಗೆ ನೀರು ನೀಡದೇ ಬೆಳೆಗಳು ಒಣಗುತಿದ್ದು ಈ ತನಕ ರೈತರು ಬೆಳೆಗಾಗಿ ಮಾಡಿರುವ ಖರ್ಚಿಗೆ ಹೊಣೆ ಯಾರು? ಹೆಬ್ಬಕವಾಡಿ ಶಾಖಾ ನಾಲೆಗಳಿಗೆ ಹಿಂದಿನ ಸಭೆಯ ತೀರ್ಮಾನದಂತೆ ಕಟ್ಟು ಪದ್ಧತಿಯಲ್ಲಾದರೂ ನೀರನ್ನು ಕೊಟ್ಟು ರೈತರ ಬೆಳೆಗಳನ್ನು ಉಳಿಸಬೇಕು ತಪ್ಪಿದಲ್ಲಿ ಈ ವ್ಯಾಪ್ತಿಯ ರೈತರ ಜತೆಗೂಡಿ ಹೋರಾಟ ರೂಪಿಸಲಾಗುವುದು ಎಂದು ಎಚ್ಚರಿಸಿದ್ದಾರೆ.

### ಜ.09ರಂದು ಗೃಹಲಕ್ಷ್ಮಿ ಡಿಜಿಟಲ್ ಮಾರ್ಕೆಟಿಂಗ್ ವ್ಯವಸ್ಥೆ ಅನುಷ್ಠಾನ

**ಮಂಡ್ಯ:** ರಾಜ್ಯದಲ್ಲಿ ಮಹಿಳೆಯರನ್ನು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಅಭಿವೃದ್ಧಿಗೊಳಿಸಲು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ, ಸ್ವಯಂ ಉದ್ಯೋಗದಲ್ಲಿ ತೊಡಗಿಸಿಕೊಂಡಿರುವ ಮಹಿಳಾ ಉದ್ಯಮಿದಾರರಿಗೆ ಗೃಹಲಕ್ಷ್ಮಿ ಡಿಜಿಟಲ್ ಮಾರುಕಟ್ಟೆ ವ್ಯವಸ್ಥೆಯನ್ನು ಕಲ್ಪಿಸುವ ದೃಷ್ಟಿಯಿಂದ ವೇದಿಕೆಯ ಸೌಲಭ್ಯ ಕಲ್ಪಿಸಲಾಗಿದ್ದು, ಜನವರಿ 09ರಂದು ಗೃಹಲಕ್ಷ್ಮಿ ಡಿಜಿಟಲ್ ಮಾರ್ಕೆಟಿಂಗ್ ಅನ್ನು ಅನುಷ್ಠಾನಗೊಳಿಸಲಾಗಿರುತ್ತದೆ.

ಮಹಿಳಾ ಉದ್ಯಮಿಗಳ ನೋಂದಣಿ ಕಾರ್ಯ ಕೈಗೊಳ್ಳಲು ಸ್ತ್ರೀ ಶಕ್ತಿ ಸ್ವ ಸಹಾಯ ಗುಂಪಿನ ಸದಸ್ಯರು ಫಲಾನುಭವಿಗಳು, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾ ಅಭಿವೃದ್ಧಿ ಸಂಸ್ಥೆ ಮೂಲಕ ತರಬೇತಿ ಪಡೆದು ಸ್ವ ಉದ್ಯೋಗ ನಡೆಸುತ್ತಿರುವ ಮಹಿಳೆಯರು, ನಿಗಮದಿಂದ ವಿವಿಧ ಯೋಜನೆಗಳ ಅಡಿಯಲ್ಲಿ ಸೌಲಭ್ಯ ಪಡೆದ ಮಹಿಳಾ ಫಲಾನುಭವಿಗಳು.

ಜಿಲ್ಲಾ ತಾಲ್ಲೂಕು ಮತ್ತು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇತರೆ ಯಶಸ್ವಿ ಮಹಿಳಾ ಉದ್ಯಮಿಗಳು ತಾವು ತಯಾರಿಸುವ ಉತ್ಪನ್ನಗಳ ಮಾಹಿತಿಯನ್ನು ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಹಿಳಾ ಅಭಿವೃದ್ಧಿ ನಿಗಮ, ಅಭಿವೃದ್ಧಿ ನಿರೀಕ್ಷಕರ ಮೊಬೈಲ್ ಸಂ:9945677659 ಮತ್ತು ದೂರವಾಣಿ ಸಂ: 08232–221315ಅನ್ನು ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅರ್ಜಿ ಆಹ್ವಾನ

**ಮಂಡ್ಯ:** ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ, ಮಂಡ್ಯ ಇವರ ಸಂಯುಕ್ತಾಶ್ರಯದಲ್ಲಿ, ಮಂಡ್ಯ ಜಿಲ್ಲೆಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಬಯಸುವ ಎಲ್ಲಾ ವರ್ಗದ ಆಸಕ್ತ ಅಭ್ಯರ್ಥಿಗಳಿಗೆ ನಾಲ್ಕು ವಾರಗಳ ಕೌಶಲ್ಯದಾರಿತ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಫೆಬ್ರವರಿ 23 ರಂದು ಮಂಡ್ಯದಲ್ಲಿ ಆಯೋಜಿಸಲು ತಿರ್ಮಾನಿಸಲಾಗಿದೆ.

ಕಾರ್ಯಕ್ರಮದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸ ಬಯಸುವ ಆಸಕ್ತರಿಗೆ ಪ್ರೇರಣೆ, ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು/ಪ್ರೋತ್ಸಾಹ, ಮುಂದೆ ಕೈಗೊಳ್ಳಗಾಗುವ ಉದ್ಯಮಶೀಲತಾಭಿವೃದ್ಧಿ ತರಬೇತಿ ಬಗ್ಗೆ ಮಾಹಿತಿ ಹಾಗೂ ಇತರೆ ಕೈಗಾರಿಕಾ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು.



ಆನಂದ ಜಿ.ಎನ್. ದಾಂಡೇಲಿ.

## ಹಳೆಯ ದಿನಗಳ ಸೆರೆ ಹಿಡಿಯಲಿಲ್ಲ..



ಹಳೆಯ ದಿನಗಳ ಸೆರೆ ಹಿಡಿಯಲಾಗಲಿಲ್ಲ ಎನ್ನುವ ಬೇಸರವಂತೂ ಸದಾ ಕಾಡುತ್ತಲೇ ಇದೆ. ಇದೊಂದು ಶಿಕ್ಷಕ ವೃತ್ತಿಯನ್ನು ಅತ್ಯಂತ ಆನಂದದಿಂದ ಆಯ್ಕೆ ಮಾಡಿಕೊಂಡು ಆ ಮುಗ್ಧ ಕುಸುಮಗಳ ಹೃದಯದಲ್ಲಿ ನಾನು ಸದಾ ನೆಲೆಸಬೇಕು ಎನ್ನುವ ಆಶಯದೊಂದಿಗೆ ಹದಿನಾರು ವರ್ಷಗಳ ಹಿಂದೆ ಒಂದು ಶಾಲೆಗೆ ಸೇರಿದ್ದು.ಅಂದಿನ ದಿನಗಳಲ್ಲಿ ವಿದ್ಯಾರ್ಥಿಗಳೇ ನಮಗೆ ವಿಷಯ ವಿವರಣೆಗೆ ಪ್ರೋತ್ಸಾಹದ ಚಿಲುಮೆಗಳಂತೆ ಪುಟಿಯುವಾಗ ನಮಗೂ ವಿಷಯ ಅರಿಯುವ ಹಿರಿಯರ ಮಾರ್ಗದರ್ಶನ ಪಡೆಯುವ ತವಕವಂತೂ ಹೇಳ ತೀರದು. ನಾಳಿನ ಪಾಠಕ್ಕೆ ಪ್ರಾರ್ಥನಾ ಅವಧಿಗೂ ಮುನ್ನ ಕಾದು ನಿಲ್ಲುವ ವಿದ್ಯಾರ್ಥಿಗಳ ಉತ್ಸಾಹ ನಮಗೆ ಒಂದು ಉತ್ಸವದಂತೆ ಇರುತ್ತಿತ್ತು. ಯಾವ ಶಿಕ್ಷಕರನ್ನು ಕಾಯುತ್ತಿರುವರೋ ಆ ಶಿಕ್ಷಕರ ಗಮ್ಮತ್ತೆ ಬೇರೆ. ಆಟದ ಜೊತೆಗೆ ಪಾಠದಲ್ಲೂ ಸಾಗುವ ಆ ಮುಗ್ಧ ಕುಸುಮಗಳನ್ನು ನೋಡುವಾಗ ನಾನು ಏಕೆ ಈ ಶಾಲೆಗೆ ಸೇರಲಿಲ್ಲ ಎನ್ನುವ ಬೇಸರ ಮೂಡಿದ್ದಂತೂ ಸತ್ಯ. ಅವರೊಳಗಿನ ಆ ವೇದಿಕೆಯ ಭಯ ಇಲ್ಲದೆ ಮಾಡುವ ಭಾಷಣ, ನಿರೂಪಣೆ ಸರಾಗವಾಗಿ ಸಾಗುವ ನಿರರ್ಗಳವಾದ ಒಂದೊಂದು ಹಿಮ್ಮಾಯಿತಿ ಜೊತೆಗಿನ ವಿವರಣೆ ಕಂಡಾಗ ನನಗೂ ಕಾಲುಗಳಲ್ಲಿ ನಡುಕ ಹುಟ್ಟಿಸುತ್ತಿತ್ತು ಎನ್ನುವುದನ್ನು ನಾ ಮರೆಯುವಂತಿಲ್ಲ.ಆ ದಿನಗಳಲ್ಲಿ ನಾವು ಕೂಡ ಕಲಿಕಾ ವಿದ್ಯಾರ್ಥಿಗಳೇ ಎನ್ನಬಹುದು. ನಮ್ಮ ಹಿರಿಯ ಶಿಕ್ಷಕ ಸಹೋದ್ಯೋಗಿಗಳ ಮಾರ್ಗದರ್ಶನದಲ್ಲಿ ಸಾಗಿದ್ದೆ ಇಂದು ನಮಗೆ ಈ ರೀತಿಯ ದಿನಗಳು ದೊರೆತಿವೆ ಎನ್ನಬಹುದು. ಅಂದಿನ ದಿನಗಳಲ್ಲಿ ಪ್ರತಿ ಮಗುವಿನಲ್ಲೂ ತುಂಟತನ, ಕೋಪ, ಮುನಿಸು, ದ್ವೇಷ ಎಲ್ಲ ಇದ್ದರೂ ಕೂಡ ಶಿಕ್ಷಕರಿಗೆ ಗೌರವ ನೀಡುವಂತೆ ಮಾಡುವ ಶಿಕ್ಷಕರ ಕಾರ್ಯ ವೈಖರಿ ಇತ್ತಲ್ಲ ಅದನ್ನು ಮೆಚ್ಚಲೇ ಬೇ ಕು. ಅಂದಿನ ಪಾಲಕರು ಶಿಕ್ಷಕರಿಗೆ ನೀಡುವ ಸಹಕಾರ ಆ ಮಕ್ಕಳನ್ನು ತಿದ್ದಿ ತೀಡಿ ರೂಪ ಕೊಡುವಾಗ ನಮಗೂ ಶಿಕ್ಷಕ ವೃತ್ತಿ ಹೆಮ್ಮೆ ತರುತ್ತಿತ್ತು. ಅಂದು ನಮ್ಮೊಂದಿಗೆ ದ್ವೇಷಕ್ಕಿಳಿದ ವಿದ್ಯಾರ್ಥಿಗಳು ಸುಮಾರು 15 ವರ್ಷಗಳ ನಂತರ ನಮ್ಮನ್ನು ಗುಂಪಲ್ಲಿ ನೋಡಿದರು ಓಡೋಡಿ ಬಂದು ಮಾತನಾಡಿಸುವಾಗ ನಮ್ಮೆದೆಯೂ ಮತ್ತಷ್ಟು ಉಬ್ಬಿ ನಿಲ್ಲುತ್ತದೆ. ಶಿಕ್ಷಕರನ್ನು ಅನುಕರಣೆ ಮಾಡುವ ಮಗುವಿನಲ್ಲಿ ನಯ ವಿನಯ ಕೂಡ ಶಿಕ್ಷಕರ ನಡೆ ನುಡಿಗಳಿಂದ ಬದಲಾವಣೆ ಆಗುತ್ತದೆ ಎನ್ನುವುದನ್ನು ನಾನು ಗಮನಿಸಿದ್ದೇನೆ. ಕೇವಲ ಮಾತಿನಲ್ಲೇ ಮಗುವಿನ ಮನ ಕರಗಿಸಿ ಅವರನ್ನು ತನ್ನೆಡೆಗೆ ಸೆಳೆದು ಬದಲಾವಣೆ ಮಾಡಿದ ಅಂದಿನ ಮುಖ್ಯೋಪಾಧ್ಯಾಯಿನಿ ನಮಗೆ ಪ್ರೇರಣೆ. ಶಾಲಾ ಅವಧಿಗೂ ಮುನ್ನ ಬರುವ ಹಿರಿಯ ಶಿಕ್ಷಕರ ಕಂಡಾಗ ಕಿರಿಯ ಶಿಕ್ಷಕರೂ ಕೂಡ ಬೇಗ ಬರುವುದಕ್ಕೆ ಯಾರು ಹೇಳಿ ಕೊಡಬೇಕಿರಲಿಲ್ಲ. ಅವರು ಬರೆಯುವ ಪಾಠ ಯೋಜನೆ ದೂರದಿಂದಲೇ ನೋಡಿ ನಮ್ಮ ಬರಹವನ್ನು ಸುಧಾರಣೆ ಮಾಡಿಕೊಳ್ಳುವ ಪ್ರವೃತ್ತಿ ಬೆಳೆಸಿಕೊಳ್ಳುವುದಕ್ಕೆ ಯಾರು ನಮಗೆ ಹೇಳಿ ಕೊಡಲಿಲ್ಲ.ಅವರು ಹೇಗೆ ಮಕ್ಕಳಿಗೆ ಪ್ರೇರಣೆ ನೀಡುತ್ತಾರೆ ಎನ್ನುವುದನ್ನು ಮರೆಯಲಿ ನಿಂತು ಕಲಿಯುವಾಗ ನೋಡುವ ಇತರೇ ಹಿರಿಯ ಶಿಕ್ಷಕರು ಸದ್ದಿಲ್ಲದೇ ಹಿಂಬದಿಯಿಂದ ನಮ್ಮ ಭುಜದ ಮೇಲೆ ಕೈ ಹಾಕಿ ಜೊತೆ ಜೊತೆಗೆ ಕರೆದೋಯ್ದು ತಿಳಿ ಹೇಳಿದ ಮಾತುಗಳಿಗೆ ನಮ್ಮಿಂದ ಯಾವ ಕಾಣಿಕೆ ಕೂಡ ನೀಡಲಾಗಲಿಲ್ಲ ಎನ್ನುವ ಅಳುಕು ನಾವಿಂದು ಹಿರಿತನದ ದಾರಿಯಲ್ಲಿ ಸಾಗುವಾಗ ಅನ್ನಿಸುತ್ತಿದೆ ಏನು ನೀಡಬೇಕು?ಏನು ನೀಡಿದ್ದರೆ ಅವರು ಸ್ವೀಕರಿಸುತ್ತಿದ್ದರೆ ಎನ್ನುವ ಪ್ರಶ್ನೆ ಕಾಡುವುದು



ಮನಸಿಗೆ ಈಗ. ಅದೆಷ್ಟು ವಿದ್ಯಾರ್ಥಿಗಳಿಗೆ ನಾವು ನೀಡಿದ ಮಾರ್ಗದರ್ಶನ ಅವರ ಬಾಳಿಗೆ ದಾರಿ ದೀಪ ವಾಗಿದೆ ಎನ್ನುವುದು ಆ ವಿದ್ಯಾರ್ಥಿಗಳು ಈಗಿರುವ ಸ್ಥಿತಿಯನ್ನು ದೂರದಿಂದ ಅವರಿವರಿಂದ ಗೊತ್ತಿರುವ ತಂತ್ರಜ್ಞಾನದ ಮೂಲಕ ನೋಡಿದಾಗಲೇ ನಾನು ಶಿಕ್ಷಕನಾಗಿ ಉತ್ತಮ ಸೇವೆ ಸಲ್ಲಿಸಿದ್ದೇನೆ ಎನ್ನುವ ಆನಂದ ನನ್ನ ಮನಸ್ಸಿಗೆ ಇದೆ. ಅಲ್ಲಲ್ಲಿ ಆಗಾಗ ಸಿಗುವ ಆ ಅರಳಿದ ಕುಸುಮಗಳಿಗೆ ನಮ್ಮ ನೆನಪು ಮಾಸಿರಬಹುದು ಇಲ್ಲಾ ಭಯದ ಭಾವವೋ ಇಲ್ಲಾ ಓದು ಕಲಿಯಲು ನಾವು ಹಣ ನೀಡಿದ್ದೇವೆ ಎನ್ನುವ ಹಣದ ಮದದಲ್ಲಿ ಸಾಗುವ ಕೆಲವರ ನಡೆಗೆ ಬೇಸರವು ಮೂಡುತ್ತದೆ. ಅದೇನೇ ಇರಲಿ ಅವರೆಲ್ಲ ನನ್ನ ವಿದ್ಯಾರ್ಥಿಗಳಿಗೆ ಅವರು ಚನ್ನಾಗಿ ಬದುಕು ಕಟ್ಟಿಕೊಂಡು ಸಾಗಲಿ ಎನ್ನುವ ಆಶಯ ಹಾಗೂ ಆಶೀರ್ವಾದ ಇದ್ದೆ ಇರುತ್ತದೆ.




## ಮುಂದಿನ ದಶಕದ ಹತ್ತು ಜಾಗತಿಕ ಸವಾಲುಗಳು

ವಿಶ್ವ ಆರ್ಥಿಕ ವೇದಿಕೆಯು (World Economic Forum)ತನ್ನ ಇತ್ತೀಚಿನ ?ಜಾಗತಿಕ ಅಪಾಯಗಳ ವರದಿ 2026?ರಲ್ಲಿ ಒಂದು ಎಚ್ಚರಿಕೆಯ ನುಡಿಯನ್ನಾಡಿದೆ: "ನಾವು ಇಂದು ತೆಗೆದುಕೊಳ್ಳುವ ನಿರ್ಧಾರಗಳು ಮುಂದಿನ ದಶಕದಲ್ಲಿ ಮಾನವಕುಲದ ಉಳಿವಿನ ಹಾದಿಯನ್ನು ನಿರ್ಧರಿಸಲಿವೆ." ಕೇವಲ ಆರ್ಥಿಕ ಲಾಭ-ನಷ್ಟಗಳ ಆಚೆಗೆ ಯೋಚಿಸಿ, ಜಗತ್ತು ಎದುರಿಸುತ್ತಿರುವ ನೈಸರ್ಗಿಕ ಮತ್ತು ತಾಂತ್ರಿಕ ಬಿಕ್ಕಟ್ಟುಗಳನ್ನು ಈ ವರದಿ ಎಳೆಎಳೆಯಾಗಿ ಬಿಚ್ಚಿಟ್ಟಿದೆ.

ಮುಂದಿನ ಹತ್ತು ವರ್ಷಗಳಲ್ಲಿ, ಅಂದರೆ 2036ರ ವೇಳೆಗೆ ಜಗತ್ತು ಯಾವ ರೀತಿಯ ಸ್ಥಿತ್ಯಂತರಗಳಿಗೆ ಸಾಕ್ಷಿಯಾಗಲಿದೆ ಮತ್ತು ನಾವು ಎದುರಿಸಲಿರುವ ಹತ್ತು ಪ್ರಮುಖ ಅಪಾಯಗಳು ಯಾವುವು ಎಂಬುದರ ಬಗ್ಗೆ ಈ ವರದಿ ಚರ್ಚಿಸುತ್ತದೆ .

ಈ ಹತ್ತು ಅಂಶಗಳು ಹೇಗೆ ಪರಸ್ಪರ ಸಂಬಂಧ ಹೊಂದಿವೆ ಮತ್ತು ಇವುಗಳನ್ನು ಎದುರಿಸಲು ಇರುವ ದಾರಿಗಳೇನು ಎಂಬುದನ್ನು ಈ ವರದಿಯಲ್ಲಿ ಉಲ್ಲೇಖಿಸಲಾಗಿದೆ.

1. ಅತಿರೇಕದ ಹವಾಮಾನ ವೈಪರೀತ್ಯಗಳು (Extreme Weather Events)
ಇಂದು ನಾವು ನೋಡುತ್ತಿರುವ ಅಕಾಲಿಕ ಮಳೆ ಮತ್ತು ವಿಪರೀತ ಸೆಖೆ ಕೇವಲ ಆರಂಭವಷ್ಟೇ. 2036ರ ವೇಳೆಗೆ, ವಾತಾವರಣದ ಉಷ್ಣಾಂಶ ಏರಿಕೆಯಿಂದಾಗಿ ಚಂಡಮಾರುತಗಳ ತೀವ್ರತೆ ಹೆಚ್ಚಾಗಲಿದೆ. ಇದು ಕೇವಲ ಪ್ರಕೃತಿ ವಿಕೋಪವಲ್ಲ, ಇದು ದೇಶಗಳ ಆರ್ಥಿಕತೆಯ ಬೆನ್ನೆಲುಬಾದ ಮೂಲಸೌಕರ್ಯಗಳನ್ನು (ರಸ್ತೆ, ಸೇತುವೆ, ವಿದ್ಯುತ್ ಸಂಪರ್ಕ) ನಾಶಪಡಿಸುವ ಶಕ್ತಿ ಹೊಂದಿದೆ.



* **ಪರಿಹಾರ:** 'ಕ್ಲೈಮೇಟ್-ರೆಸಿಲಿಯಂಟ್' (ಹವಾಮಾನ ಸ್ಥಿತಿಸ್ಥಾಪಕತ್ವ) ಮೂಲಸೌಕರ್ಯಗಳ ನಿರ್ಮಾಣ. ಅಂದರೆ, ಪ್ರವಾಹ ಅಥವಾ ಭೂಕಂಪ ಬಂದರೂ ಕುಸಿಯದಂತಹ ತಂತ್ರಜ್ಞಾನ ಬಳಸಿ ಕಟ್ಟಡಗಳನ್ನು ಕಟ್ಟುವುದು. ಜೊತೆಗೆ, ಕೃಷಿಯಲ್ಲಿ ಹವಾಮಾನಕ್ಕೆ ತಕ್ಕಂತೆ ಬೆಳೆ ಬದಲಿಸುವ ಮುನ್ಸೂಚನಾ ವ್ಯವಸ್ಥೆ ಜಾರಿಗೆ ಬರಬೇಕು.

2. ಜೀವವೈವಿಧ್ಯದ ನಾಶ ಮತ್ತು ಪರಿಸರ ವ್ಯವಸ್ಥೆಯ ಕುಸಿತ
ಪ್ರತಿ ವರ್ಷ ಸಾವಿರಾರು ಪ್ರಾಣಿ-ಪಕ್ಷಿ ಸಂಕುಲಗಳು ನಾಶವಾಗುತ್ತಿವೆ. ಜೇನುನೊಣಗಳಂತಹ ಪರಾಗಸ್ಪರ್ಶಕಗಳು ನಾಶವಾದರೆ, ಮನುಷ್ಯನಿಗೆ ಆಹಾರವೇ ಸಿಗದಂತಾಗುತ್ತದೆ. ಪರಿಸರ ವ್ಯವಸ್ಥೆಯು ಒಂದು ಎಳೆಯನ್ನು ಕಳೆದುಕೊಂಡರೂ ಇಡೀ ಜಾಲವೇ ಕುಸಿಯುತ್ತದೆ.

* **ಪರಿಹಾರ:** 'ನೇಚರ್-ಪಾಸಿಟಿವ್' ಆರ್ಥಿಕತೆ. ಅರಣ್ಯಗಳನ್ನು ಕೇವಲ ಕಡಿಯುವುದಲ್ಲ, ಕಡಿದ ಪ್ರಮಾಣಕ್ಕಿಂತ ಹೆಚ್ಚಿನ ಮರಗಳನ್ನು ಬೆಳೆಸುವುದು ಮತ್ತು ರಾಸಾಯನಿಕ ಮುಕ್ತ ಕೃಷಿಯನ್ನು ಉತ್ತೇಜಿಸುವ ಮೂಲಕ ಮಣ್ಣಿನ ಜೀವಗುಣವನ್ನು ಉಳಿಸುವುದು.

3. ಭೂಮಿಯ ವ್ಯವಸ್ಥೆಯಲ್ಲಿನ ನಿರ್ಣಾಯಕ ಬದಲಾವಣೆಗಳು
ಆರ್ಕ್ಟಿಕ್ ಮಂಜುಗಡ್ಡೆಗಳು ಕರಗುತ್ತಿರುವುದರಿಂದ ಸಮುದ್ರದ ಮಟ್ಟ ಏರುತ್ತಿದೆ. ಇದು ಕರಾವಳಿ ನಗರಗಳಾದ ಮುಂಬೈ, ನ್ಯೂಯಾರ್ಕ್ ಮತ್ತು ಲಂಡನ್‌ಗಳ ಅಸ್ತಿತ್ವಕ್ಕೇ ಸಂಚಕಾರ ತರಲಿದೆ. ಸಾಗರಗಳ ಆಮ್ಲೀಕರಣದಿಂದಾಗಿ ಮೀನುಗಾರಿಕೆ ಉದ್ಯಮವು ನಾಶವಾಗುವ ಭೀತಿಯಿದೆ.

* **ಪರಿಹಾರ:** ಕಾರ್ಬನ್ ಎಮಿಷನ್ (ಇಂಗಾಲದ ಹೊರಸೂಸುವಿಕೆ) ಅನ್ನು ಶೂನ್ಯ ಮಟ್ಟಕ್ಕೆ (Net Zero) ತರುವುದು. ಸಮುದ್ರದ ಅಲೆಗಳಿಂದ ಮತ್ತು ಸೌರಶಕ್ತಿಯಿಂದ ಹೆಚ್ಚಿನ ವಿದ್ಯುತ್ ಉತ್ಪಾದಿಸಿ, ಪಳೆಯುಳಿಕೆ ಇಂಧನಗಳ ಅವಲಂಬನೆಯನ್ನು ಪೂರ್ಣವಾಗಿ ಕೈಬಿಡುವುದು.



4. ತಪ್ಪು ಮಾಹಿತಿ ಮತ್ತು ಸುಳ್ಳು ಸುದ್ದಿಗಳ ಹಾವಳಿ
ಡಿಜಿಟಲ್ ಕ್ರಾಂತಿಯ ಅಡ್ಡಪರಿಣಾಮವೇ ಸುಳ್ಳು ಸುದ್ದಿಗಳು. ಎಐ ಮೂಲಕ ಸೃಷ್ಟಿಸುವ 'ಡೀಪ್‌ಫೇಕ್' ವಿಡಿಯೋಗಳು ಸಮಾಜದಲ್ಲಿ ದ್ವೇಷ ಬಿತ್ತಲು ಅಥವಾ ದೇಶಗಳ ನಡುವೆ ಯುದ್ಧ ಹಚ್ಚಲು ಬಳಕೆಯಾಗಬಹುದು. ಇದು ಸಾರ್ವಜನಿಕ ನಂಬಿಕೆಯನ್ನು ಪೂರ್ಣವಾಗಿ ನಾಶಪಡಿಸುತ್ತದೆ.

* **ಪರಿಹಾರ:** ಬ್ಲಾಕ್‌ಚೈನ್ ತಂತ್ರಜ್ಞಾನದ ಮೂಲಕ ಮಾಹಿತಿಯ ಮೂಲವನ್ನು ಪತ್ತೆಹಚ್ಚುವುದು. ಶಾಲಾ ಹಂತದಲ್ಲೇ ಮಕ್ಕಳಿಗೆ 'ಮಾಧ್ಯಮ ಸಾಕ್ಷರತೆ' ಕಲಿಸುವುದು, ಇದರಿಂದ ಅವರು ನಿಜವಾದ ಸುದ್ದಿ ಮತ್ತು ಪ್ರಚಾರದ ನಡುವಿನ ವ್ಯತ್ಯಾಸ ತಿಳಿಯಬಹುದು.

5. ಕೃತಕ ಬುದ್ಧಿಮತ್ತೆಯ (AI) ಪ್ರತಿಕೂಲ ಪರಿಣಾಮಗಳು
ಎಐ ಕೇವಲ ಕೆಲಸಗಳನ್ನು ಸುಲಭ ಮಾಡುವುದಿಲ್ಲ, ಅದು ಲಕ್ಷಾಂತರ ಜನರನ್ನು ನಿರುದ್ಯೋಗಿಗಳನ್ನಾಗಿಸಬಹುದು. ಅಲ್ಲದೆ, ಯುದ್ಧಗಳಲ್ಲಿ ಬಳಸುವ ಸ್ವಯಂಚಾಲಿತ ಡ್ರೋನ್‌ಗಳು ಮನುಷ್ಯನ ನಿಯಂತ್ರಣ ಮೀರಿದರೆ ಭೀಕರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ.

* **ಪರಿಹಾರ:** 'ಹ್ಯೂಮನ್-ಇನ್-ದಿ-ಲೂಪ್' (Human-in-the-loop) ತತ್ವ. ಅಂದರೆ, ಯಾವುದೇ ಪ್ರಮುಖ ನಿರ್ಧಾರಗಳನ್ನು ತೆಗೆದುಕೊಳ್ಳುವಾಗ ಎಐ ಜೊತೆಗೆ ಮನುಷ್ಯನ ಅಂತಿಮ ಒಪ್ಪಿಗೆ ಇರಲೇಬೇಕು. ಜೊತೆಗೆ ಎಐ ತಂತ್ರಜ್ಞಾನದ ಮೇಲೆ ಕಟ್ಟುನಿಟ್ಟಾದ ಜಾಗತಿಕ ನಿಯಂತ್ರಣ ಸಂಸ್ಥೆ ಇರಬೇಕು.

6. ನೈಸರ್ಗಿಕ ಸಂಪನ್ಮೂಲಗಳ ಕೊರತೆ
ಲಿಥಿಯಂ, ಕೋಬಾಲ್ಟ್ ನಂತಹ ಅಪರೂಪದ ಖನಿಜಗಳು ಮತ್ತು ಕುಡಿಯುವ ನೀರಿನ ಕೊರತೆಯು ಭವಿಷ್ಯದಲ್ಲಿ 'ಸಂಪನ್ಮೂಲ ಯುದ್ಧ'ಗಳಿಗೆ ಕಾರಣವಾಗಬಹುದು. ಆಹಾರಕ್ಕಾಗಿ ಭೂಮಿಯ ಮೇಲಿನ ಒತ್ತಡ ಹೆಚ್ಚಾಗಲಿದೆ.

* **ಪರಿಹಾರ:** 'ಸರ್ಕ್ಯುಲರ್ ಎಕಾನಮಿ' (Circular Economy). ಅಂದರೆ, ಬಳಸಿದ ವಸ್ತುಗಳನ್ನು ಎಸೆಯದೆ ಅವುಗಳನ್ನು ಮರುಬಳಕೆ (Recycle) ಮಾಡುವುದು. ಉದಾಹರಣೆಗೆ, ಹಳೆಯ ಫೋನ್‌ಗಳಿಂದ ಖನಿಜಗಳನ್ನು ಹೊರತೆಗೆದು ಹೊಸ ಫೋನ್ ಮಾಡುವುದು.

7. ಅಸಮಾನತೆ (ಸಂಪತ್ತು ಮತ್ತು ಆದಾಯ)
ವಿಶ್ವದ 1% ರಷ್ಟು ಜನರ ಬಳಿ 90% ಸಂಪತ್ತು ಇರುವುದು ಸಾಮಾಜಿಕ ಅಸ್ಥಿರತೆಗೆ ಕಾರಣವಾಗುತ್ತದೆ. ಇದು ಬಡ ರಾಷ್ಟ್ರಗಳಿಂದ ಶ್ರೀಮಂತ ರಾಷ್ಟ್ರಗಳಿಗೆ ಬೃಹತ್ ಪ್ರಮಾಣದ ವಲಸೆಯನ್ನು (Migration) ಸೃಷ್ಟಿಸುತ್ತದೆ, ಇದು ಗಡಿ ಸಂಘರ್ಷಗಳಿಗೆ ದಾರಿಯಾಗುತ್ತದೆ.

* **ಪರಿಹಾರ:** ಪ್ರಗತಿಪರ ತೆರಿಗೆ ವ್ಯವಸ್ಥೆ ಮತ್ತು ಸಾರ್ವತ್ರಿಕ ಮೂಲ ಆದಾಯ (Universal Basic Income) ನಂತಹ ಯೋಜನೆಗಳ ಬಗ್ಗೆ ಚರ್ಚೆ ನಡೆಸಬೇಕು. ಬಡ ರಾಷ್ಟ್ರಗಳ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಹೂಡಿಕೆ ಮಾಡುವ ಮೂಲಕ ಜಾಗತಿಕ ಮಟ್ಟದಲ್ಲಿ ಸಮಾನತೆ ತರಬೇಕು.

8. **ಸೈಬರ್ ಅಸುರಕ್ಷತೆ**
ಇಡೀ ಪ್ರಪಂಚವು ಇಂಟರ್ನೆಟ್ ಮೂಲಕ ಬೆಸೆದಿದೆ. ಒಂದು ಸಣ್ಣ ಸೈಬರ್ ದಾಳಿಯು ಇಡೀ ದೇಶದ ಬ್ಯಾಂಕಿಂಗ್ ವ್ಯವಸ್ಥೆ ಅಥವಾ ವಿದ್ಯುತ್ ಗ್ರಿಡ್ ಅನ್ನು ಸ್ಥಗಿತಗೊಳಿಸಬಹುದು. 2036ರ ವೇಳೆಗೆ ಸೈಬರ್ ಕ್ರಿಮಿನಲ್‌ಗಳು ಅತ್ಯಾಧುನಿಕ ತಂತ್ರಜ್ಞಾನ ಹೊಂದಿರಲಿದ್ದಾರೆ.

* ಪರಿಹಾರ: 'ಝೀರೋ ಟ್ರಸ್ಟ್ ಆರ್ಕಿಟೆಕ್ಚರ್' (Zero Trust Architecture) ಸುರಕ್ಷತಾ ವ್ಯವಸ್ಥೆ ಅಳವಡಿಕೆ. ಪ್ರತಿಯೊಂದು ಡಿಜಿಟಲ್ ವ್ಯವಹಾರವನ್ನೂ ಹಂತ ಹಂತವಾಗಿ ಪರಿಶೀಲಿಸುವ ವ್ಯವಸ್ಥೆ ಇರಬೇಕು ಮತ್ತು ಅಂತರಾಷ್ಟ್ರೀಯ ಸೈಬರ್ ಅಪರಾಧ ತಡೆ ಪಡೆ ರಚನೆಯಾಗಬೇಕು.

9. ಸಾಮಾಜಿಕ ಧ್ರುವೀಕರಣ (Societal Polarisation)
ಜನರು ತಮ್ಮ ಸಿದ್ಧಾಂತಗಳ ಆಧಾರದ ಮೇಲೆ ಎರಡು ಗುಂಪುಗಳಾಗಿ ಒಡೆಯುತ್ತಿದ್ದಾರೆ. ಇದು ಪರಸ್ಪರ ಗೌರವ ಮತ್ತು ಚರ್ಚೆಯ ಸಂಸ್ಕೃತಿಯನ್ನು ನಾಶಪಡಿಸುತ್ತಿದೆ. ಇದರೊಂದಿಗೆ, ಜನರ ನಡುವೆ ಸೈದ್ಧಾಂತಿಕ ಭಿನ್ನಾಭಿಪ್ರಾಯಗಳು ಹೆಚ್ಚಾಗಿ 'ಸಮಾಜದ ಧ್ರುವೀಕರಣ' (Societal Polarisation) ಉಂಟಾಗಲಿದೆ. ಇದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಧಕ್ಕೆ ತರುವ ಅಪಾಯವಿದೆ. ಇದು ಅಂತರ್ಯುದ್ಧಗಳಿಗೆ ಮತ್ತು ಪ್ರಜಾಪ್ರಭುತ್ವದ ಪತನಕ್ಕೆ ಕಾರಣವಾಗಬಹುದು. ಇದನ್ನು ನಾವು ಆಗಲೇ ನಮ್ಮ ನೆರೆ ರಾಷ್ಟ್ರಗಳಲ್ಲಿ ಕಾಣಬಹುದು .

* **ಪರಿಹಾರ:** ಸ್ಥಳೀಯ ಮಟ್ಟದಲ್ಲಿ ಸಮುದಾಯಗಳ ಒಕ್ಕೂಟ ರಚನೆ. ವಿಭಿನ್ನ ಆಲೋಚನೆಗಳ ಜನರ ನಡುವೆ ಸಂವಹನ ಏರ್ಪಡಿಸುವುದು ಮತ್ತು ದ್ವೇಷ ಭಾಷಣಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸುವುದು.

10. ಮಾಲಿನ್ಯ
ಪ್ಲಾಸ್ಟಿಕ್ ಮಾಲಿನ್ಯವು ಸಮುದ್ರದ ತಳದಿಂದ ಹಿಡಿದು ನಾವು ಉಸಿರಾಡುವ ಗಾಳಿಯವರೆಗೆ ಹರಡಿದೆ. ಮೈಕ್ರೋ-ಪ್ಲಾಸ್ಟಿಕ್‌ಗಳು ಮಾನವನ ರಕ್ತದಲ್ಲಿ ಕಂಡುಬರುತ್ತಿರುವುದು ಆತಂಕಕಾರಿ ವಿಷಯ. ಇದು ಕ್ಯಾನ್ಸರ್‌ನಂತಹ ರೋಗಗಳ ಹೆಚ್ಚಳಕ್ಕೆ ಕಾರಣವಾಗುತ್ತಿದೆ.

* ಪರಿಹಾರ: ಸಿಂಗಲ್ ಯೂಸ್ ಪ್ಲಾಸ್ಟಿಕ್ ಅನ್ನು ಜಾಗತಿಕವಾಗಿ ಸಂಪೂರ್ಣ ನಿಷೇಧಿಸುವುದು. ಕೈಗಾರಿಕೆಗಳು ಹೊರಸೂಸುವ ತ್ಯಾಜ್ಯ ನೀರನ್ನು ಶುದ್ಧೀಕರಿಸುವುದನ್ನು ಕಡ್ಡಾಯಗೊಳಿಸುವುದು ಮತ್ತು ಪರಿಸರ ಸ್ನೇಹಿ ಪರ್ಯಾಯಗಳನ್ನು (ಉದಾಹರಣೆಗೆ ಸೆಣಬಿನ ಚೀಲಗಳು) ಬಳಸುವುದಕ್ಕೆ ಪ್ರೋತ್ಸಾಹ ನೀಡುವುದು.

ಈ ಹತ್ತು ಅಪಾಯಗಳು ನಮಗೆ ನೀಡುತ್ತಿರುವ ಸಂದೇಶವೊಂದೇ, ನಾವು ನಮ್ಮ ಜೀವನಶೈಲಿ ಮತ್ತು ಆಡಳಿತ ಪದ್ಧತಿಯನ್ನು ಬದಲಿಸಿಕೊಳ್ಳದಿದ್ದರೆ, 2036ರ ಜಗತ್ತು ನಮಗೆ ವಾಸಿಸಲು ಯೋಗ್ಯವಾಗಿರುವುದಿಲ್ಲ. ವಿಜ್ಞಾನದ ಅನ್ವೇಷಣೆ ಮತ್ತು ಮನುಷ್ಯತ್ವದ ವಿವೇಚನೆ ಒಂದಾದಾಗ ಮಾತ್ರ ಈ ಸವಾಲುಗಳನ್ನು ಜಯಿಸಲು ಸಾಧ್ಯ.



ರಚನೆ : ಸ್ವಾಮಿನಾಥನ್
ಮೊಬೈಲ್ : 9880041516
Email : Swamynathann@gmail.com



## ಕಾಶಿಯ ಲತಾ.... ಮಂಗಳ ಕಪೂರ್ ಗೆ ಪದ್ಮಶ್ರೀ ಪುರಸ್ಕಾರ



ವೀಣಾ ಹೇಮಂತ್‌ಗೌಡ ಪಾಟೀಲ್

ಆಕೆಯ ಮುಖಕ್ಕೆ ಆಸಿಡ್ ಎರಚಿ ಆಕೆಯ ಬದುಕನ್ನೇ ನಾಶ ಮಾಡಿದಾಗ ಆಕೆಗೆ ಕೇವಲ 12 ವರ್ಷ ವಯಸ್ಸು.

ಆಟವಾಡಿಕೊಂಡು ಇರಬೇಕಾದ ಹುಡುಗಿ, ರಂಗು ರಂಗಿನ ಕನಸುಗಳನ್ನು ಕಾಣುತ್ತಾ ಭವಿಷ್ಯದ ಹೊಂಗನಸುಗಳಿಗೆ ಲಗ್ಗೆ ಹಾಕಬೇಕಾದ ವಯಸ್ಸಿನಲ್ಲಿ, ಅಪಾರವಾದ ನೋವು ಮತ್ತು ಭಯದಿಂದ ಹತ್ತು ಹಲವಾರು ಆಸ್ಪತ್ರೆಗಳ ಮೆಟ್ಟಿಲುಗಳನ್ನು ಹತ್ತಿ ಇಳಿಯಬೇಕಾಯಿತು. ಹೆಚ್ಚು ಕಡಿಮೆ 37 ಶಸ್ತ್ರ ಚಿಕಿತ್ಸೆಗಳನ್ನು ಆಕೆಯ ದೇಹ ಪಡೆದುಕೊಂಡಿತು.


ದೈಹಿಕವಾಗಿ ಆದ ನೋವುಗಳನ್ನು ಆಕೆ ಹೇಗೋ ತಡೆದುಕೊಂಡಳು... ಆದರೆ ಸಾಮಾಜಿಕವಾಗಿ ವಿಪರೀತ ನೋವನ್ನು ಅನುಭವಿಸಿದಳು. ಆಕೆಯನ್ನು ನೋಡಿದೊಡನೆ ಮುಖ ತಿರುಗಿಸುವ, ಹೆದರಿ ಓಡಿ ಹೋಗುವ ಜನರು ತಮ್ಮ ಮಕ್ಕಳನ್ನು ಹೆದರಿಸಲು ಗುಮ್ಮನನ್ನು ಕರೆಯುವಂತೆ ಆಕೆಯನ್ನು ಕರೆಸುತ್ತೇನೆ ನೋಡು ಎಂದು ಹೆದರಿಸುತ್ತಿದ್ದರು ಎಷ್ಟೋ ಜನ ಆಕೆಯ ತಾಯಿಗೆ ಮಗುವಿಗೆ ವಿಷ ಕೊಟ್ಟು ಕೊಲ್ಲಲು ಸಲಹೆ ನೀಡಿದ್ದರು.

ಆದರೆ ಮಂಗಳ ಕಪೂರ್ ಎಂಬ ಆ ಬಾಲಕಿ ದೇಹಕ್ಕಾದ ದುರಂತ ತನ್ನ ಬದುಕನ್ನು ವಿಭಿನ್ನವಾಗಿ ಅರ್ಥೈಸಲು ಬಿಡಲಿಲ್ಲ. ಇದರಿಂದ ಆಕೆ ಕೊಂಚವೂ ವಿಚಲಿತವಾಗದಿರಲು ಕಾರಣವಾದದ್ದು ಬಟ್ಟೆ ವ್ಯಾಪಾರಿಯಾದ ಆಕೆಯ ತಂದೆ. ತನ್ನ ಮಗಳು ಇರುವಂತೆಯೇ ಆಕೆಯನ್ನು ಒಪ್ಪಿಕೊಂಡ ತಂದೆ ಸರಿಸುಮಾರು 6 ವರ್ಷಗಳ ಕಾಲ ಆಕೆಯ ಆಸ್ಪತ್ರೆವಾಸದಲ್ಲಿ ತಾಯಿ ಆಕೆಗೆ ಜೊತೆಯಾದರೆ ತಂದೆ ಆಕೆಯ ಮುಂದಿನ ಶಿಕ್ಷಣದ ವ್ಯವಸ್ಥೆ ಮಾಡಿದ.

ನೋವು ಹಾಗೂ ಗಾಢ ಅಂಧಕಾರದಲ್ಲಿ ತನ್ನ ಬದುಕು ಮುಳುಗಿದ ಸಮಯದಲ್ಲಿಯೂ ಕೂಡ ಆಕೆ ಸಂಗೀತವನ್ನು ತನ್ನ ಜೀವನದ ಬೆಳ್ಳಿರೇಖೆಯನ್ನಾಗಿಸಿದಳು. ಆಕೆಯ ಧ್ವನಿಯೇ ಆಕೆಯ ಬದುಕಿನ ದುರಂತದ ಪರಿಣಾಮವಾಗಿ ಉಂಟಾದ ಹತಾಶೆಗೆ ದಂಗೆಯೇಳಲು ಪ್ರೇರೇಪಿಸಿತು.

ಇಡೀ ಜಗತ್ತು ಆಕೆಯನ್ನು ಸಂಶಯದ ದೃಷ್ಟಿಯಿಂದ ನೋಡಿದಾಗ ತಲೆಕೆಡಿಸಿಕೊಳ್ಳದ ಆಕೆ ತನ್ನನ್ನು ತಾನು ಓದಿನಲ್ಲಿ ತೊಡಗಿಸಿಕೊಂಡು ಪದವಿಯನ್ನು ಪೂರ್ಣಗೊಳಿಸಿದಳು. ನಂತರ ಸ್ನಾತಕೋತ್ತರ ಪದವಿಯನ್ನು ಪಡೆದ ಆಕೆ ಬನಾರಸ್ ಹಿಂದೂ ವಿಶ್ವವಿದ್ಯಾಲಯದಲ್ಲಿ ಸಂಗೀತದಲ್ಲಿ ಪಿ ಎಚ್ ಡಿ ಪ್ರಬಂಧವನ್ನು ಮಂಡಿಸಿ ಡಾಕ್ಟರೇಟ್ ಪಡೆದರು.

1989 ರಲ್ಲಿ ಆಕೆ ಶಿಕ್ಷಕಿಯಾಗಿ ಕಾರ್ಯನಿರ್ವಹಿಸಲು ಆರಂಭಿಸಿ ಸತತ ಮೂರು ದಶಕಗಳ ಕಾಲ ವಿದ್ಯಾರ್ಥಿಗಳ ಹೃದಯ ಮತ್ತು ಮನಸ್ಸನ್ನು ಆಳುವ ಸಂಗೀತವನ್ನು ಕಲಿಸಿದರು. ಸಂಗೀತವೆಂಬ ಸಾಧನದ ಮೂಲಕ ಸಾಮಾಜಿಕ ಬದಲಾವಣೆಯನ್ನು ತರಲು ಸಾಧ್ಯ ಎಂದು ಜನರಿಗೆ ತೋರಿಸಿ ಕೊಟ್ಟರು. 2019ರಲ್ಲಿ ನಿವೃತ್ತರಾದ ಆಕೆ ಇಂದಿಗೂ ಕೂಡ ಮಕ್ಕಳಿಗೆ ಉಚಿತವಾಗಿ ಸಂಗೀತ



ಪಾಠವನ್ನು ಹೇಳಿಕೊಡುತ್ತಿದ್ದಾರೆ.

ಸಂಗೀತದಲ್ಲಿ ಅತ್ಯಂತ ಹಳೆಯ ಘರಾನೆಯಾದ ಗ್ವಾಲಿಯರ್ ಘರಾನ ಸಂಗೀತಗಾರ್ತಿಯಾದ ಆಕೆಯನ್ನು ಕಾಶಿಯ ಲತಾ ಎಂದು ಕರೆಯುತ್ತಾರೆ. ವಿಶೇಷವಾದ ಹಳೆಯ ರಾಗಗಳನ್ನು ಗುರುತಿಸಿ ಅವುಗಳನ್ನು ದಾಖಲಿಸುವ ಕಾರ್ಯವನ್ನು ಮಂಗಳ ಅವರು ಮಾಡಿದ್ದಾರೆ.

ಅತ್ಯಂತ ಹಳೆಯ ಗ್ವಾಲಿಯರ್ ಪರಂಪರೆಯ ಹಾಡುಗಾರ್ತಿಯಾಗಿರುವ ಆಕೆ ಬದುಕು ತನ್ನ ಮುಖವನ್ನು ಕಸಿದುಕೊಂಡಿದೆಯೇ ಹೊರತು ನನ್ನ ಧ್ವನಿಯನ್ನಲ್ಲ ಎಂದು ಅಭಿಮಾನದಿಂದ ಹೇಳುವ ಆಕೆ ತನ್ನ ವಿದ್ಯಾರ್ಥಿಗಳಿಗೆ ಅಂಗವಿಕಲತೆ ಎಂಬುದು ನಮ್ಮ ದೇಹದಲ್ಲಿರುವುದಿಲ್ಲ ಬದಲಾಗಿ ಅದು ನಮ್ಮ ಮನಸ್ಸಿನಲ್ಲಿ ಇರುತ್ತದೆ. ಅದನ್ನು ನಾವು ಗೆಲ್ಲಬೇಕು ಎಂದು ಆಕೆ ಹೇಳುತ್ತಾರೆ

ಎಸಿಡ್ ದಾಳಿಗೆ ಒಳಗಾದ ಮೊದಲ ವ್ಯಕ್ತಿ ಎಂದು ಆಕೆಯನ್ನು ಸಮಾಜ ಗುರುತಿಸಿತ್ತು. ಇದೀಗ ಆಕೆ ಅದೇ ಸಾಮಾಜಿಕ ನಿಯಮಾವಳಿಗಳನ್ನು ತನ್ನ ಅದ್ಭುತವಾದ ಹಾಡುಗಾರಿಕೆಯಿಂದ ಮುರಿದಿದ್ದು ಇದೀಗ 2026 ನೇ ಸಾಲಿನ ಪದ್ಮಶ್ರೀ ಪ್ರಶಸ್ತಿ ಪುರಸ್ಕಾರವು ಅವರಿಗೆ ದೊರೆತಿದೆ.

ಉಳಿಯುವಿಕೆಯ ಹೋರಾಟದಿಂದ ಆರಂಭವಾದ ಆಕೆಯ ಬದುಕಿನ ಪಯಣ ಮಹೋನ್ನತ ಪದವಿಯವರೆಗೆ ಸಾಗಿತು. ದುರಂತದಿಂದ ಜಯಭೇರಿಯತ್ತ ಸಾಗಿತು. ಆಕೆಯ ಸಾಮರ್ಥ್ಯವನ್ನು ಒರೆಗೆ ಹಚ್ಚುವ, ಸ್ಥಿರತೆಯನ್ನು, ಧೈರ್ಯ ಹಾಗೂ ಮಾನವೀಯ ಬದುಕಿನ ಉತ್ಸಾಹಗಳನ್ನು ಪರೀಕ್ಷಿಸುವ

ನಿಟ್ಟಿನಲ್ಲಿ ಬದುಕು ಎಲ್ಲ ರೀತಿಯ ಸವಾಲುಗಳನ್ನು ಒಡ್ಡಿತ್ತು. ಆ ಎಲ್ಲ ಸವಾಲುಗಳಿಗೆ ತಮ್ಮ ಸಂಗೀತದ ಮೂಲಕವೇ ಮಂಗಳ ಉತ್ತರ ನೀಡಿದರು.

ಇದೀಗ ಇಡೀ ದೇಶವು ಆಕೆಯ ಅಸಾಧಾರಣ ಬದುಕಿನ ಕಥೆ ಹಾಗೂ ಅಚಲ ಆತ್ಮವಿಶ್ವಾಸ, ಶ್ರದ್ಧಾಪೂರ್ವಕ ಕಾರ್ಯ ಚಟುವಟಿಕೆಗಳನ್ನು ಗುರುತಿಸಿ ಆಕೆಗೆ ಪದ್ಮಶ್ರೀ ಪ್ರಶಸ್ತಿಯನ್ನು ನೀಡಿ ಗೌರವಿಸುತ್ತಿದೆ.

ತನ್ನದೆ ಸುಟ್ಟ ಬೂದಿಯಿಂದ ಮತ್ತೆ ಹುಟ್ಟನ್ನು ಪಡೆಯುವ ಫೀನಿಕ್ಸ್ ಹಕ್ಕಿಯಂತೆ ಬದುಕು ನೀಡಿದ ಹತ್ತು ಹಲವಾರು ಹೊಡೆತಗಳನ್ನು ಎದುರಿಸಿ ಮತ್ತೆ ಬದುಕನ್ನು ಎದುರಿಸಲು ಹೊರಡುವ ಛಾತಿ ಮಂಗಳ ಅವರದು. ಸಂಗೀತದ ಕುರಿತದ ನಾಲ್ಕು ಹೆಚ್ಚು ಕೃತಿಗಳು ಹಾಗೂ ಒಂದು ಆತ್ಮಕಥೆಯನ್ನು ಆಕೆ ಬರೆದಿದ್ದಾರೆ.

ತಮಗಾದ ನೋವನ್ನೇ ಬದುಕಿನ ಒಂದು ಗುರಿ ಸಾಧನೆಗೆ ಉದ್ದೇಶವನ್ನಾಗಿಸಿಕೊಂಡು ಕೇವಲ ತಮ್ಮ ಬದುಕನ್ನು ಮಾತ್ರವಲ್ಲದೆ ಸಾವಿರಾರು ವಿದ್ಯಾರ್ಥಿಗಳ ಬದುಕನ್ನು ರೂಪಿಸಿದ ಡಾಕ್ಟರ್ ಮಂಗಳ ಕಪೂರ್ ಅವರು ಖಂಡಿತವಾಗಿಯೂ ಅಭಿನಂದನೆಗೆ ಅರ್ಹರು. ಅವರಿಗೆ ಈ ಪ್ರಶಸ್ತಿಯನ್ನು ನೀಡುವ ಮೂಲಕ ಸರ್ಕಾರ ಅಂತಹ ಎಲ್ಲಾ ಆಸಿಡ್ ದಾಳಿಗೊಳಗಾದ ಮಹಿಳೆಯರ ಸಮ್ಮಾನವನ್ನು ರಕ್ಷಿಸುವ ನಿಟ್ಟಿನಲ್ಲಿ ಅಭಿನಂದನಾರ್ಹ ಕಾರ್ಯನಿರ್ವಹಿಸಿದೆ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,